ಸಂಪುಟ: 06 ಸಂಚಿಕೆ: 206 ಪುಟಗಳು: 08 ಭಾನುವಾರ 11 ಅಕ್ಟೋಬರ್ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com



ಯಾ ದೇವಿ ಸರ್ವ ಭೂತೇಷು
ಶೈಲಪುತ್ರಿ ರೂಪೇಣ ಸಂಸ್ಥಿತಾ
ನಮಸ್ತಸ್ಯೈ ನಮಸ್ತಸ್ಯೈ
ನಮಸ್ತಸ್ಯೈ ನಮೋ ನಮಃ

ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 + 91 8035621249 ₹5

# ಉದಯ ವಾಹಿನಿ

ಸರ್ವ ಸಮಾನತೆಯ
ಕನ್ನಡ ದಿನಪತ್ರಿಕೆ

## ಬೆಂಗಳೂರಿನ ಬಸವನಗರ ಮುಖ್ಯರಸ್ತೆಯಲ್ಲಿ 20 ದಿನಗಳ ಸಂಚಾರ ನಿರ್ಬಂಧ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಬಸವನಗರ ಮುಖ್ಯರಸ್ತೆಯಲ್ಲಿ ವಿಭೂತಿಪುರ ಕೆರೆ ಕಾಲುವೆಗೆ ಸೇತುವೆ ನಿರ್ಮಾಣ ಕಾಮಗಾರಿ ಕೈಗೆತ್ತಿಕೊಳ್ಳುತ್ತಿರುವ ಹಿನ್ನೆಲೆಯಲ್ಲಿ ಇಂದಿನಿಂದ ಸುಮಾರು 20 ದಿನಗಳ ಕಾಲ ಸಂಚಾರ ನಿರ್ಬಂಧ ವಿಧಿಸಲಾಗಿದೆ. ಈ ಕುರಿತು ಬೆಂಗಳೂರು ಸಂಚಾರ ಪೊಲೀಸರು ವಾಹನ ಸವಾರರಿಗೆ ಸೂಚನೆ ನೀಡಿದ್ದು, ಕಾಮಗಾರಿ ಅವಧಿಯಲ್ಲಿ ಸಂಚಾರ ದಟ್ಟಣೆ ತಪ್ಪಿಸಲು ಪರ್ಯಾಯ ಮಾರ್ಗಗಳನ್ನು ಬಳಸುವಂತೆ ಮನವಿ ಮಾಡಿದ್ದಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದಿಂದ ಸೇತುವೆ ನಿರ್ಮಾಣ ಕಾಮಗಾರಿ ನಡೆಯಲಿದ್ದು, ಎಚ್‌ಎಎಲ್ ಏರ್‌ಪೋರ್ಟ್ ಸಂಚಾರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸಂಚಾರ ಮಾರ್ಗ ಬದಲಾವಣೆ ಜಾರಿಗೊಳಿಸಲಾಗಿದೆ.

ಇದರಿಂದ ಮಾರತ್ತಹಳ್ಳಿ, ಎಚ್‌ಎಎಲ್, ವಿಭೂತಿಪುರ, ಬಸವನಗರ, ವಿಜ್ಞಾನ ನಗರ, ಕಗ್ಗದಾಸಪುರ, ಮಲ್ಲೇಶಪಾಳ್ಯ ಹಾಗೂ ಬಿಇಎಂಎಲ್ ಭಾಗಗಳ ನಡುವೆ ಸಂಚರಿಸುವ ವಾಹನ ಸವಾರರು ಪರ್ಯಾಯ ಮಾರ್ಗಗಳನ್ನು ಅವಲಂಬಿಸಬೇಕಾಗಿದೆ. ಮಾರತ್ತಹಳ್ಳಿ, ಎಚ್‌ಎಎಲ್, ವಿಭೂತಿಪುರ ಮತ್ತು ಬಸವನಗರ ಕಡೆಯಿಂದ ವಿಜ್ಞಾನ ನಗರ, ಕಗ್ಗದಾಸಪುರ, ಮಲ್ಲೇಶಪಾಳ್ಯ ಹಾಗೂ ಬಿಇಎಂಎಲ್ ಕಡೆಗೆ ತೆರಳುವ ಭಾರೀ ಸರಕು ಸಾಗಣೆ ವಾಹನಗಳು, ಸಾಗಣೆ ವಾಹನಗಳ ಸಂಚಾರಕ್ಕೆ ನಿರ್ಬಂಧ ವಿಧಿಸಲಾಗಿದೆ. ಅದೇ ರೀತಿ, ವಿಜ್ಞಾನ ನಗರ, ಕಗ್ಗದಾಸಪುರ, ಮಲ್ಲೇಶಪಾಳ್ಯ ಮತ್ತು ಬಿಇಎಂಎಲ್ ಕಡೆಯಿಂದ ವಿಭೂತಿಪುರ, ಮಾರತ್ತಹಳ್ಳಿ ಕಡೆಗೆ ಬರುವ ವಾಹನಗಳ ಸಂಚಾರಕ್ಕೂ ನಿರ್ಬಂಧ ಇರಲಿದೆ.

## ರಾಜ್ಯ ಸರ್ಕಾರಿ ಬಸ್‌ಗಳಿಗೆ ಕೊನೆಗೂ ಡೀಸೆಲ್ ಭಾಗ್ಯ

• ಉದಯವಾಹಿನಿ, ಬೆಂಗಳೂರು

ಬರಗಾಲದ ನಡುವೆ ಬಸ್‌ಗಳಿಗೆ ಡಿಸೇಲ್ ಅಭಾವದ ಉಂಟಾಗಿದ್ದ ಬೆನ್ನಲ್ಲೇ ಸರ್ಕಾರ ಕೊನೆಗೂ ಎಚ್ಚೆತ್ತುಕೊಂಡಿದ್ದು, ರಾಜ್ಯದ 4 ನಿಗಮದ ಬಸ್‌ಗಳ ಡಿಸೇಲ್‌ಗಾಗಿ 100 ಕೋಟಿ ರೂ. ಹಣವನ್ನು ಬಿಡುಗಡೆ ಮಾಡಿದೆ.

ಕೆಎಸ್‌ಆರ್‌ಟಿಸಿಗೆ-18.90 ಕೋಟಿ ರೂ., ಬಿಎಂಟಿಸಿಗೆ 62.53 ಕೋಟಿ ರೂ., ಎನ್‌ಡಬ್ಲ್ಯೂಕೆಎಸ್‌ಆರ್‌ಟಿಸಿ-7.96 ಕೋಟಿ ರೂ. ಹಾಗೂ ಕೆಕೆಆರ್‌ಟಿಸಿಗೆ-10.61 ಕೋಟಿ ರೂ.ಯಂತೆ ಒಟ್ಟು 100 ಕೋಟಿ ರೂ. ಅನುದಾನ ಬಿಡುಗಡೆ ಮಾಡಿದೆ. ಹಿಂದೂಸ್ಥಾನ್ ಪೆಟ್ರೋಲಿಯಂ ಕಾರ್ಪೋರೇಷನ್ ಲಿಮಿಟೆಡ್‌ಗೆ (ಹೆಚ್‌ಪಿಸಿಎಲ್) 1124.91 ಕೋಟಿ ರೂ. ಡಿಸೇಲ್ ಹಣವನ್ನು ಸಾರಿಗೆ ಇಲಾಖೆ ನೀಡಬೇಕಿದೆ. ಇದೀಗ 100 ಕೋಟಿ ರೂ. ರಿಲೀಸ್ ಆಗಿರೋ ಹಿನ್ನೆಲೆ, ಇನ್ನೂ 1004 ಕೋಟಿ ರೂ. ಹಣವನ್ನು ಸಾರಿಗೆ ಇಲಾಖೆ ಬಾಕಿ ಉಳಿಸಿಕೊಂಡ ಹಾಗೆ ಆಗಿದೆ. ಇನ್ನೂ ಸರ್ಕಾರದಿಂದ ಅಕ್ಟೋಬರ್ ತಿಂಗಳ ಶಕ್ತಿ ಅನುದಾನವನ್ನು ಸರ್ಕಾರ ಬಿಡುಗಡೆಗೊಳಿಸಿದ್ದು, ನಾಲ್ಕು ಸಾರಿಗೆ ನಿಗಮಗಳಿಗೆ 430 ಕೋಟಿ ರಿಲೀಸ್ ಆಗಿದೆ. ಹಾಗೆಯೇ ಜೂನ್, ಜುಲೈ, ಆಗಸ್ಟ್ ಹಾಗೂ ಸೆಪ್ಟೆಂಬರ್ ತಿಂಗಳ ಶಕ್ತಿ ಹಣದ ವೆಚ್ಚದಲ್ಲಿ 2,15,000 ಲಕ್ಷ ರೂಪಾಯಿ ಮುಂಗಡ ಬಿಡುಗಡೆಗೆ ಆದೇಶಿಸಿದೆ.

## ಸ್ಟಿಂಗ್ ಆಪರೇಷನ್ ಕೇಸ್ ಸರ್ಕಾರವೇ ಸುಮೋಟೋ ಕೇಸ್ ದಾಖಲಿಸಿಕೊಳ್ಳಲಿ

• ಉದಯವಾಹಿನಿ, ಬೆಂಗಳೂರು

ಸ್ಟಿಂಗ್ ಆಪರೇಷನ್ ಬಗ್ಗೆ ಬಿಜೆಪಿ ನಾಯಕರು ದೂರು ಕೊಡಲಿ ಎಂದ ಸಚಿವ ಪ್ರಿಯಾಂಕ್ ಖರ್ಗೆಗೆ ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ತಿರುಗೇಟು ನೀಡಿದ್ದಾರೆ.

ಬೆಂಗಳೂರಿನಲ್ಲಿ ಮಾತಾಡಿದ ಅವರು, ಪ್ರಿಯಾಂಕ್ ಖರ್ಗೆ ಮೊದಲು ಕಾನೂನು ತಿಳಿದುಕೊಳ್ಳಲಿ. ಪೊಲೀಸ್ ಇಲಾಖೆ ಸುಮೋಟೋ ಕೇಸ್ ದಾಖಲಿಸಿಕೊಳ್ಳಲಿ. ದೂರು ಕೊಟ್ಟೇ ತನಿಖೆ ಮಾಡಬೇಕು ಅಂತಾ ಇಲ್ಲ. ಅನ್ಯ ಮಾರ್ಗಗಳನ್ನು ಅನುಸರಿಸದವರು ಭಯ ಪಡಬೇಕಾಗಿಲ್ಲ. ಕುಂಬಳಕಾಯಿ ಕಳ್ಳರ ರೀತಿಯಲ್ಲಿ ಕಾಂಗ್ರೆಸ್ ನಡೆದುಕೊಳ್ಳುತ್ತಿದೆ. ತನಿಖೆ ಮಾಡಬೇಕಾದ ಮುಖ್ಯಮಂತ್ರಿಗಳೇ ಯಾಕೆ ಇದನ್ನು ಹರಿಬಿಟ್ಟರು ಅಂತ ವಾಗ್ದಾಳಿ ನಡೆಸಿದ್ದಾರೆ. ಸರ್ಕಾರವೇ ಸುಮೋಟೋ ಕೇಸ್ ದಾಖಲಿಸಿಕೊಂಡು, ಸ್ಟಿಂಗ್ ಆಪರೇಷನ್ ಕೇಸ್ ಬಗ್ಗೆ ತನಿಖೆ ಮಾಡಲಿ ಎಂದು ಆಗ್ರಹಿಸಿದ್ದಾರೆ. ಈ ಬಗ್ಗೆ ಅಧಿಕಾರಿಗಳು ಪ್ರಶ್ನಿಸಿದಾಗ ಆರೋಪಗಳನ್ನ ತಳ್ಳಿ ಹಾಕಿದ್ದರು.

## ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ಸಿಜೆಪಿ ಸಂಸ್ಥಾಪಕ ಅಭಿಜಿತ್ ದೀಪ್ಕೆ ಹಾಗೂ ಸೌರವ್ ದಾಸ್ ಮತ್ತು ಅಶುತೋಷ್ ರಾಂಕಾ ಅವರು ಮುಂಬೈನಿಂದ ದೆಹಲಿ ವಿಮಾನ ನಿಲ್ದಾಣಕ್ಕೆ ತಲುಪಿದ ತಕ್ಷಣವೇ ಪೊಲೀಸರು ಅವರನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಪ್ರತಿಭಟನೆ ಹತ್ತಿಕ್ಕುವ ನಿಟ್ಟಿನಲ್ಲಿ ಪೊಲೀಸರು ಈ ಕ್ರಮ ಕೈಗೊಂಡಿದ್ದಾರೆ. ಪಶ್ಚಿಮಘಟ್ಟ ಉಳಿಸಿ ಉತ್ತರ ಕನ್ನಡ ರಕ್ಷಿಸಿ ಶೀರ್ಷಿಕೆಯಡಿ ಬೇಡ್ತಿ ಅಘನಾಶಿನಿಕೊಳ್ಳ ಸಂರಕ್ಷಣಾ ಸಮಿತಿ ನೇತೃತ್ವದಲ್ಲಿ ನಡೆದ ಜನಾಕ್ರೋಶದ ಸಭೆಯಲ್ಲಿ ಬೆಂಗಳೂರಿನಲ್ಲಿರುವ ಸಾವಿರಾರು ಉತ್ತರ ಕನ್ನಡದ ಜನರು ಭಾಗವಹಿಸಿದ್ದರು.

ಈ ಮೂಲಕ ಯೋಜನೆಗೆ ಸಂಬಂಧಿಸಿದಂತೆ ಸರ್ಕಾರದ ಕಡೆಯಿಂದ ನಡೆಯುತ್ತಿರುವ ಡಿಪಿಎಆರ್‌ನ್ನು ಕೂಡಲೇ ರದ್ದುಪಡಿಸಿ, ಉತ್ತರ ಕನ್ನಡದ ನದಿಗಳು ಹಾಗೂ ಜನರ ಜೀವ ಸಂರಕ್ಷಿಸಬೇಕು ಎನ್ನುವ ನಿರ್ಣಯಕ್ಕೆಗೊಂಡರು. ಇನ್ನು ಪ್ರತಿಭಟನಾ ಸಭೆಯಲ್ಲಿ 11 ಪ್ರಮುಖ ನಿರ್ಧಾರಗಳನ್ನು ಒಕ್ಕೊರಲಿನಿಂದ ತೆಗೆದುಕೊಳ್ಳಲಾಗಿದೆ.

ಕಾಕ್ರೋಚ್ ಜನತಾ ಪಾರ್ಟಿ ಸಂಸ್ಥಾಪಕ ಅಭಿಜೀತ್ ದಿಪ್ಕೆ ಹಾಗೂ ಹಿರಿಯ ನಾಯಕರಾದ ಸೌರವ್ ದಾಸ್ ಮತ್ತು ಆಶುತೋಷ್ ರಂಕಾ ಅವರನ್ನು ಮುಂಬೈನಿಂದ ದೆಹಲಿಗೆ ಆಗಮಿಸಿದ ವಿಮಾನದಲ್ಲೇ ಪೊಲೀಸರು ವಶಕ್ಕೆ ಪಡೆದಿದ್ದಾರೆ ಎಂದು ಸಂಘಟನೆ ಹೇಳಿದೆ. ವಿಮಾನದಲ್ಲಿದ್ದ ನಾಯಕರನ್ನು ಪೊಲೀಸರು ವಿಚಾರಿಸುತ್ತಿದ್ದ ದೃಶ್ಯಗಳು ದೂರದರ್ಶನದಲ್ಲಿ ಪ್ರಸಾರವಾಗಿವೆ. ಈ ಸಂದರ್ಭದಲ್ಲಿ ಅಭಿಜೀತ್ ದಿಪ್ಕೆ ನನ್ನನ್ನು ಬಂಧಿಸಲು ನಾನು ಬಂದಿದ್ದೇನೆ. ಬಂಧಿಸಿ... ನಿಮ್ಮ ಬಗ್ಗೆ ನನಗೆ ಭಯವಿಲ್ಲ ಎಂದು ಪೊಲೀಸರಿಗೆ ಸವಾಲು ಹಾಕಿದ್ದಾರೆ. ಶನಿವಾರದ ಪ್ರತಿಭಟನೆಯನ್ನು ದುರ್ಬಲಗೊಳಿಸುವ ಉದ್ದೇಶದಿಂದ ತಮ್ಮ ನಾಯಕರನ್ನು ಪೂರ್ವಯೋಜಿತವಾಗಿ ತಡೆದು ವಶಕ್ಕೆ ಪಡೆಯಲಾಗಿದೆ ಎಂದು ಕಾಕ್ರೋಚ್ ಜನತಾ ಪಾರ್ಟಿ ಆರೋಪಿಸಿದೆ. ನಾಯಕರ ಬಂಧನವನ್ನು ಸರ್ವಾಧಿಕಾರಿ ಧೋರಣೆಯ ಕ್ರಮ ಎಂದು ಖಂಡಿಸಿರುವ ಸಂಘಟನೆ, ಅವರನ್ನು ತಕ್ಷಣ ಬಿಡುಗಡೆ ಮಾಡುವಂತೆ ಒತ್ತಾಯಿಸಿದೆ. ಸುಮಾರು ಎರಡು ಕೋಟಿ ಜನಸಂಖ್ಯೆ ಹೊಂದಿರುವ ದೆಹಲಿಯಲ್ಲಿ ಪ್ರತಿಭಟನೆಯನ್ನು ನಿಯಂತ್ರಿಸಲು ಹಲವು ಪ್ರದೇಶಗಳಲ್ಲಿ ನಿರ್ಬಂಧಗಳನ್ನು ವಿಧಿಸಲಾಗಿದೆ. ನಗರದ 45 ಮೆಟ್ರೋ ನಿಲ್ದಾಣಗಳು ಮತ್ತು ಮಾರುಕಟ್ಟೆಗಳನ್ನು ಮುಚ್ಚಲಾಗಿದ್ದು, ಕೇಂದ್ರ ವಾಣಿಜ್ಯ ಪ್ರದೇಶದಲ್ಲಿ ಮೊಬೈಲ್ ಇಂಟರ್ನೆಟ್ ಸೇವೆಯನ್ನು ಸ್ಥಗಿತಗೊಳಿಸಲಾಗಿದೆ. ನಗರ ಪ್ರವೇಶಿಸುವ ಪ್ರಮುಖ ಮಾರ್ಗಗಳಲ್ಲಿ ಪೊಲೀಸರು ವಾಹನಗಳನ್ನು ತಡೆದು ಪರಿಶೀಲನೆ ನಡೆಸಿದರು. ಬಸ್‌ಗಳನ್ನು ಹತ್ತಿ ಪ್ರಯಾಣಿಕರನ್ನು ತಪಾಸಣೆ ಮಾಡುವುದರ ಜತೆಗೆ ಕಾರುಗಳು ಸೇರಿದಂತೆ ಇತರ ವಾಹನಗಳನ್ನೂ ಪರಿಶೀಲಿಸಲಾಯಿತು ಎಂದು ರಾಯಿಟರ್ಸ್ ವರದಿ ತಿಳಿಸಿದೆ.

# ದೆಹಲಿ ಸಂಘರ್ಷ ಭುಗಿಲೆದ್ದ ಆಕ್ರೋಶ





### ಪೊಲೀಸರ ಜೊತೆ ವಾಗ್ವಾದ

- ಸಂಘರ್ಷದ ಕಣವಾದ ದೆಹಲಿ
- ಕನ್ನಾಟ್ ಪ್ಲೇಸ್‌ನಲ್ಲಿ ಕಲ್ಲು ತೂರಾಟ, ಇಬ್ಬರು ಪೊಲೀಸರ ಸ್ಥಿತಿ ಗಂಭೀರ!
- ಜಂತರ್‌ಮಂತರ್‌ನಲ್ಲಿ ಸಿಜೆಪಿ ಪ್ರತಿಭಟನೆಗೂ ಮುನ್ನವೇ ಗುರುಗ್ರಾಮ್‌ನಲ್ಲಿ
- ಯೂಟ್ಯೂಬರ್ ಧ್ರುವ್ ರಾಠಿ ಬಂಧನ!

### ಮತದಾರರ ಪಟ್ಟಿ ಪರಿಷ್ಕರಣೆ ವಿವಾದ

ಭಾರತದ ಮತದಾರರ ಪಟ್ಟಿಗಳ ಪರಿಷ್ಕರಣೆ ಪ್ರಕ್ರಿಯೆ ಕುರಿತು ರಾಜಕೀಯ ವಲಯದಲ್ಲಿ ವಿವಾದ ತೀವ್ರಗೊಂಡಿದೆ. ಈ ಪ್ರಕ್ರಿಯೆಯು ಆಡಳಿತಾರೂಢ ಬಿಜೆಪಿಗೆ ಅನುಕೂಲವಾಗುವ ಸಾಧ್ಯತೆಯಿದೆ ಎಂದು ವಿರೋಧಿಗಳು ಆರೋಪಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡಬೇಕು ಎಂದು ಯುವ ಚಳವಳಿ ಆಗ್ರಹಿಸಿದೆ. ಪ್ರತಿಭಟನೆಯನ್ನು ತಡೆಯಲು ಕೈಗೊಂಡಿರುವ ಪೊಲೀಸ್ ಕ್ರಮಗಳು, ನಾಯಕರ ವಶ ಹಾಗೂ ಸಾರ್ವಜನಿಕ ಸಂಚಾರ ಮತ್ತು ಇಂಟರ್ನೆಟ್ ಸೇವೆಗಳ ಮೇಲಿನ ನಿರ್ಬಂಧಗಳು ದೆಹಲಿಯಲ್ಲಿ ಉದ್ವಿಗ್ನ ವಾತಾವರಣ ನಿರ್ಮಿಸಿವೆ.



• ಉದಯವಾಹಿನಿ, ದೆಹಲಿ

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹಿಸಿ ಕಾಕ್ರೋಚ್ ಜನತಾ ಪಾರ್ಟಿ ಹಮ್ಮಿಕೊಂಡಿದ್ದ ಜಂತರ್ ಮಂತರ್ ಪ್ರತಿಭಟನೆ ಶುರುವಾಗೋದಕ್ಕೆ ಮುನ್ನವೇ ಮೂವರು ಮಾಜಿ ಸಿಎಂ ಸೇರಿ 2,000ಕ್ಕೂ ಹೆಚ್ಚು ಪ್ರತಿಭಟನಾಕಾರರನ್ನ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಸಿಜೆಪಿಗೆ ಬೆಂಬಲ ಸೂಚಿಸಿ ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲು ಬಂದಿದ್ದ ಮೂವರು ಪ್ರಮುಖ ಮಾಜಿ ಮುಖ್ಯಮಂತ್ರಿಗಳನ್ನ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಅವರಲ್ಲಿ ಅರವಿಂದ್ ಕೇಜ್ರಿವಾಲ್ ( ಮಾಜಿ ಸಿಎಂ), ಮಮತಾ ಬ್ಯಾನರ್ಜಿ (ಪಶ್ಚಿಮ ಬಂಗಾಳದ ಮಾಜಿ ಸಿಎಂ) ಮತ್ತು ಪಿಣರಾಯಿ ವಿಜಯನ್ (ಕೇರಳದ ಮಾಜಿ ಸಿಎಂ) ಸೇರಿದ್ದಾರೆ. ಸಿಜೆಪಿ ಸಂಸ್ಥಾಪಕ ಅಭಿಜೀತ್ ದೀಪ್ಕೆ ಹಾಗೂ ಸೌರವ್ ದಾಸ್ ಮತ್ತು ಅಶುತೋಷ್ ರಾಂಕಾ ಅವರು ಮುಂಬೈನಿಂದ ದೆಹಲಿ ವಿಮಾನ ನಿಲ್ದಾಣಕ್ಕೆ ತಲುಪಿದ ತಕ್ಷಣವೇ ಪೊಲೀಸರು ಅವರನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಪ್ರತಿಭಟನೆ ಹತ್ತಿಕ್ಕುವ ನಿಟ್ಟಿನಲ್ಲಿ ಪೊಲೀಸರು ಈ ಕ್ರಮ ಕೈಗೊಂಡಿದ್ದಾರೆ. ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸಲು ಪೊಲೀಸರು ಅನುಮತಿ ನಿರಾಕರಿಸಿದ್ದು, ಮುಂಜಾಗ್ರತಾ ಕ್ರಮವಾಗಿ ದೆಹಲಿ, ಸಿಆರ್‌ಪಿಎಫ್, ಬಿಎಸ್‌ಎಫ್ ಮತ್ತು ಆರ್‌ಎಎಫ್ ಸೇರಿದಂತೆ 20,000ಕ್ಕೂ ಹೆಚ್ಚು ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ನಗರದ ಹಲವೆಡೆ ಕಟ್ಟೆಚ್ಚರವಹಿಸಲಾಗಿದೆ.

ದೇಶದಲ್ಲಿ ನಡೆದ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಭಾರೀ ಅಕ್ರಮಗಳು ನಡೆದಿವೆ ಎಂದು ಆರೋಪಿಸಿ, ಮುಖ್ಯ ಚುನಾವಣಾ ಆಯುಕ್ತರು ಕೂಡಲೇ ರಾಜೀನಾಮೆ ನೀಡಬೇಕೆಂದು ಒತ್ತಾಯಿಸಿ ಈ ಬೃಹತ್ ಜಂತರ್ ಮಂತರ್ 2.0 ಚಳವಳಿಯನ್ನು ಆಯೋಜಿಸಲಾಗಿದೆ.

ಕಾಂಗ್ರೆಸ್, ಎಎಪಿ ಹಾಗೂ ತೃಣಮೂಲ ಕಾಂಗ್ರೆಸ್ ಸೇರಿದಂತೆ ಹಲವು ಪಕ್ಷಗಳ ನಾಯಕರು ಸೇರಿದಂತೆ ಅನೇಕರು ಈ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದಾರೆ.

ಇನ್ನು, ಸಿಜೆಪಿ ಪ್ರತಿಭಟನೆಯನ್ನು ಹತ್ತಿಕ್ಕಲು ದೆಹಲಿಯಲ್ಲಿ ಭದ್ರತಾ ಬಂದೋಬಸ್ತ್ ಮಾಡುವ ಜೊತೆಗೆ ಇಡೀ ದೆಹಲಿಯಲ್ಲಿ ಬರೋಬ್ಬರಿ 45 ಮೆಟ್ರೋ ನಿಲ್ದಾಣ ಬಂದ್ ಮಾಡಿ ದೆಹಲಿ ಸರ್ಕಾರ ಕ್ರಮಕೈಗೊಂಡಿದೆ.

ಕೇಂದ್ರ ಸರ್ಕಾರದ ವಿರುದ್ಧ ನಿನ್ನೆಯಷ್ಟೇ ಧ್ರುವ್ ರಾಠಿ ಕಿಡಿಕಾರಿದ್ದು, ಪ್ರತಿಭಟನೆಗೆ ಹೆದರಿ ದೆಹಲಿಯನ್ನು ಲಾಕ್‌ಡೌನ್ ಮಾಡಲಾಗುತ್ತಿದೆ ಎಂದು ಆರೋಪಿಸಿದ್ದರು. ಈ ಕುರಿತು ಸೋಶಿಯಲ್ ಮೀಡಿಯಾ ಮೂಲಕ ಪೋಸ್ಟ್ ಹಂಚಿಕೊಂಡಿದ್ದ ಧ್ರುವ್ ಸ್ನೇಹಿತರೇ, ಹೇಗಿದ್ದೀರಿ? ನಾನು ದೆಹಲಿಗೆ ಬಂದಿದ್ದೇನೆ.

ಮತ್ತು ನಮ್ಮ ಪ್ರಧಾನಿ ಇಲ್ಲಿ ಯಾವ ವ್ಯವಸ್ಥೆಗಳನ್ನು ಮಾಡಿದ್ದಾರೆಂದು ನಾನು ನೋಡಿದೆ. 50 ಕ್ಕೂ ಹೆಚ್ಚು ಮೆಟ್ರೋ ನಿಲ್ದಾಣಗಳನ್ನು ಮುಚ್ಚಲಾಗಿದೆ. ಪ್ರತಿಭಟನೆ ಹತ್ತಿಕ್ಕುವ ನಿಟ್ಟಿನಲ್ಲಿ ಪೊಲೀಸರು ಈ ಕ್ರಮ ಕೈಗೊಂಡಿದ್ದಾರೆ. ರೈಲುಗಳು, ಬಸ್ಸುಗಳನ್ನು ರದ್ದುಪಡಿಸಲಾಗಿದೆ. ನಮ್ಮ ಪ್ರತಿಭಟನೆಗಳಿಂದಾಗಿ ಕೇಂದ್ರ ದೆಹಲಿಯನ್ನು ಬಹುತೇಕ ಲಾಕ್‌ಡೌನ್ ಮಾಡುತ್ತಿದ್ದಾರೆ ಎಂದು ಕಿಡಿಕಾರಿದ್ದಾರೆ.

## ರಸ್ತೆಗಿಳಿದ ಸಿಜೆಪಿ ಹೋರಾಟಾಗರರು ಪೊಲೀಸ್ ವಶಕ್ಕೆ

ಚುನಾವಣಾ ಆಯುಕ್ತ ಗ್ಯಾನೇಶ್ ಕುಮಾರ್ ರಾಜೀನಾಮೆ ಆಗ್ರಹಿಸಿ ಕಾಕ್ರೋಚ್ ಜನತಾ ಪಾರ್ಟಿ ಆಯೋಜಿಸಿದ್ದ ದೆಹಲಿ ಹೋರಾಟ ಠುಸ್ ಆಗಿದೆ. ದೆಹಲಿ ಪೊಲೀಸರಿಂದ ಅನುಮತಿ ಸಿಗದಿದ್ದರೂ ಹೋರಾಟಕ್ಕೆ ಮುಂದಾಗಿದ್ದ ಸಿಜೆಪಿ ಕಾರ್ಯಕರ್ತರನ್ನು, ನಾಯಕರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಅಭಿಜಿತ್ ದೀಪ್ಕೆ ಸೇರಿದಂತೆ ಸಿಜೆಪಿ ನಾಯಕರನ್ನು ಪೊಲೀಸರು ವಶಕ್ಕೆ ಪಡೆಯುತ್ತಿದ್ದಂತೆ, ಇತ್ತ ಬೆಂಗಳೂರಿನಲ್ಲಿ ಸಿಜೆಪಿ ಕಾರ್ಯ ಬೆಂಗಳೂರಿನಲ್ಲಿ ಸಿಜೆಪಿ ಕಾರ್ಯಕರ್ತರು ರಸ್ತೆ ತಡೆದು ಪ್ರತಿಭಟನೆಗೆ ಮುಂದಾಗಿದ್ದಾರೆ. ಇದಕ್ಕೆ ಪೊಲೀಸರು ಅವಕಾಶ ನೀಡಿಲ್ಲ.

ಹೀಗಾಗಿ ಪೊಲೀಸರ ಜೊತೆ ಸಿಜೆಪಿ ಕಾರ್ಯಕರ್ತರು ವಾಗ್ವಾದ ನಡೆಸಿದ್ದಾರೆ. ಪರಿಸ್ಥಿತಿ ಕೈಮೀರುತ್ತಿದ್ದಂತೆ ಸಿಜೆಪಿ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ದೆಹಲಿ ಮಾದರಿಯಲ್ಲಿ ಸಿಜೆಪಿ ಕಾರ್ಯಕರ್ತರು ಬ್ಯಾರಿಕೇಡ್ ಹತ್ತಿ ಪ್ರತಿಭಟನೆಗೆ ಮುಂದಾಗಿದ್ದಾರೆ. ಸಿಜೆಪಿ ಕಾರ್ಯಕರ್ತರು ಹೋರಾಟಕ್ಕೆ ತಯಾರಿ ತೀವ್ರಗೊಳ್ಳುತ್ತಿದ್ದಂತೆ ಪೊಲೀಸರು ಅಲರ್ಟ್ ಆಗಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಕಾಕ್ರೋಚ್ ಜನತಾ ಪಾರ್ಟಿ ಕಾರ್ಯಕರ್ತರು ರಸ್ತೆಗೆ ನುಗ್ಗಲು ಯತ್ನಿಸಿದ್ದಾರೆ. ಹೀಗಾಗಿ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಪ್ರತಿಭಟನಾ ಕಾರರರನ್ನು ತಡೆಯಲು ಬ್ಯಾರಿಕೇಡ್ ಅಳವಡಿಸಲಾಗಿತ್ತು. ಆದರೆ ಸಿಜೆಪಿ ಹೋರಾಟಗಾರರು ಬ್ಯಾರಿಕೇಡ್ ಹತ್ತಿ ಪೊಲೀಸರ ಜೊತೆ ವಾಗ್ವಾದ ನಡೆಸಿದ್ದಾರೆ.

### ಅಪ್ಸರಾ ಗಡಿಯಲ್ಲಿ ಕಟ್ಟೆಚ್ಚರ

ದೆಹಲಿಯ ಜಂತರ್ ಮಂತರ್‌ನಲ್ಲಿ ಸಿಜೆಪಿ ಪ್ರತಿಭಟನೆಗೆ ಕರೆ ನೀಡಿರುವ ಹಿನ್ನೆಲೆಯಲ್ಲಿ ಅಪ್ಸರಾ ಗಡಿಯಲ್ಲಿ ಭದ್ರತಾ ಪಡೆಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ನಿಯೋಜಿಸಲಾಗಿದೆ. ಪರಿಸ್ಥಿತಿಯ ಮೇಲೆ ನಿಗಾ ಇರಿಸಲು ಡ್ರೋನ್‌ಗಳನ್ನೂ ಬಳಸಲಾಗುತ್ತಿದೆ. ಶಹದಾರಾ ಡಿಸಿಪಿ ರಾಜೇಂದ್ರ ಪ್ರಸಾದ್ ಮೀನಾ ಮಾತನಾಡಿ, ಗಡಿಯಲ್ಲಿ ಕಟ್ಟುನಿಟ್ಟಿನ ಭದ್ರತಾ ಕ್ರಮಗಳನ್ನು ಜಾರಿಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ.

ವಾಣಿಜ್ಯ ವಾಹನಗಳಿಗೆ ನಿಗದಿತ ಸಮಯದಲ್ಲಿ ಮಾತ್ರ ಸಂಚರಿಸಲು ಅವಕಾಶ ನೀಡಲಾಗುತ್ತಿದ್ದು, ಸಂಪೂರ್ಣ ತಪಾಸಣೆಯ ಬಳಿಕವೇ ಅವುಗಳನ್ನು ಬಿಡಲಾಗುತ್ತಿದೆ. ಹೆಚ್ಚುವರಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದ್ದು, ಸೂಕ್ಷ್ಮ ಪ್ರದೇಶಗಳಲ್ಲಿ ಗಸ್ತು ಹೆಚ್ಚಿಸಲಾಗಿದೆ ಎಂದಿದ್ದಾರೆ. ಪ್ರತಿಭಟನಾ ಸ್ಥಳದತ್ತ ತೆರಳದಂತೆ ಸಾರ್ವಜನಿಕರಿಗೆ ಪೊಲೀಸರು ಮನವಿ ಮಾಡುತ್ತಿದ್ದಾರೆ. ಸೂಚನೆ ಉಲ್ಲಂಘಿಸಿ ತೆರಳುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಎಚ್ಚರಿಕೆಯನ್ನೂ ನೀಡಿದ್ದಾರೆ. ದೆಹಲಿ ಪೊಲೀಸರು ಉತ್ತರ ಪ್ರದೇಶದ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿದ್ದಾರೆ.

ಉತ್ತರ ಪ್ರದೇಶದ ಕಡೆಯಲ್ಲಿಯೂ ತಪಾಸಣಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ವಾಹನಗಳನ್ನು ಪರಿಶೀಲಿಸಲಾಗುತ್ತಿದೆ ಎಂದು ಡಿಸಿಪಿ ತಿಳಿಸಿದ್ದಾರೆ. ಡ್ರೋನ್‌ಗಳು ಹಾಗೂ ಶಾಶ್ವತವಾಗಿ ಅಳವಡಿಸಿರುವ ಸಿಸಿಟಿವಿ ಕ್ಯಾಮೆರಾಗಳ ಮೂಲಕ ಪರಿಸ್ಥಿತಿಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಲಾಗುತ್ತಿದೆ. ಪೊಲೀಸ್ ಸಿಬ್ಬಂದಿ ವಿಡಿಯೋ ಮತ್ತು ಛಾಯಾಚಿತ್ರಗಳನ್ನು ದಾಖಲಿಸುತ್ತಿದ್ದು, ಗಡಿಯಲ್ಲಿ ನಿಯೋಜಿಸಲಾದ ಬಹುತೇಕ ಸಿಬ್ಬಂದಿಗೆ ಬಾಡಿ ವಾರ್ನ್ ಕ್ಯಾಮೆರಾಗಳನ್ನು ಒದಗಿಸಲಾಗಿದೆ ಎಂದು ಅವರು ಹೇಳಿದ್ದಾರೆ.

## ನಿಮಗೆ ನಾಚಿಕೆ ಯಾಗ ಬೇಕು

ದೆಹಲಿಯ ಜಂತರ್ ಮಂತರ್‌ನಲ್ಲಿ ಸಿಜೆಪಿ ಪ್ರತಿಭಟನೆ ನಡೆಯಬೇಕಿತ್ತು. ಆದರೆ ಪ್ರತಿಭಟನೆಗೂ ಮುನ್ನ ಕಾಕ್ರೋಚ್ ಜನತಾ ಪಾರ್ಟಿ ಸಂಸ್ಥಾಪಕ ಅಭಿಜೀತ್ ದೀಪಕ್ ಸೇರಿದಂತೆ ಹಲವು ನಾಯಕರನ್ನು ಬಂಧಿಸಲಾಗಿತ್ತು. ದೆಹಲಿ ವಿಮಾನ ನಿಲ್ದಾಣದಲ್ಲಿ ವಿಮಾನದೊಳಗೆ ಎಂಟ್ರಿ ಕೊಟ್ಟ ದೆಹಲಿ ಪೊಲೀಸರು ಅಭಿಜಿತ್ ದೀಪ್ಕೆ ಸೇರಿದಂತೆ ಸೌರವ್ ದಾಸ್ ಮತ್ತು ಅಶುತೋಷ್ ರಂಕಾನನ್ನು ಸಹ ವಶಕ್ಕೆ ಪಡೆದರು. ಅಭಿಜೀತ್ ದೀಪಕ್ ಬಂಧನದ ಸಮಯದಲ್ಲಿ ವಿಮಾನದಲ್ಲಿ ಹೈ-ವೋಲ್ಟೇಜ್ ನಾಟಕ ನಡೆಯಿತು.

ವಾಸ್ತವವಾಗಿ, ಸಿಜೆಪಿ ನಾಯಕ ಅಭಿಜೀತ್ ದೀಪಕ್ ತಮ್ಮ ಸಹಚರರಾದ ಸೌರವ್ ದಾಸ್ ಮತ್ತು ಅಶುತೋಷ್ ರಂಕಾನೊಂದಿಗೆ ಮುಂಬೈನಿಂದ ದೆಹಲಿಗೆ ಆಗಮಿಸಿದ್ದರು. ಬೆಳಿಗ್ಗೆ 10:18ರ ಸುಮಾರಿಗೆ ಅವರ ವಿಮಾನ ದೆಹಲಿಯ ಇಂದಿರಾ ಗಾಂಧಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಇಳಿಯಿತು. ಇಳಿದ ತಕ್ಷಣ, ದೆಹಲಿ ಪೊಲೀಸ್ ತಂಡ ಬಂದಿಳಿಯಿತು. ದೀಪ್ಕೆ ಮತ್ತು ಅವರ ತಂಡ ವಿಮಾನದಲ್ಲಿದ್ದಾಗ, ಮಹಿಳಾ ಪೊಲೀಸ್ ತಂಡ ಆಗಮಿಸಿತು. ದೆಹಲಿ ಪೊಲೀಸರು ಪ್ರತಿಭಟನೆಗೆ ಅನುಮತಿ ನೀಡದ ಕಾರಣ, ಅಭಿಜೀತ್ ದೀಪ್ಕೆನನ್ನು ಆರಂಭದಲ್ಲಿ ಜಂತರ್ ಮಂತರ್‌ಗೆ ಹೋಗದಂತೆ ಮನವೊಲಿಸಲಾಗಿತ್ತು ಎಂದು ಮೂಲಗಳು ತಿಳಿಸಿವೆ.



## ಅಯೋಧ್ಯೆಯಲ್ಲಿ ಅದೃಷ್ಟ ಪರಿಕ್ಷೆ ಮಾಡೋಣ ಬಾ: ಅಖಿಲೇಶ್ ಚಾಲೆಂಜ್ ಸ್ವೀಕರಿಸಿದ ಯೋಗಿ

• ಉದಯವಾಹಿನಿ, ನವದೆಹಲಿ

ಮುಂಬರುವ ಉತ್ತರ ಪ್ರದೇಶ ವಿಧಾನಸಭಾ ಚುನಾವಣೆಯಲ್ಲಿ ಅಯೋಧ್ಯೆ ಕ್ಷೇತ್ರದಿಂದ ಸ್ಪರ್ಧಿಸುವಂತೆ ಸಮಾಜವಾದಿ ಪಕ್ಷದ (ಎಸ್‌ಪಿ) ರಾಷ್ಟ್ರೀಯ ಅಧ್ಯಕ್ಷ ಅಖಿಲೇಶ್ ಯಾದವ್ ಅವರಿಗೆ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಸವಾಲು ಹಾಕಿದ್ದಾರೆ. ಅಖಿಲೇಶ್ ಅವರೇ ಅಯೋಧ್ಯೆಯಿಂದ ನಾಮಪತ್ರ ಸಲ್ಲಿಸಲಿ, ತಾವೂ ಅದೇ ಕ್ಷೇತ್ರದಿಂದ ಸ್ಪರ್ಧಿಸುವುದಾಗಿ ಯೋಗಿ ಹೇಳಿದ್ದಾರೆ. ಬಲರಾಂಪುರದಲ್ಲಿ ಮಾತನಾಡಿದ ಯೋಗಿ ಆದಿತ್ಯನಾಥ್, ಅಖಿಲೇಶ್ ಯಾದವ್ ಅವರು ಅಯೋಧ್ಯೆಯಿಂದ ಸ್ಪರ್ಧಿಸುವಂತೆ ತಮಗೆ ಸವಾಲು ಹಾಕಿದ್ದಾರೆ. ಅದಕ್ಕೆ ಪ್ರತಿಯಾಗಿ, ಅಖಿಲೇಶ್ ಅವರೂ ಅಯೋಧ್ಯೆಯಿಂದ ನಾಮಪತ್ರ ಸಲ್ಲಿಸಲಿ, ತಾವೂ ನಾಮಪತ್ರ ಸಲ್ಲಿಸುತ್ತೇನೆ.

ಇಬ್ಬರೂ ಒಮ್ಮೆ ತಮ್ಮ ಅದೃಷ್ಟ ಪರೀಕ್ಷಿಸೋಣ. ಮುಖಾಮುಖಿಯಾಗಿ ಸ್ಪರ್ಧಿಸಿ ತೀರ್ಮಾನಿಸೋಣ ಎಂದು ಆಹ್ವಾನ ನೀಡಿದ್ದಾರೆ. ಬಲರಾಂಪುರದಲ್ಲಿ ಮಾತನಾಡಿದ ಯೋಗಿ ಆದಿತ್ಯನಾಥ್, ಅಖಿಲೇಶ್



ಯಾದವ್ ಅವರು ಅಯೋಧ್ಯೆಯಿಂದ ಸ್ಪರ್ಧಿಸುವಂತೆ ತಮಗೆ ಸವಾಲು ಹಾಕಿದ್ದಾರೆ. ಅದಕ್ಕೆ ಪ್ರತಿಯಾಗಿ, ಅಖಿಲೇಶ್ ಅವರೂ ಅಯೋಧ್ಯೆಯಿಂದ ನಾಮಪತ್ರ ಸಲ್ಲಿಸಲಿ, ತಾವೂ ನಾಮಪತ್ರ ಸಲ್ಲಿಸುತ್ತೇನೆ. ಇಬ್ಬರೂ ಒಮ್ಮೆ ತಮ್ಮ ಅದೃಷ್ಟ ಪರೀಕ್ಷಿಸೋಣ. ಮುಖಾಮುಖಿಯಾಗಿ ಸ್ಪರ್ಧಿಸಿ ತೀರ್ಮಾನಿಸೋಣ ಎಂದು ಆಹ್ವಾನ ನೀಡಿದ್ದಾರೆ. ಇದೇ ವೇಳೆ ಅಯೋಧ್ಯೆಯ ಮಹತ್ವವನ್ನು ಉಲ್ಲೇಖಿಸಿದ ಯೋಗಿ ಆದಿತ್ಯನಾಥ್, ಅಯೋಧ್ಯೆ ಪವಿತ್ರ ಧಾರ್ಮಿಕ ಕ್ಷೇತ್ರವಾಗಿದ್ದು, ಅದನ್ನು ಕೇವಲ ರಾಜಕೀಯದ ದೃಷ್ಟಿಯಿಂದ ನೋಡಬಾರದು ಎಂದು ಹೇಳಿದ್ದಾರೆ.

ಅಯೋಧ್ಯೆ ನಮ್ಮ ಪವಿತ್ರ ಧಾಮ. ನಾವು ಅಲ್ಲಿಗೆ ರಾಜಕೀಯಕ್ಕಾಗಿ ಹೋಗುವುದಿಲ್ಲ ಅಭಿವೃದ್ಧಿಗಾಗಿ ಹೋಗುತ್ತೇವೆ ಎಂದು ಅವರು ತಿಳಿಸಿದ್ದಾರೆ. ಅಯೋಧ್ಯೆಯನ್ನು ರಾಜಕೀಯ ಸ್ಪರ್ಧೆಯ ಕ್ಷೇತ್ರವಾಗಿ ಮಾತ್ರ ಪರಿಗಣಿಸದೆ, ಧಾರ್ಮಿಕ ಶ್ರದ್ಧೆ ಮತ್ತು ಅಭಿವೃದ್ಧಿಯ ದೃಷ್ಟಿಯಿಂದ ನೋಡಬೇಕು ಎಂಬ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ. ಇದೇ ಸಂದರ್ಭದಲ್ಲಿ ಅಖಿಲೇಶ್ ಯಾದವ್ ವಿರುದ್ಧ ವಾಗ್ದಾಳಿ ನಡೆಸಿದ ಯೋಗಿ, ಮಾಫಿಯಾಗಳ ಮುಂದೆ ತಲೆಬಾಗುವವರು ಮತ್ತು ಅವರ ಸಮಾಧಿಗಳಿಗೆ ಪ್ರಾರ್ಥನೆ ಸಲ್ಲಿಸುವವರು ತಮ್ಮನ್ನು ಸವಾಲು ಹಾಕಲು ಸಾಧ್ಯವಿಲ್ಲ ಎಂಬರ್ಥದಲ್ಲಿ ಟೀಕಿಸಿದ್ದಾರೆ.

ಹಿಂದೆಯೂ ಜನರು ಇಂತಹವರನ್ನು ತಿರಸ್ಕರಿಸಿದ್ದಾರೆ ಎಂದು ಹೇಳಿಕೊಂಡಿದ್ದಾರೆ. ಅಖಿಲೇಶ್ ಯಾದವ್ ಅವರೊಂದಿಗೆ ನೇರವಾಗಿ ಚುನಾವಣಾ ಕಣಕ್ಕಿಳಿಯಲು ಸಿದ್ಧವಿರುವುದಾಗಿ ಪುನರುಚ್ಚರಿಸಿದ ಯೋಗಿ, ಬೆಂಬಲಿಗರ ಮೂಲಕ ರಾಜಕೀಯ ಸಂಘರ್ಷ ನಡೆಸುವ ಬದಲು ಇಬ್ಬರೂ ಮುಖಾಮುಖಿಯಾಗಿ ಸ್ಪರ್ಧಿಸಲಿ ಎಂದು ಆಹ್ವಾನಿಸಿದ್ದಾರೆ.

ಇತ್ತೀಚೆಗೆ ಅಖಿಲೇಶ್ ಯಾದವ್ ಅವರು ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಅಯೋಧ್ಯೆಯಿಂದ ಸ್ಪರ್ಧಿಸುವಂತೆ ಯೋಗಿ ಆದಿತ್ಯನಾಥ್ ಅವರಿಗೆ ಸವಾಲು ಹಾಕಿದ್ದರು.

ಬಿಜೆಪಿ ಅಭ್ಯರ್ಥಿಯನ್ನು ಅಂತಿಮಗೊಳಿಸಲು ತೊಂದರೆ ಅನುಭವಿಸುತ್ತಿದೆ ಎಂಬುದಾಗಿಯೂ ಅವರು ಹೇಳಿಕೊಂಡಿದ್ದರು. ಇದೀಗ ಯೋಗಿ ನೀಡಿರುವ ಪ್ರತಿಸವಾಲು ಉತ್ತರ ಪ್ರದೇಶದ ರಾಜಕೀಯ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ಆದರೆ, ಇಬ್ಬರೂ ನಾಯಕರು ಅಯೋಧ್ಯೆಯಿಂದ ಸ್ಪರ್ಧಿಸುವ ಕುರಿತು ಈ ಹೇಳಿಕೆಗಳು ರಾಜಕೀಯ ಸವಾಲಿನ ಭಾಗವಾಗಿದ್ದು, ಅಧಿಕೃತ ಅಭ್ಯರ್ಥಿಗಳ ಘೋಷಣೆ ಅಥವಾ ನಾಮಪತ್ರ ಸಲ್ಲಿಕೆಯಾಗಿದೆ ಎಂಬುದನ್ನು ಈ ವರದಿ ದೃಢಪಡಿಸುವುದಿಲ್ಲ.

## ಕರ್ತವ್ಯ ಆ್ಯಪ್ ಮೂಲಕ ಹಾಜರಾತಿ ಕಡ್ಡಾಯಕ್ಕೆ ಪೊಲೀಸರ ಅಸಮಾಧಾನ

### ವಾಸ್ತವವಾಗಿ ಡಿಜಿಟಲ್ ಮೂಲಕ ಹಾಜರಾತಿ ಹಾಕುವುದು ಸಮಂಸಜವಲ್ಲ ಎಂದು ಸಿಬ್ಬಂದಿ ಅಭಿಪ್ರಾಯ

• ಉದಯವಾಹಿನಿ, ಬೆಂಗಳೂರು

ಆಡಳಿತದಲ್ಲಿ ದಕ್ಷತೆ, ನೌಕರರ ಹಾಜರಾತಿಯಲ್ಲಿ ಪಾರದರ್ಶಕತೆ ಹಾಗೂ ಹೊಣೆಗಾರಿಕೆ ತರಲು ರಾಜ್ಯ ಸರ್ಕಾರ ಜಾರಿಗೆ ತಂದಿರುವ ಕರ್ತವ್ಯ ಆ್ಯಪ್ ಅನ್ನ (ಕ್ಯಾಮ್ಸ್) ಪೊಲೀಸ್ ಇಲಾಖೆಗೆ ಕಡ್ಡಾಯ ಮಾಡಿರುವುದು ಪೊಲೀಸರ ಅಸಮಾಧಾನಕ್ಕೆ ಕಾರಣವಾಗಿದೆ.

ರಾಜ್ಯದ ಎಲ್ಲಾ ಪೊಲೀಸರು ಕರ್ತವ್ಯ ಆ್ಯಪ್ ಡೌನ್‌ಲೋಡ್ ಮಾಡಿಕೊಂಡು ಕಡ್ಡಾಯವಾಗಿ ನೋಂದಣಿಯಾಗಬೇಕು, ಹಾಗೂ ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂದಿಗೆ ಪ್ರತಿದಿನ ಲಾಗಿನ್ ಮತ್ತು ಲಾಗ್ ಔಟ್ ಮಾಡಲು ಸೂಚಿಸುವಂತೆ ಆಯಾ ಘಟಕದ ಮೇಲಾಧಿಕಾರಿಗಳಿಗೆ ರಾಜ್ಯ ಪೊಲೀಸ್ ಇಲಾಖೆಯ ರಾಜ್ಯ ಪೊಲೀಸ್ ಪ್ರಧಾನ ಕಚೇರಿಯ ಡಿಐಜಿಪಿ ಅ.5ರಂದು ಸುತ್ತೋಲೆ ಹೊರಡಿಸಿದ್ದಾರೆ. ಬೇರೆ ಇಲಾಖೆಗಳ ರೀತಿಯಲ್ಲಿ ಪೊಲೀಸ್ ಇಲಾಖೆಗೆ ಕರ್ತವ್ಯ ಆ್ಯಪ್ ನಲ್ಲಿ ಹಾಜರಾತಿ ಪಾಲನೆ ಕಷ್ಟಕರವಾಗಲಿದೆ. 24/7 ರೀತಿ ಕೆಲಸ ಮಾಡಬೇಕಾಗುತ್ತದೆ. ಅಪರಾಧ ಪ್ರಕರಣಗಳಲ್ಲಿ ಹೊರ ಜಿಲ್ಲೆ ಹಾಗೂ ರಾಜ್ಯಗಳಿಗೆ ಹೋಗಿ ತನಿಖೆ ಮಾಡಬೇಕು. ಸಮಯ ನೋಡದೆ ಕೆಲಸ ಮಾಡಬೇಕಾಗುತ್ತದೆ. ಶಿಫ್ಟ್ ಮುಗಿದರೂ ಮನೆಗೆ ಹೋಗುವ ಹಾಗಿಲ್ಲ. ಹೀಗಿದ್ದರೂ ಪೊಲೀಸ್ ಇಲಾಖೆಗೆ ಕರ್ತವ್ಯ ಆ್ಯಪ್ ಮುಖಾಂತರ ಹಾಜರಾತಿ ಹಾಕುವುದು ಅನಿವಾರ್ಯವಿರಲಿಲ್ಲ ಎಂದು ಪೊಲೀಸರು ಹೇಳಿದ್ದಾರೆ. ಹಾಜರಾತಿಯಲ್ಲಿ ಪಾರದರ್ಶಕತೆ ತರುವುದರ ಜೊತೆಗೆ ಕೆಲಸ ಮಾಡದೆ ಕಳ್ಳಾಟವಾಡುವ ನೌಕರರನ್ನು ಸರಿದಾರಿಗೆ ತರುವ ಉಮೇದಿನಲ್ಲಿ ಎಲ್ಲರಿಗೂ ಕಡ್ಡಾಯಗೊಳಿಸಿರುವುದು ಸರಿಯಾದ ಕ್ರಮವಲ್ಲ. ಕಾನೂನು ಸುವ್ಯವಸ್ಥೆ ಕಾಪಾಡಲು ಸಲುವಾಗಿ ಪ್ರತಿಭಟನೆ, ಹಬ್ಬ ಹರಿದಿನಗಳಲ್ಲಿ ಬಂದೋಬಸ್ತ್



ಕೈಗೊಳ್ಳುವುದು, ವಿವಿಧ ಅಪರಾಧ ಪ್ರಕರಣಗಳ ತನಿಖೆಗಾಗಿ ಓಡಾಡಬೇಕಾಗುತ್ತದೆ. ಇವೆಲ್ಲದರ ಮಧ್ಯೆ ಆ್ಯಪ್‌ನಲ್ಲಿ ಹಾಜರಾತಿ ಹಾಕುವುದು ಅಸಾಧ್ಯ. ಲಾಗಿನ್ ಮಾಡಿ ಲಾಗ್ ಔಟ್ ಮಾಡಿದಾಗ ಸುಮಾರು 8 ಗಂಟೆಗಳಿಗಿಂತ ಹೆಚ್ಚು ಕೆಲಸ ಮಾಡಿರುತ್ತೇವೆ. ಇದು ಆ್ಯಪ್‌ನಲ್ಲಿ ಉಲ್ಲೇಖವಾಗುವುದಿಲ್ಲ. ಕೆಲಸಕ್ಕೆ ಸರಿಯಾದ ಸಮಯಕ್ಕೆ ಹಾಜರಾಗಬೇಕು ಎಂಬುದು ಸರಿ. ಆದರೆ ಕರ್ತವ್ಯದ ಅವಧಿ ಮುಗಿದರೂ ಲಾಗ್ ಔಟ್ ಮಾಡಿ ಮನೆಗೆ ಹೋಗಲು ಸಾಧ್ಯವೆ? ಎಂದು ಪ್ರಶ್ನಿಸಿರುವ ಪೊಲೀಸ್ ಸಿಬ್ಬಂದಿ ಪೊಲೀಸ್ ಇಲಾಖೆಯ ಮೂಲ ಕರ್ತವ್ಯದ ಸ್ವರೂಪವನ್ನು ಆ್ಯಪ್ ಅರ್ಥೈಸಿಕೊಂಡಿಲ್ಲ. ವಾಸ್ತವವಾಗಿ ಡಿಜಿಟಲ್ ಮೂಲಕ ಹಾಜರಾತಿ ಹಾಕುವುದು ಸಮಂಸಜವಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

ಕರ್ತವ್ಯ ಆಪ್‌ನಲ್ಲಿ ಹಾಜರಾತಿ ಹಾಕುವಂತೆ ಹಿರಿಯ ಅಧಿಕಾರಿಗಳು ಸಿಬ್ಬಂದಿಗೆ ಸೂಚಿಸಿದ್ದು, ಮುಂದಿನ ದಿನಗಳಲ್ಲಿ ಕಡ್ಡಾಯವಾಗಲಿದೆ. ಪೊಲೀಸರ ಹೆಚ್‌ಎಂಆರ್‌ಎಸ್ ಅನ್ನು ಆ್ಯಪ್ ಗೆ ಲಿಂಕ್ ಕಲ್ಪಿಸಲಾಗುತ್ತದೆ. ಒಂದು ವೇಳೆ ಹಾಜರಾತಿ ಹಾಕುವುದು ವಿಳಂಬವಾದರೆ ಅಥವಾ ಹಾಕದಿದ್ದರೆ ವೇತನ ಕಡಿತಗೊಳ್ಳುವ ಸಾಧ್ಯತೆಯಿದೆ. ಹೀಗಾಗಿ ಪೊಲೀಸ್ ಇಲಾಖೆಗಾಗಿ ಇರುವ ನಿಯಮವನ್ನು ಮಾರ್ಪಾಡುಗೊಳಿಸಿ ಜಾರಿಗೆ ತರಬೇಕು ಇನ್‌ಸ್ಪೆಕ್ಟರ್ ಒಬ್ಬರು

### ಪೊಲೀಸರ ಸ್ನೇಹಿಯಾಗಲಿದೆ ಈ ಆ್ಯಪ್

ಆಡಳಿತದಲ್ಲಿ ದಕ್ಷತೆ, ಹೆಚ್ಚಿನ ಪಾರದರ್ಶಕತೆ ಕಾಯ್ದುಕೊಳ್ಳಲು ಕರ್ತವ್ಯ ಆ್ಯಪ್ ಡೌನ್ ಲೋಡ್ ಮಾಡಿಕೊಂಡು ಸೂಚಿಸಲಾಗಿದೆ. ಯಾವಾಗ ಹಾಗೂ ಎಲ್ಲಿ ಬೇಕಾದರೂ ಹಾಜರಾತಿ ಹಾಕಬಹುದಾಗಿದೆ.

ಅಪರಾಧ ಪ್ರಕರಣ ಬೆನ್ನತ್ತಿ ವಿವಿಧ ರಾಜ್ಯಗಳಿಗೆ ಹೋಗುವ ಪೊಲೀಸರು ಸಹ ಆಯಾ ಸ್ಥಳದಿಂದಲೇ ಅಟೆಂಡೆನ್ಸ್ ಹಾಕಬಹುದಾಗಿದೆ. ನಿಗದಿತ ಸ್ಥಳದಲ್ಲಿಯೇ ಹಾಜರಾತಿ ಹಾಕಬೇಕೆಂದು ಸೂಚಿಸಲಾಗಿಲ್ಲ. ಆರಂಬಿಕ ಹಂತವಾಗಿರುವುದರಿಂದ ತಾಂತ್ರಿಕ ನ್ಯೂನತೆ ಎದುರಾಗಿರಬಹುದು. ಮುಂದಿನ ದಿನಗಳಲ್ಲಿ ಸಮಸ್ಯೆ ಸರಿಪಡಿಸಲಾಗುವುದು ಎಂದು ರಾಜ್ಯ ಪೊಲೀಸ್ ಇಲಾಖೆಯ ಆಡಳಿತ ವಿಭಾಗದ ಡಿಐಜಿಪಿ

- ಶ್ರೀಧರ್ ಟಿ. ತಿಳಿಸಿದ್ದಾರೆ.

## ಮೈಸೂರಿನಲ್ಲಿ ಸದ್ದುಗದ್ದಲದ ನಡುವೆ ಮಹಿಷ ದಸರಾ ಮುಕ್ತಾಯ

• ಉದಯವಾಹಿನಿ, ಬೆಂಗಳೂರು

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಪರ-ವಿರೋಧಗಳ ನಡುವೆಯೇ ಈ ಬಾರಿಯ ಮಹಿಷ ದಸರಾ ಆಚರಣೆಯು ಸದ್ದಿಲ್ಲದೆ ವೇದಿಕೆ ಕಾರ್ಯಕ್ರಮಕ್ಕಷ್ಟೇ ಸೀಮಿತಗೊಂಡು ಮುಕ್ತಾಯಗೊಂಡಿದೆ. ಮತ್ತೊಂದೆಡೆ ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಭಾಗವಾಗಿ ಮೈಸೂರು ಅರಮನೆಯಲ್ಲಿ ರಾಜವಂಶಸ್ಥರ ಸಾಂಪ್ರದಾಯಿಕ ಖಾಸಗಿ ದಸರಾ ಧಾರ್ಮಿಕ ವಿಧಿವಿಧಾನಗಳಿಗೆ ರಾಜಮಾತೆ ಪ್ರಮೋದಾದೇವಿ ಒಡೆಯರ್ ಮಾರ್ಗದರ್ಶನದಲ್ಲಿ ವಿದ್ಯುಕ್ತ ಚಾಲನೆ ದೊರೆತಿದೆ.

ಸಾಂಸ್ಕೃತಿಕ ಹಾಗೂ ಪ್ರಗತಿಪರ ಚಟುವಟಿಕೆಗಳ ಕೇಂದ್ರಬಿಂದುವಾಗಿರುವ ಮೈಸೂರಿನಲ್ಲಿ ಶನಿವಾರ ನಡೆದ ಈ ಎರಡು ಪ್ರಮುಖ ಬೆಳವಣಿಗೆಗಳ ಚಾಮುಂಡಿಬೆಟ್ಟದಲ್ಲಿ ಮಹಿಷ ದಸರಾ ಆಚರಣೆಗೆ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಸಂಪೂರ್ಣ ನಿರ್ಬಂಧ ವಿಧಿಸಿದ ಹಿನ್ನೆಲೆಯಲ್ಲಿ, ದಲಿತ ಸಂಘಟನೆಗಳು, ಮುಖಂಡರು ಹಾಗೂ ಪ್ರಗತಿಪರ ಚಿಂತಕರು ಮೈಸೂರಿನ ಟೌನ್‌ಹಾಲ್ ಆವರಣದಲ್ಲಿ ಕಾರ್ಯಕ್ರಮ ಆಯೋಜಿಸಿದರು.

ಟೌನ್ ಹಾಲ್ ಬಳಿ ಇರುವ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಮಾಜಿ ಮೇಯರ್ ಪುರುಷೋತ್ತಮ್ ಹಾಗೂ ಪ್ರಗತಿಪರ ಚಿಂತಕ ಕೆ.ಎಸ್. ಭಗವಾನ್ ಸೇರಿದಂತೆ ಪ್ರಮುಖರು ಪುಷ್ಪಾರ್ಚನೆ ಮಾಡುವ ಮೂಲಕ ಸರಳವಾಗಿ ಮಹಿಷ ದಸರಾಗೆ ಚಾಲನೆ ನೀಡಿದರು. ಅಹಿತಕರ ಘಟನೆಗಳನ್ನು ತಡೆಯಲು ಚಾಮುಂಡಿಬೆಟ್ಟದಲ್ಲಿರುವ ಮಹಿಷಾಸುರನ ಪ್ರತಿಮೆಯ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ ಅಕ್ಟೋಬರ್ 9ರ ರಾತ್ರಿಯಿಂದ ಅಕ್ಟೋಬರ್ 11ರ ಬೆಳಿಗ್ಗೆ 6 ಗಂಟೆಯವರೆಗೆ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಅಲ್ಲದೆ ಮುನ್ನೆಚ್ಚರಿಕೆಯಾಗಿ ಪ್ರತಿಮೆಗೆ ಟಾರ್ಪಲ್ ಹೊದಿಸಿ ಸಂಪೂರ್ಣ ಬಂದೋಬಸ್ತ್ ಮಾಡಲಾಗಿತ್ತು. ಕಾರ್ಯಕ್ರಮದಲ್ಲಿ ಮಾತನಾಡಿದ ಮಾಜಿ ಮೇಯರ್ ಪುರುಷೋತ್ತಮ್, ಮಹಿಷ ದಸರಾಗೆ ಅವಕಾಶ ನೀಡುವಂತೆ ಸಚಿವ ಪ್ರಿಯಾಂಕ್ ಖರ್ಗೆ ಅವರು ಪೊಲೀಸ್ ಆಯುಕ್ತರಿಗೆ ಮನವಿ ಮಾಡಿದ್ದರು.

ಈ ದಿನದ ದರ

| | | | |
|---|---|---|---|
| ಪೆಟ್ರೋಲ್: 111.68₹/L | ಡೀಸೆಲ್ : 99.56₹/L | ಬಂಗಾರ: ₹ 15,142/Gram 24ct ₹ 13,880/Gram 22ct | ಬೆಳ್ಳಿ: ₹240./ Gram |

# ಬೈರತಿ ಬಸವರಾಜ ನೇತೃತ್ವದಲ್ಲಿ ಶಿಕ್ಷಕರ ಸಭೆ

• ಉದಯವಾಹಿನಿ, ಕೆ.ಆರ್.ಪುರ,

ಶಿಕ್ಷಕರ ಕ್ಷೇತ್ರದ ಚುನಾವಣೆಯ ಹಿನ್ನೆಲೆಯಲ್ಲಿ ಎನ್‌ಡಿಎ ಅಭ್ಯರ್ಥಿ ಎ.ಪಿ. ರಂಗನಾಥ್ ಪರವಾಗಿಕೆಆರ್ ಪುರ ವಿಧಾನಸಭಾ ಕ್ಷೇತ್ರದ ರಾಮಮೂರ್ತಿನಗರದ ಲೋಟಸ್ ಪ್ಯಾಲೇಸ್‌ನಲ್ಲಿ ಶಿಕ್ಷಕರ ಬೆಂಬಲ ಕೋರಿ ಶಾಸಕ ಬೈರತಿ ಬಸವರಾಜ ನೇತೃತ್ವದಲ್ಲಿ ಶಿಕ್ಷಕರ ಸಭೆ ನಡೆಯಿತು. ಸಭೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳ ಮುಖಂಡರು, ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಕೆ.ಆರ್.ಪುರ ಕ್ಷೇತ್ರದ ವ್ಯಾಪ್ತಿಯ ವಿವಿಧ ಶಾಲೆಗಳ ಶಿಕ್ಷಕರು ಭಾಗವಹಿಸಿ, ಶಿಕ್ಷಕರ ಕ್ಷೇತ್ರದ ಚುನಾವಣೆ ಹಾಗೂ ಸಂಬಂಧಿತ ವಿಚಾರಗಳ ಕುರಿತು ಚರ್ಚಿಸಿ ಎನ್‌ಡಿಎ ಅಭ್ಯರ್ಥಿ


ಉದಯವಾಹಿನಿ ಚಿತ್ರ

ಎ.ಪಿ. ರಂಗನಾಥ್ ಅವರಿಗೆ ಬೆಂಬಲ ನೀಡುವಂತೆ ಶಿಕ್ಷಕರಲ್ಲಿ ಮನವಿ ಮಾಡಲಾಯಿತು. ಅಭ್ಯರ್ಥಿಯ ಗೆಲುವಿಗಾಗಿ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸುವಂತೆ ಬಿಜೆಪಿ-ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರಿಗೆ ಕರೆ ನೀಡಿದರು. ಚುನಾವಣಾ ಪ್ರಚಾರ ಹಾಗೂ ಸಂಘಟನಾ ಕಾರ್ಯಗಳನ್ನು ಸಮನ್ವಯದಿಂದ ನಡೆಸಿ ಬಿಜೆಪಿ-ಜೆಡಿಎಸ್ ಮೈತ್ರಿಕೂಟದ ಮುಖಂಡರು ,ಕಾರ್ಯಕರ್ತರು ಒಗ್ಗಟ್ಟಿನಿಂದ ಚುನಾವಣಾ ಕಾರ್ಯದಲ್ಲಿ ತೊಡಗಿಸಿಕೊಂಡು ಎನ್‌ಡಿಎ ಅಭ್ಯರ್ಥಿಯ ಪರವಾಗಿ ಪ್ರಚಾರ ನಡೆಸಬೇಕು ಎಂದು ಶಾಸಕ ಬೈರತಿ ಬಸವರಾಜ ತಿಳಿಸಿದರು.

ಮಂಡಲ ಅಧ್ಯಕ್ಷ ಮುನೇಗೌಡ, ಪ್ರ.ಕಾರ್ಯದರ್ಶಿಗಳಾದ ಲೋಕೇಶ್, ಮಾರ್ಕೆಟ್ ರಮೇಶ್, ಶ್ರೀರಾಮುಲು, ಪಾಲಿಕೆ ಮಾಜಿ ಸದಸ್ಯರಾದ ಗೀತಾವಿವೇಕಾನಂದ, ಶ್ರೀಕಾಂತ್, ಅಂತೋಣಿಸ್ವಾಮಿ, ಮುಖಂಡರಾದ ರಾಮಚಂದ್ರಪ್ಪ, ಇಟಾಚಿ ಮಂಜು, ಜೆಡಿಎಸ್ ಅಧ್ಯಕ್ಷ ಲಕ್ಷ್ಮಣ್, ಜೆಡಿಎಸ್ ಮುಖಂಡರಾದ ಸುರೇಶ್, ಮತ್ತಿತರರಿದ್ದರು.

# ಯಶವಂತಪುರ ದಸರಾ ಕಾರ್ಯಕ್ರಮಕ್ಕೆ ಅದ್ದೂರಿ ಚಾಲನೆ

• ಉದಯವಾಹಿನಿ, ಕೆಂಗೇರಿ

ನಮ್ಮ ನಾಡಿನ ಕಲೆ ಸಂಸ್ಕೃತಿ ಮತ್ತು ಪರಂಪರೆಯನ್ನು ನಮ್ಮ ಮುಂದಿನ ಪೀಳಿಗೆಗೆ ತಿಳಿಸಲು ಹಾಗೂ ಒಟ್ಟಾಗಿ ಸಂಭ್ರಮಿಸಲು ಮೈಸೂರಿನಲ್ಲಿ ಯಾವ ರೀತಿ ದಸರಾ ಉದ್ಘಾಟನೆ ನಡೆಯುತ್ತಿದೆಯೋ ಅದೇ ರೀತಿ ಯಶವಂತಪುರ ವಿಧಾನಸಭಾ ಕ್ಷೇತ್ರದ ಕೆಂಗೇರಿ ಉಪನಗರದ ಮೊದಲನೇ ಮುಖ್ಯ ರಸ್ತೆಯ ಗಣೇಶ ಆಟದ ಮೈದಾನದಲ್ಲಿ ಯಶವಂತಪುರ ದಸರಾ2026 ಕಾರ್ಯಕ್ರಮವನ್ನು ಉದ್ಘಾಟಿಸಲಾಗುವುದು ಎಂದು ಕ್ಷೇತ್ರದ ಶಾಸಕ ಎಸ್ ಟಿ ಸೋಮಶೇಖರ್ ತಿಳಿಸಿದರು.


ಉದಯವಾಹಿನಿ ಚಿತ್ರ

ಕೆಂಗೇರಿ ಉಪನಗರದ ಮೊದಲನೇ ಮುಖ್ಯ ರಸ್ತೆಯ ಗಣೇಶ ಆಟದ ಮೈದಾನದಲ್ಲಿ " ಯಶವಂತಪುರ ದಸರಾ 2026 " ಕಾರ್ಯಕ್ರಮದ ಅಂಗವಾಗಿ ಕರೆದಿದ್ದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಮೈಸೂರಿನ ಚಾಮುಂಡೇಶ್ವರಿ ದೇವಿಯ ಭವ್ಯ ದೇವಾಲಯದ ರೀತಿಯನ್ನು ಹೋಲುವಂತಹ ದೇವಾಲಯವನ್ನು ನಿರ್ಮಿಸಿದ್ದು, ಅಕ್ಟೋಬರ್ 11 ರಿಂದ ಅಕ್ಟೋಬರ್ 21ರ ವರೆಗೆ 11 ದಿನಗಳ ಕಾಲ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜನೆಗೆ ಸಕಲ ಸಿದ್ಧತೆ ನಡೆಸಲಾಗಿದೆ.

ಅಕ್ಟೋಬರ್ 11ರಂದು ನಾಡದೇವತೆ ಚಾಮುಂಡೇಶ್ವರಿ ದೇವಿಗೆ ಕ್ಷೇತ್ರದ ಗಣ್ಯ ವ್ಯಕ್ತಿಗಳಿಂದಲೇ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ದಸರಾ ಕಾರ್ಯಕ್ರಮವನ್ನು ಉದ್ಘಾಟಿಸಲಾಗುವುದು, ರೈತ ದಸರಾ,ಮಕ್ಕಳ ದಸರಾ, ಮಹಿಳಾ ದಸರಾ, ಯುವ ದಸರಾ, ಬಾಡಿ ಬಿಲ್ಡಿಂಗ್ ಶೋ,ಉದ್ಯೋಗ ಮೇಳ ಸೇರಿದಂತೆ ಅರ್ಜುನ್ ಜನ್ಯ ತಂಡದವರಿಂದ ರಸಮಂಜರಿಯ ಸಾಂಸ್ಕೃತಿಕ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

## ಕಮಿಷನರ್ ಕಚೇರಿ ಹೊರಗೆ ಚಲಿಸುತ್ತಿದ್ದ ಕಾರಿಗೆ ಆಕಸ್ಮಿಕ ಬೆಂಕಿ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ನಗರದ ಪೊಲೀಸ್ ಕಮಿಷನರ್ ಕಚೇರಿಯ ಹೊರಗೆ ಚಲಿಸುತ್ತಿದ್ದ ಕಾರೊಂದರ ಇಂಜಿನ್‌ನಲ್ಲಿ ದಿಢೀರನೆ ಭೀಕರ ಬೆಂಕಿ ಕಾಣಿಸಿಕೊಂಡು ಭಾಗಶಃ ಸುಟ್ಟು ಹೋದ ಘಟನೆ ಇನ್‌ಫೆಂಟ್ರಿ ರಸ್ತೆಯಲ್ಲಿ ಇಂದು ಶನಿವಾರ ಬೆಳಗ್ಗೆ ನಡೆದಿದೆ. ಸಮಯಪ್ರಜ್ಞೆಯಿಂದ ಚಾಲಕ ತಕ್ಷಣವೇ ಕಾರಿನಿಂದ ಕೆಳಗಿಳಿದ ಕಾರಣ ಜೀವಾಪಾಯದಿಂದ ಪಾರಾಗಿದ್ದಾರೆ. ಶಬ್ಬೀರ್ ಎಂಬುವವರು ತಮ್ಮ ಟೊಯೋಟಾ ಕಂಪನಿಯ 'ಟೈಸರ್' ಮಾಡೆಲ್ ಕೆಂಪು ಬಣ್ಣದ ಕಾರಿನಲ್ಲಿ ಇನ್‌ಫೆಂಟ್ರಿ ರಸ್ತೆಯ ಮಾರ್ಗವಾಗಿ ಪ್ರಯಾಣ ಮಾಡುತ್ತಿದ್ದರು. ಕಾರಿನಲ್ಲಿ ಒಬ್ಬರೇ ಇದ್ದರು. ಕಮಿಷನರ್ ಕಚೇರಿ ಮುಂಭಾಗ ಬರುತ್ತಿದ್ದಂತೆ ಕಾರಿನ ಇಂಜಿನ್ ಭಾಗದಿಂದ ದಿಢೀರನೆ ದಟ್ಟ ಹೊಗೆ ಮತ್ತು ಬೆಂಕಿ ಕಾಣಿಸಿಕೊಂಡಿತು. ಇಂಜಿನ್‌ನಲ್ಲಿ ಬೆಂಕಿ ಕಾಣಿಸಿಕೊಂಡ ತಕ್ಷಣವೇ ಅಪಾಯವನ್ನು ಅರಿತ ಮಾಲೀಕ ಶಬ್ಬೀರ್, ತಡಮಾಡದೇ ಕಾರನ್ನು ರಸ್ತೆ ಬದಿಗೆ ನಿಲ್ಲಿಸಿ ತಕ್ಷಣ ಕೆಳಗಿಳಿದು ಸಹಾಯಕ್ಕಾಗಿ ಕೇಳಿಕೊಂಡರು. ನಡುರಸ್ತೆಯಲ್ಲಿ ಕಾರು ಹೊತ್ತಿ ಉರಿಯುತ್ತಿದ್ದನ್ನು ಕಂಡ ತಕ್ಷಣವೇ ಕರ್ತವ್ಯದಲ್ಲಿದ್ದ ಸಂಚಾರ ಪೊಲೀಸ್ ಸಿಬ್ಬಂದಿ, ಸಾರ್ವಜನಿಕರು ಹಾಗೂ ಸಮೀಪದಲ್ಲಿದ್ದ ಸ್ಪರ್ಶ್ ಆಸ್ಪತ್ರೆಯ ಸಿಬ್ಬಂದಿ ಧಾವಿಸಿ ಬಂದರು. ಆಸ್ಪತ್ರೆ ಹಾಗೂ ಸುತ್ತಮುತ್ತಲ ಕಟ್ಟಡಗಳಲ್ಲಿ ಇದ್ದ 'ಫೈರ್ ಎಕ್ಸ್‌ಟಿಂಗ್ಯುಷರ್' ಬಳಸಿ ಬೆಂಕಿಯನ್ನು ಸಂಪೂರ್ಣವಾಗಿ ಹತೋಟಿಗೆ ತರಲಾಯಿತು. ಸಮಯಕ್ಕೆ ಸರಿಯಾಗಿ ಬೆಂಕಿ ನಂದಿಸಿದ್ದರಿಂದ ಅಕ್ಕಪಕ್ಕದ ವಾಹನಗಳಿಗೆ ಹಾಗೂ ಸಾರ್ವಜನಿಕರಿಗೆ ಅನಾಹುತ ಸಂಭವಿಸಿಲ್ಲ.

## ಸಚಿವರು, ಸಂಸದರಿಗೆ ರಾಜ್ಯ ಸರ್ಕಾರದಿಂದ 31 ಲಕ್ಷ ರೂ. ವಾಹನ ಉಡುಗೊರೆ!


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಕರ್ನಾಟಕವು ಈ ವರ್ಷ ಹಿಂದೆಂದೂ ಕಾಣದ ತೀವ್ರ ಬರ ಪರಿಸ್ಥಿತಿಯನ್ನು ಎದುರಿಸುತ್ತಿದ್ದು, ಬೆಳೆ ನಷ್ಟಕ್ಕೆ ಕೇಂದ್ರ ಸರ್ಕಾರದಿಂದ ನೆರವು ಕೋರುತ್ತಿರುವ ಸಂದರ್ಭದಲ್ಲೇ, ರಾಜ್ಯ ಸರ್ಕಾರವು ಸಚಿವರು ಮತ್ತು ಸಂಸದರಿಗೆ ಅಧಿಕೃತ ವಾಹನ ಖರೀದಿಸುವ ಮಿತಿಯನ್ನು ಜಿಎಸ್‌ಟಿ ಸೇರಿ 26 ಲಕ್ಷದಿಂದ 31 ಲಕ್ಷಕ್ಕೆ ಹೆಚ್ಚಿಸಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ರಾಜ್ಯ ಶಿಷ್ಟಾಚಾರ) ಹೊರಡಿಸಿರುವ ಆದೇಶದ ಪ್ರಕಾರ, ಪರಿಷ್ಕೃತ ಮಿತಿಯು ಹೊಸ ವಾಹನಗಳ ಖರೀದಿಗೆ ಅನ್ವಯವಾಗಲಿದೆ.

ಸಚಿವರಿಗೆ ವಾಹನ ಸೇರಿದಂತೆ ಹಲವು ಸೌಲಭ್ಯಗಳನ್ನು ಒದಗಿಸಲಾಗುತ್ತದೆ. ಸಂಸದರಿಗೆ ಸಾರಿಗೆ ಸೌಲಭ್ಯ ಕಲ್ಪಿಸುವ ದೇಶದ ಕೆಲವೇ ರಾಜ್ಯಗಳಲ್ಲಿ ಕರ್ನಾಟಕವೂ ಒಂದಾಗಿದೆ. ಈ ಹಿಂದೆ 2022ರಲ್ಲಿ ವಾಹನ ಖರೀದಿ ಮಿತಿಯನ್ನು 23 ಲಕ್ಷದಿಂದ 26 ಲಕ್ಷಕ್ಕೆ ಹೆಚ್ಚಿಸಲಾಗಿತ್ತು.

ಹಿಂದಿನ ಆದೇಶದಲ್ಲಿ ವಾಹನ ಖರೀದಿಯ ಗರಿಷ್ಠ ಮಿತಿಯನ್ನು 26 ಲಕ್ಷಕ್ಕೆ ನಿಗದಿಪಡಿಸಲಾಗಿತ್ತು. ಹಲವು ಸಚಿವರು ಮತ್ತು ಸಂಸದರು ಅದಕ್ಕಿಂತ ಹೆಚ್ಚಿನ ಬೆಲೆಯ ವಾಹನಗಳನ್ನು ಖರೀದಿಸಲು ಮುಂದಾಗುತ್ತಿದ್ದರು. ಇಂತಹ ಸಂದರ್ಭಗಳಲ್ಲಿ ಅನುಮೋದನೆಗಾಗಿ ಕಡತವನ್ನು ಹಣಕಾಸು ಇಲಾಖೆಗೆ ಕಳುಹಿಸಲಾಗುತ್ತಿತ್ತು ಎಂದು ಡಿಪಿಎಆರ್ ಮೂಲಗಳು ತಿಳಿಸಿವೆ.

ಹಿರಿಯ ಸಚಿವರೊಬ್ಬರು ಅನಾಮಧೇಯತೆಯ ಷರತ್ತಿನ ಮೇಲೆ ಮಾತನಾಡಿ, ಕಾರುಗಳ ಬೆಲೆ ಏರಿಕೆಯಾಗಿರುವುದರಿಂದ ಖರೀದಿ ಮಿತಿಯನ್ನು ಹೆಚ್ಚಿಸುವುದರಲ್ಲಿ ತಪ್ಪಿಲ್ಲ ಎಂದು ಹೇಳಿದ್ದಾರೆ. ಇಂತಹ ವ್ಯವಸ್ಥೆಯನ್ನು ಜಾರಿಗೆ ತಂದಿರುವುದು ಇದೇ ಮೊದಲಲ್ಲ ಎಂದೂ ತಿಳಿಸಿದ್ದಾರೆ.

## ನ್ಯಾಯಾಂಗ ತನಿಖೆಗೆ ಒಪ್ಪಿಸಿ, 1 ಕೋಟಿ ಪರಿಹಾರ ನೀಡಿ'

• ಉದಯವಾಹಿನಿ, ಬೆಂಗಳೂರು

ಆ.15 ರಂದು ಹನೂರಿನಲ್ಲಿ ನಡೆದಿದೆ ಎನ್ನಲಾದ ಎನ್‌ಕೌಂಟರ್‌ನಲ್ಲಿ ಮೂವರು ಮೃತಪಟ್ಟಿದ್ದು, ಅದರಿಂದ ಪಾರಾದ ಮಹಿಮಾ ದಾಸ್, ಅರಣ್ಯದಲ್ಲಿ ಮಲಗಿದ್ದಾಗ ಗುಂಡಿನ ಸದ್ದು ಕೇಳಿ ಅಲ್ಲಿಂದ ಓಡಿಹೋಗಿದ್ದಾಗಿ ತಿಳಿಸಿದ್ದಾರೆ. ಶುಕ್ರವಾರ 'ಕರ್ನಾಟಕ ಪ್ರಾಂತ ರೈತ ಸಂಘ' ಮತ್ತು 'ಆಲ್ ಇಂಡಿಯಾ ಲಾಯರ್ಸ್ ಯೂನಿಯನ್' ಆಯೋಜಿಸಿದ್ದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ತಮಗೆ ನ್ಯಾಯ ಒದಗಿಸುವಂತೆ ಆಗ್ರಹಿಸಿದರು. ಚಾಮರಾಜನಗರ ಜಿಲ್ಲೆಯ ಹನೂರಿನಲ್ಲಿರುವ ಕಾವೇರಿ ವನ್ಯಜೀವಿ ಧಾಮದಲ್ಲಿ ನಡೆದಿದೆ ಎನ್ನಲಾದ ಈ ಎನ್‌ಕೌಂಟರ್‌ನಲ್ಲಿ ಆಂಥೋಣಿ ಸ್ವಾಮಿ, ಡೇವಿಡ್ ಸೆಬಾಸ್ಟಿಯನ್ ಕುಮಾರ್ ಮತ್ತು ಜಾನ್ ರೋಸ್ ಪೀಟರ್ ಅವರನ್ನು ಗುಂಡಿಕ್ಕಿ ಕೊಲ್ಲಲಾಗಿತ್ತು. ಈ ಹತ್ಯೆಗಳ ಕುರಿತು ಹೈಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ಸಮಗ್ರ ನ್ಯಾಯಾಂಗ ತನಿಖೆ ನಡೆಸಬೇಕು, ಆರೋಪಿಗಳನ್ನು ಬಂಧಿಸಬೇಕು, ಮೃತರ ಪ್ರತಿಯೊಂದು ಕುಟುಂಬಕ್ಕೂ 1 ಕೋಟಿ ರೂಪಾಯಿ ಪರಿಹಾರ ನೀಡಬೇಕು ಹಾಗೂ ಸಂತ್ರಸ್ತ ಕುಟುಂಬದ ಒಬ್ಬ ಸದಸ್ಯರಿಗೆ ಸರ್ಕಾರಿ ಉದ್ಯೋಗ ಕಲ್ಪಿಸಬೇಕು ಎಂದು ಸಂಘಟನೆಗಳು ಆಗ್ರಹಿಸಿದವು.

## ಕೇರಳ ಕಾಂಗ್ರೆಸ್ CM ತಮಿಳುನಾಡು CM ಕೂಡ ಮತಗಳ್ಳರೇ: ಚೇತನ್ ಅಹಿಂಸಾ

• ಉದಯವಾಹಿನಿ, ಬೆಂಗಳೂರು

ಚುನಾವಣಾ ಆಯೋಗದ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆ ಮತ್ತು ಮುಖ್ಯ ಚುನಾವಣಾ ಆಯುಕ್ತರ ವಿರುದ್ಧ ದೇಶಾದ್ಯಂತ ಪ್ರತಿಭಟನೆಗಳು ತೀವ್ರಗೊಳ್ಳುತ್ತಿರುವ ಹೊತ್ತಿನಲ್ಲೇ ನಟ ಹಾಗೂ ಸಾಮಾಜಿಕ ಹೋರಾಟಗಾರ ಚೇತನ್ ಅಹಿಂಸಾ ಅವರು ಪ್ರತಿಭಟನಾನಿರತ ಕಾಕ್ರೋಚ್ ಜನತಾ ಪಾರ್ಟಿ ಹಾಗೂ ವಿಪಕ್ಷಗಳ ನಿಲುವನ್ನು ಕಟುವಾಗಿ ಟೀಕಿಸಿದ್ದಾರೆ.ನರೇಂದ್ರ ಮೋದಿ 'ಮತಗಳ್ಳತನ' ಮಾಡಿ ಪ್ರಧಾನಿ ಆದರು ಎಂಬ ಆರೋಪವು ಮನುವಾದಿಗಳು ಮತ್ತು ವಿರೋಧಿಗಳು ಯಾವುದೇ ಆಧಾರವಿಲ್ಲದೆ ಮಾಡುವ ಆರೋಪಗಳಿಗೆ ಮತ್ತೊಂದು ಉದಾಹರಣೆಯಾಗಿದೆ ಎಂದು ಚೇತನ್ ಅಹಿಂಸಾ ಹೇಳಿದ್ದಾರೆ.

ಮತಗಳ್ಳತನವೇ ಆಗಿದ್ದರೆ ಕೇರಳದ ಕಾಂಗ್ರೆಸ್ ಮುಖ್ಯಮಂತ್ರಿ ಮತ್ತು ತಮಿಳುನಾಡಿನ ಮುಖ್ಯಮಂತ್ರಿ ಕೂಡ 'ಮತಗಳ್ಳರೇ'? ಎಂದು ಪ್ರಶ್ನಿಸಿದ್ದಾರೆ. ನಿಮ್ಮ ಕೈಯಲ್ಲಿ ಸುತ್ತಿಗೆ ಒಂದೇ ಇದ್ದರೆ, ಎಲ್ಲವೂ ಮೊಳೆಯಂತೆ ಕಾಣುತ್ತದೆ. ಅದೇ ರೀತಿ, ನಿಮ್ಮ ಮನಸ್ಸಿನಲ್ಲಿ ಬಿಜೆಪಿಯನ್ನು ವಿರೋಧಿಸುವ ಒಂದೇ ಆಲೋಚನೆ ಇದ್ದರೆ, ಪ್ರತಿಯೊಂದೂ ಪಿತೂರಿಯಂತೆ ಕಾಣುತ್ತದೆ. ನಿಮ್ಮ ಅಜೆಂಡಾಗೆ ಹೊಂದಿಕೆಯಾಗದ ಪ್ರತಿಯೊಂದು ಚುನಾವಣಾ ಫಲಿತಾಂಶವೂ 'ಮತಗಳ್ಳತನ' ಎನಿಸುತ್ತದೆ. ಮತ್ತೊಂದು ಕಾಕ್ರೋಚ್ ಸುಳ್ಳೇ ಬಹುಶಃ ಹೌದು. ಎಂದಿನಂತೆ ಕಾಕ್ರೋಚ್ ನ ಅಜ್ಞಾನವೇ ಖಂಡಿತ ಎಂದು ಪೋಸ್ಟ್ ಮಾಡಿದ್ದಾರೆ.

# ಹಣ ಕಡಿತಗೊಳಿಸದಂತೆ ಬ್ಯಾಂಕುಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ ಸರ್ಕಾರ!

## ಸಾಲ ಮರುಪಾವತಿಗಾಗಿ ಬ್ಯಾಂಕ್‌ಗಳು ಗೃಹಲಕ್ಷ್ಮಿ ಯೋಜನೆಯಡಿ ನೀಡಲಾದ ಸಹಾಯಧನವನ್ನು ಕಡಿತಗೊಳಿಸುತ್ತಿವೆ ಎಂಬ ಮಹಿಳಾ ಫಲಾನುಭವಿಗಳ ದೂರು

• ಉದಯವಾಹಿನಿ, ಬೆಂಗಳೂರು

1 ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ
2 ಮಹಿಳೆಯರ ಕೌಟುಂಬಿಕ ವೆಚ್ಚಗಳು
3 ಹಣದ ಕಡಿತಗಳು ಅಡ್ಡಿಯಾಗುತ್ತಿವೆ

'ಗೃಹಲಕ್ಷ್ಮಿ' ಯೋಜನೆಯಡಿ ಮಹಿಳೆಯರಿಗೆ ನೀಡಲಾಗುವ ಮಾಸಿಕ 2,000 ರೂಪಾಯಿಗಳ ಸಹಾಯಧನವನ್ನು ಬಾಕಿ ಇರುವ ಸಾಲದ ಕಂತುಗಳು, ಬಡ್ಡಿ ಅಥವಾ ಇತರೆ ಬಾಕಿ ಮೊತ್ತಗಳಿಗೆ ಹೊಂದಾಣಿಕೆ ಮಾಡಿಕೊಳ್ಳದಂತೆ ಕರ್ನಾಟಕ ಸರ್ಕಾರ ಬ್ಯಾಂಕುಗಳಿಗೆ ನಿರ್ದೇಶನ ನೀಡಿದೆ. ಅಲ್ಲದೆ, ಫಲಾನುಭವಿಗಳ ಲಿಖಿತ ಒಪ್ಪಿಗೆಯಿಲ್ಲದೆ ಕಡಿತಗೊಳಿಸಲಾದ ಹಣವನ್ನು ತಕ್ಷಣವೇ ಮರುಪಾವತಿಸುವಂತೆಯೂ ಆದೇಶಿಸಿದೆ. ಎಲ್ಲಾ ವಾಣಿಜ್ಯ ಬ್ಯಾಂಕುಗಳು, ಸಹಕಾರಿ ಬ್ಯಾಂಕುಗಳು, ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳು ಮತ್ತು ಇತರ ಹಣಕಾಸು ಸಂಸ್ಥೆಗಳು ಈ ನಿರ್ದೇಶನಗಳನ್ನು ಪಾಲಿಸುವುದನ್ನು ಖಚಿತಪಡಿಸಿಕೊಳ್ಳುವಂತೆ, ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತೆ ಉಮಾ ಮಹಾದೇವನ್ ಅವರು ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿಯ ಸಂಚಾಲಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.ಸಾಲ ಮರುಪಾವತಿಗಾಗಿ ಬ್ಯಾಂಕ್‌ಗಳು ಗೃಹಲಕ್ಷ್ಮಿ ಯೋಜನೆಯಡಿ ನೀಡಲಾದ ಸಹಾಯ ಧನವನ್ನು ಕಡಿತಗೊಳಿಸುತ್ತಿವೆ ಎಂಬ ಮಹಿಳಾ ಫಲಾನುಭವಿಗಳ ದೂರುಗಳನ್ನು ಗಮನಕ್ಕೆ ತಂದ ನಂತರ, ವಿಧಾನ ಪರಿಷತ್ ಸದಸ್ಯ, ಹಾಗೂ 'ಖಾತರಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಅವರು ಮುಖ್ಯ ಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿದ್ದರು; ಈ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ. ಮುಖ್ಯಮಂತ್ರಿ ನಿರ್ದೇಶನದ ಮೇರೆಗೆ, ಈ ಯೋಜನೆಯಡಿ ಜಮೆಯಾಗುವ ಹಣವನ್ನು ಸಾಲದ ಬಾಕಿಗಾಗಿ ಸ್ವಯಂಚಾಲಿತವಾಗಿ ಡೆಬಿಟ್ ಮಾಡದಂತೆ ಅಥವಾ ಹೊಂದಾಣಿಕೆ ಮಾಡದಂತೆ ನೋಡಿಕೊಳ್ಳಲು ಹಾಗೂ ಈ ಕುರಿತು ಎಲ್ಲಾ ಬ್ಯಾಂಕ್‌ಗಳಿಗೆ ಸುತ್ತೋಲೆ ಹೊರಡಿಸಲು ರಾಜ್ಯ ಸರ್ಕಾರ ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿ ಸಂಚಾಲಕರಿಗೆ ಸೂಚಿಸಿದೆ.



ಉದಯವಾಹಿನಿ ಚಿತ್ರ

ಅಲ್ಲದೆ, ಇಂತಹ ಕಡಿತಗಳನ್ನು ತಡೆಯಲು ಅಗತ್ಯ ತಾಂತ್ರಿಕ ಕ್ರಮಗಳನ್ನು ಕೈಗೊಳ್ಳುವಂತೆಯೂ ಮತ್ತು ಶಾಖಾ ಮಟ್ಟದ ಸಿಬ್ಬಂದಿಗೆ ಸ್ಪಷ್ಟ ಸೂಚನೆಗಳನ್ನು ನೀಡುವಂತೆಯೂ ಬ್ಯಾಂಕ್‌ಗಳಿಗೆ ಸೂಚಿಸಲಾಗಿದೆ.ಎಲ್ಲಾ ಹಣಕಾಸು ಸಂಸ್ಥೆಗಳು ಇದನ್ನು ಕಟ್ಟುನಿಟ್ಟಾಗಿ ಪಾಲಿಸುವುದನ್ನು ಖಚಿತಪಡಿಸಿಕೊಳ್ಳಲು ಹಾಗೂ ಕೈಗೊಂಡ ಕ್ರಮಗಳ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲು ಎಸ್‌ಎಲ್‌ಬಿಸಿ ಸಂಚಾಲಕರಿಗೆ ಸೂಚಿಸಲಾಗಿದೆ.

ಈ ಸಂವಹನದ ಪ್ರತಿಗಳನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಾರ್ಯದರ್ಶಿ, ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಕಳುಹಿಸಲಾಗಿದೆ.

ಅಲ್ಲದೆ, ಫಲಾನುಭವಿಗಳಿಗೆ ಬೆದರಿಕೆ ಹಾಕುವುದು ಸೇರಿದಂತೆ ಬಲವಂತದ ಸಾಲ ವಸೂಲಾತಿ ಕ್ರಮಗಳನ್ನು ಅನುಸರಿಸುತ್ತಿರುವ ಖಾಸಗಿ ಹಣಕಾಸು ಸಂಸ್ಥೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆಯೂ ಅವರು ಕೋರಿದ್ದರು. ಅನಧಿಕೃತ ಕಡಿತಗಳನ್ನು ಮರುಪಾವತಿಸುವಂತೆ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ ಅವರು, ಈ ಕುರಿತ ದೂರುಗಳ ಮೇಲೆ ನಿಗಾ ವಹಿಸುವಂತೆ ಜಿಲ್ಲಾಧಿಕಾರಿಗಳು ಮತ್ತು ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಸೂಚಿಸುವಂತೆಯೂ ಮನವಿ ಮಾಡಿದ್ದರು.

> ಫಲಾನುಭವಿಗಳ ಸ್ಪಷ್ಟ ಲಿಖಿತ ಒಪ್ಪಿಗೆಯಿಲ್ಲದೆ ಸಾಲದ ಬಾಕಿಗಾಗಿ ಈಗಾಗಲೇ ಕಡಿತಗೊಳಿಸಲಾದ ಹಣವನ್ನು ಮರು ಜಮೆ ಮಾಡುವಂತೆ ರಾಜ್ಯ ಸರ್ಕಾರ ಬ್ಯಾಂಕುಗಳಿಗೆ ನಿರ್ದೇಶನ ನೀಡಿದೆ. ಈ ಸಂಬಂಧ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೂ ನಿರ್ದೇಶನ ಹೊರಡಿಸಲಾಗಿದೆ.
> -ಆಯುಕ್ತೆ ಉಮಾ ಮಹಾದೇವನ್

### ಹಣದ ಕಡಿತಗಳು ಅಡ್ಡಿಯಾಗುತ್ತಿವೆ

ಮುಖ್ಯಮಂತ್ರಿಗೆ ಸಲ್ಲಿಸಿದ ಮನವಿಯಲ್ಲಿ, ಮಹಿಳೆಯರ ಕೌಟುಂಬಿಕ ವೆಚ್ಚಗಳು, ಮಕ್ಕಳ ಶಿಕ್ಷಣ ಮತ್ತು ಆರ್ಥಿಕ ಸ್ವಾತಂತ್ರ್ಯಕ್ಕೆ ಬೆಂಬಲ ನೀಡುವ ಈ ಯೋಜನೆಯ ಮೂಲ ಉದ್ದೇಶಕ್ಕೆ, ಬ್ಯಾಂಕುಗಳು ಮತ್ತು ಸೂಕ್ಷ್ಮ ಹಣಕಾಸು ಸಂಸ್ಥೆಗಳು ನಡೆಸುವ ಹಣದ ಕಡಿತಗಳು ಅಡ್ಡಿಯಾಗುತ್ತಿವೆ ಎಂದು ಗೂಳಿಗೌಡ ಅವರು ಪ್ರತಿಪಾದಿಸಿದ್ದರು.



## ಪೊಲೀಸ್ ಆಯುಕ್ತರಿಂದ ತಡರಾತ್ರಿ ಕಾರ್ಯಾಚರಣೆ, 400500 ಪಬ್ - ಬಾರ್‌ಗಳಲ್ಲಿ ತಪಾಸಣೆ

• ಉದಯವಾಹಿನಿ, ಬೆಂಗಳೂರು

ನಗರದಾದ್ಯಂತ ತಡರಾತ್ರಿ ಕಾರ್ಯಾಚರಣೆ ನಡೆಸಿದ ಸುಮಾರು 1,500 ಪೊಲೀಸ್ ಸಿಬ್ಬಂದಿ, ನಿಗದಿತ ಸಮಯಕ್ಕೆ ಮುಚ್ಚುವ ನಿಯಮ, ಅಪ್ರಾಪ್ತರಿಗೆ ಮದ್ಯ ಪೂರೈಸುವುದರ ಮೇಲಿನ ನಿರ್ಬಂಧ ಹಾಗೂ ಪರವಾನಗಿ ಷರತ್ತುಗಳ ಪಾಲನೆಯ ಪರಿಶೀಲನೆಗಾಗಿ 400ರಿಂದ 500 ಪಬ್‌ಗಳು ಮತ್ತು ಬಾರ್‌ಗಳಲ್ಲಿ ತಪಾಸಣೆ ನಡೆಸಿದ್ದಾರೆ. ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ನೇತೃತ್ವದಲ್ಲಿ ನಡೆದ ಈ ಕಾರ್ಯಾಚರಣೆ ಇಂದು ಶನಿವಾರ ನಸುಕಿನ ಜಾವ 2 ಗಂಟೆಯವರೆಗೆ ಮುಂದುವರಿಯಿತು. ಇಬ್ಬರು ಜಂಟಿ ಪೊಲೀಸ್ ಆಯುಕ್ತರು ಸೇರಿದಂತೆ 19 ಐಪಿಎಸ್ ಅಧಿಕಾರಿಗಳು, ಆಯಾ ವ್ಯಾಪ್ತಿಯ ಪೊಲೀಸ್ ತಂಡಗಳು ಹಾಗೂ ಕೇಂದ್ರ ಅಪರಾಧ ವಿಭಾಗದ (ಸಿಸಿಬಿ) ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು.

ಬ್ರಿಗೇಡ್ ರಸ್ತೆಯಲ್ಲಿರುವ ಬ್ರಿಗೇಡ್ ಗಾರ್ಡನ್ ಮತ್ತು ಪೇಜ್ 3 ಸೇರಿದಂತೆ ಹಲವು ಸಂಸ್ಥೆಗಳಲ್ಲಿ ತಪಾಸಣೆ ನಡೆಸಲಾಯಿತು. ಕೋರಮಂಗಲ, ಆನಂದ್ ರಾವ್ ವೃತ್ತದ ಸುತ್ತಮುತ್ತಲಿನ ಪ್ರದೇಶಗಳು ಸೇರಿದಂತೆ ನಗರದ ವಿವಿಧೆಡೆ ಪೊಲೀಸರು ಪರಿಶೀಲನೆ ಕೈಗೊಂಡರು. ಸುದ್ದಿಗಾರರೊಂದಿಗೆ ಮಾತನಾಡಿದ ಸೀಮಂತ್ ಕುಮಾರ್ ಸಿಂಗ್, ನಿಗದಿತ ಸಮಯಕ್ಕೆ ಸಂಸ್ಥೆಗಳು ಮುಚ್ಚುತ್ತಿವೆಯೇ ಮತ್ತು ಅಪ್ರಾಪ್ತರಿಗೆ


ಉದಯವಾಹಿನಿ ಚಿತ್ರ

ಮದ್ಯ ಪೂರೈಸುತ್ತಿವೆಯೇ ಎಂಬುದನ್ನು ಪರಿಶೀಲಿಸುವುದು ಕಾರ್ಯಾಚರಣೆಯ ಉದ್ದೇಶ ಎಂದು ತಿಳಿಸಿದರು. ಈ ಅಂಶಗಳನ್ನು ಆಯಾ ವ್ಯಾಪ್ತಿಯ ಉಪ ಪೊಲೀಸ್ ಆಯುಕ್ತರು ಪರಿಶೀಲಿಸಲಿದ್ದಾರೆ ಎಂದರು.

ಪಬ್‌ಗಳನ್ನು ಮುಚ್ಚಲು ನಿಗದಿತ ಸಮಯವಿದೆ. ಆ ನಿಯಮ ಪಾಲನೆಯಾಗುತ್ತಿದೆಯೇ ಎಂಬುದನ್ನು ಪರಿಶೀಲಿಸಲು ದಾಳಿ ನಡೆಸಲಾಗಿದೆ. ಅಪ್ರಾಪ್ತರು ಮದ್ಯ ಸೇವಿಸಲು ಅವಕಾಶ ನೀಡಬಾರದು ಎಂದು ಹೇಳಿದರು. ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಲು ಪೊಲೀಸರು ಸ್ಥಳದಲ್ಲೇ ಕಾರ್ಯಾಚರಣೆ ನಡೆಸುತ್ತಿದ್ದಾರೆ ಎಂದು ತಿಳಿಸಿದರು.

**ಪರಿಶೀಲಿಸುವುದು ತಪಾಸಣೆಯ ಉದ್ದೇಶ**

ರಾತ್ರಿ 1 ಗಂಟೆಯೊಳಗೆ ಅಡುಗೆಮನೆ ಮುಚ್ಚುವುದು, ಮದ್ಯ ಪೂರೈಕೆ ನಿಲ್ಲಿಸುವುದು ಹಾಗೂ ಗ್ರಾಹಕರನ್ನು ಆವರಣದಿಂದ ಹೊರಗೆ ಕಳುಹಿಸುವ ನಿಯಮ ಪಾಲನೆಯಾಗುತ್ತಿದೆಯೇ ಎಂಬುದನ್ನು ಪರಿಶೀಲಿಸುವುದು ತಪಾಸಣೆಯ ಉದ್ದೇಶವಾಗಿತ್ತು ಎಂದು ಪೊಲೀಸರು ತಿಳಿಸಿದ್ದಾರೆ.

## ಕಂದಾಯ ಅಧಿಕಾರಿಯನ್ನು ಅಮಾನತುಗೊಳಿಸಿದ DCM ಜಿ ಪರಮೇಶ್ವರ

• ಉದಯವಾಹಿನಿ, ಬೆಂಗಳೂರು

ದೇವನಹಳ್ಳಿ ತಹಶೀಲ್ದಾರ್ ಕಚೇರಿಗೆ ಶುಕ್ರವಾರ ಅನಿರೀಕ್ಷಿತ ಭೇಟಿ ನೀಡಿದ ಉಪ ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ ಪರಮೇಶ್ವರ ಅವರು, ಕಂದಾಯ ದಾಖಲೆಗಳ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರಿದ ಅಧಿಕಾರಿಯೊಬ್ಬರನ್ನು ಅಮಾನತುಗೊಳಿಸಿದರು. ಅಲ್ಲದೆ, ಅನಗತ್ಯ ವಿಳಂಬವಿಲ್ಲದೆ ಕೆಲಸವನ್ನು ಪೂರ್ಣಗೊಳಿಸಬೇಕು ಹಾಗೂ ಕಂದಾಯ ದಾಖಲೆಗಳ ನಿರ್ವಹಣೆ, ಭೂಮಿಗೆ ಸಂಬಂಧಿಸಿದ ಅರ್ಜಿಗಳ ವಿಲೇವಾರಿ ಅಥವಾ ಸಾರ್ವಜನಿಕ ಸೇವೆಗಳ ವಿತರಣೆಯಲ್ಲಿನ ನಿರ್ಲಕ್ಷ್ಯವನ್ನು ಸಹಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾಲ್ಲೂಕು ಕಚೇರಿಗೆ ಬರುವ ಸಾರ್ವಜನಿಕರು ಎದುರಿಸುವ ಸಮಸ್ಯೆಗಳು, ಅಧಿಕಾರಿಗಳು ಅವರಿಗೆ ಹೇಗೆ ಸ್ಪಂದಿಸುತ್ತಾರೆ ಮತ್ತು ಅವರ ಅರ್ಜಿಗಳು ಯಾವ ಹಂತದಲ್ಲಿ ಬಾಕಿ ಉಳಿದಿವೆ ಎಂಬುದನ್ನು ಖುದ್ದಾಗಿ ತಿಳಿದುಕೊಳ್ಳುವುದೇ ಈ ದಿಢೀರ್ ಭೇಟಿಯ ಉದ್ದೇಶವಾಗಿತ್ತು ಎಂದು ಹೇಳಿದರು.

ದೇವನಹಳ್ಳಿ ತಹಸೀಲ್ದಾರ್ ಕಚೇರಿಯ ಎಲ್ಲಾ ವಿಭಾಗಗಳನ್ನು ಪರಿಶೀಲಿಸಿದಾಗ ಕೆಲವು ಲೋಪಗಳು ಕಂಡುಬಂದಿದ್ದು, ಅವುಗಳನ್ನು ಸರಿಪಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಸಾರ್ವಜನಿಕ ಕಾರ್ಯಗಳು ಸುಗಮವಾಗಿ ನಡೆಯುತ್ತಿವೆಯೇ ಮತ್ತು ಸರ್ಕಾರಿ ಸೇವೆಗಳು ಜನರಿಗೆ ಸರಿಯಾಗಿ ತಲುಪುತ್ತಿವೆಯೇ ಎಂಬುದನ್ನು ಪರಿಶೀಲಿಸಲು ತಮ್ಮ ದಿಢೀರ್ ಭೇಟಿಗಳು ಮುಂದುವರಿಯಲಿವೆ ಎಂದು ಪರಮೇಶ್ವರ ತಿಳಿಸಿದರು.

'ಬಗರ್ ಹುಕುಂ' ಭೂಮಿಗೆ ಸಂಬಂಧಿಸಿದ ಅರ್ಜಿಗಳ ವಿಲೇವಾರಿಯಲ್ಲಿನ ಸಮಸ್ಯೆಗಳನ್ನು ಸಾರ್ವಜನಿಕರು ತಮ್ಮ ಗಮನಕ್ಕೆ ತಂದಿದ್ದಾರೆ. ನಿರ್ದಿಷ್ಟವಾಗಿ, 18 ಕಿಮೀ ವ್ಯಾಪ್ತಿಯ ನಿಯಮದಿಂದಾಗಿ ಕೆಲವು ಅರ್ಜಿಗಳನ್ನು ತಿರಸ್ಕರಿಸಲಾಗಿದೆ ಅಥವಾ ಅವು ಇತ್ಯರ್ಥವಾಗದೆ ಉಳಿದಿವೆ ಎಂಬ ದೂರುಗಳು ವ್ಯಕ್ತವಾಗಿವೆ.


ಉದಯವಾಹಿನಿ ಚಿತ್ರ

> ಈ ನಿಯಮ ಜಾರಿಗೆ ಬರುವ ಮುನ್ನ ಸಲ್ಲಿಸಲಾದ ಅರ್ಜಿಗಳನ್ನು ಪರಿಗಣಿಸಬಹುದೇ ಎಂಬ ಬಗ್ಗೆ ಸರ್ಕಾರವು ಸೂಕ್ತ ಹಂತದಲ್ಲಿ ಚರ್ಚಿಸಲಿದೆ ಮತ್ತು ಅಗತ್ಯ ನಿರ್ದೇಶನಗಳನ್ನು ನೀಡಲಿದೆ ಎಂದು ತಿಳಿಸಿದರು.- ಜಿ ಪರಮೇಶ್ವರ

## ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಅಕ್ಟೋಬರ್ 12ರಿಂದ ದಸರಾ ಸಂಭ್ರಮ!

• ಉದಯವಾಹಿನಿ, ಬೆಂಗಳೂರು

ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವು ಅಕ್ಟೋಬರ್ 12 ರಿಂದ 17 ರವರೆಗೆ ವಾರವಿಡೀ ನಡೆಯುವ ಸಾಂಸ್ಕೃತಿಕ ಉತ್ಸವದೊಂದಿಗೆ ದಸರಾ ಸಂಭ್ರಮಕ್ಕೆ ಸಾಕ್ಷಿಯಾಗಲಿದೆ.ಟರ್ಮಿನಲ್ 2 ರ ಆಗಮನದ ಮುಂಭಾಗದ ಆವರಣದಲ್ಲಿ ನಡೆಯಲಿರುವ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತೆ ಹಾಗೂ ಗೊಂಬೆಯಾಟ ಕಲಾವಿದೆ ಅನುಪಮಾ ಹೊಸಕೆರೆ ಅವರು ರೂಪಿಸಿರುವ 'ದಸರಾ ಗೊಂಬೆ' ಪ್ರದರ್ಶನವು ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಲಿದೆ.ಅಕ್ಟೋಬರ್ 16 ರಂದು ಒಂಬತ್ತನೇ ತಲೆಮಾರಿನ ಕಲಾವಿದ ಗುಂಡುರಾಜು ಮತ್ತು ಅವರ ತಂಡವು ಪ್ರಸ್ತುತಪಡಿಸಲಿರುವ 'ತೊಗಲು ಗೊಂಬೆಯಾಟ'ದ ಮೂಲಕ ರಾಜ್ಯದ ಗೊಂಬೆಯಾಟದ ಸಂಪ್ರದಾಯಗಳನ್ನು ಪ್ರದರ್ಶಿಸಲಾಗುವುದು.


ಉದಯವಾಹಿನಿ ಚಿತ್ರ

ಇದೇ ವೇಳೆ, ದಸರಾ ಸಂದರ್ಭದಲ್ಲಿ ಮೈಸೂರಿಗೆ ಭೇಟಿ ನೀಡುವ ಪ್ರವಾಸಿಗರಿಗಾಗಿ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮವು (ವಿಶೇಷ ಪ್ರಯಾಣದ ವ್ಯವಸ್ಥೆಗಳನ್ನು ಮಾಡಿದೆ. ಇದರಲ್ಲಿ 'ಅಂಬಾರಿ' ಡಬಲ್ ಡೆಕ್ಕರ್ ಬಸ್ ಸವಾರಿ ಮತ್ತು ಏಳು ವಿಶೇಷ ಪ್ರವಾಸ ಪ್ಯಾಕೇಜ್‌ಗಳು ಸೇರಿರುತ್ತವೆ. ಅಂಬಾರಿ ಬಸ್‌ಗಳು ಬೆಳಿಗ್ಗೆ 10 ರಿಂದ ಸಂಜೆ 5 ರವರೆಗೆ ಪ್ರತಿ ಗಂಟೆಗೊಮ್ಮೆ ಸಂಚರಿಸಲಿವೆ ಮತ್ತು ಸಂಜೆ 6.30 ರಿಂದ ರಾತ್ರಿ 9ರವರೆಗೆ ವಿಶೇಷ ದೀಪಾಲಂಕಾರ ಸವಾರಿಗಳನ್ನು ನಡೆಸಲಾಗುತ್ತದೆ.

## ರಾಜ್ಯದಲ್ಲಿ ಪಡಿತರ ಅಕ್ಕಿ ಕಳ್ಳಸಾಗಣೆ ವಿರುದ್ಧ ಬೃಹತ್ ಕಾರ್ಯಾಚರಣೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಬಡವರಿಗಾಗಿ ವಿತರಿಸಲಾಗುವ ಪಡಿತರ ಅಕ್ಕಿಯನ್ನು ಕಳ್ಳಸಾಗಣೆ ಮಾಡುವವರ ವಿರುದ್ಧ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಅಧಿಕಾರಿಗಳು ಕಾರ್ಯಾಚರಣೆ ನಡೆಸಿ, ಒಟ್ಟು 5,64,992 ಕೆಜಿ ಅಕ್ರಮ ಪಡಿತರ ಅಕ್ಕಿ ಹಾಗೂ ಕಳ್ಳಸಾಗಣೆಗೆ ಬಳಸುತ್ತಿದ್ದ 24 ಲಾರಿಗಳನ್ನು ವಶಪಡಿಸಿಕೊಂಡಿದ್ದಾರೆ.

ಕಳೆದ ಮೂರು ದಿನಗಳಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನಡೆದ ತಪಾಸಣೆ ಮತ್ತು ದಾಳಿಗಳ ವೇಳೆ ಅಗತ್ಯ ವಸ್ತುಗಳ ಕಾಯ್ದೆಯಡಿ ಒಟ್ಟು 5,64,992 ಕೆಜಿ ಅಕ್ರಮ ಪಡಿತರ ಅಕ್ಕಿ ಹಾಗೂ ಕಳ್ಳಸಾಗಣೆಗೆ ಬಳಸುತ್ತಿದ್ದ 24 ಲಾರಿಗಳನ್ನು ವಶಪಡಿಸಿಕೊಳ್ಳಲಾಗಿದೆ. ಈ ಎಲ್ಲಾ ಕಾರ್ಯಾಚರಣೆಗಳಲ್ಲಿ ವಶಪಡಿಸಿಕೊಂಡ ಪಡಿತರ ಅಕ್ಕಿಯ ಅಂದಾಜು ಮೌಲ್ಯ ರೂ. 1,34,43,033 ಹಾಗೂ ವಾಹನಗಳ ಅಂದಾಜು ಮೌಲ್ಯ ರೂ. 3,41,50,000 ಆಗಿದೆ. ಹೀಗೆ ಜಪ್ತಿ ಮಾಡಲಾದ ಒಟ್ಟು ಅಕ್ಕಿ ಮತ್ತು ವಾಹನಗಳ ಮೌಲ್ಯ ರೂ. 4,75,93,033 ಆಗಿದೆ. ಇಲಾಖೆಯು ವಿವಿಧ ಪ್ರಕರಣಗಳಿಗೆ ಸಂಬಂಧಿಸಿದಂತೆ ಒಟ್ಟು 9 ಜನರ ವಿರುದ್ಧ ದೂರು ದಾಖಲಿಸಿದೆ. ಬೆಳಗಾವಿ ಜಿಲ್ಲಾ ಆಹಾರ ಇಲಾಖೆ ಹಾಗೂ ವಾಣಿಜ್ಯ ತೆರಿಗೆ ಅಧಿಕಾರಿಗಳು ಬೆಳಗಾವಿಯಿಂದ ಮಹಾರಾಷ್ಟ್ರಕ್ಕೆ ಬಣ್ಣದ ಪ್ಯಾಕೆಟ್‌ಗಳಲ್ಲಿ ಮುಕ್ತ ಮಾರುಕಟ್ಟೆಯಲ್ಲಿ ಮಾರಾಟ ಮಾಡಲು ಸಾಗಿಸುತ್ತಿದ್ದ 71,800 ಕೆಜಿ ಅಕ್ಕಿ ಮತ್ತು 3 ಲಾರಿಗಳನ್ನು ವಶಪಡಿಸಿಕೊಂಡಿದ್ದಾರೆ.

# ಇಬ್ಬರು BJP ಬೂತ್ ಮಟ್ಟದ ಏಜೆಂಟ್‌ಗಳ ವಿರುದ್ಧದ FIR ಗೆ ಕರ್ನಾಟಕ ಹೈಕೋರ್ಟ್ ತಡೆ

## ಎನ್‌ಎಸ್‌ಎಸ್‌ನ ಸೆಕ್ಷನ್ 174(2) ರ ಅಡಿಯಲ್ಲಿ ಮ್ಯಾಜಿಸ್ಟ್ರೇಟ್ ಆದೇಶವಿಲ್ಲದೆ ಪೊಲೀಸರು ಇಂತಹ ಅಪರಾಧದ ತನಿಖೆ ನಡೆಸಲು ಸಾಧ್ಯವಿಲ್ಲ

• ಉದಯವಾಹಿನಿ, ಬೆಂಗಳೂರು

1 ಕರ್ನಾಟಕ ಹೈಕೋರ್ಟ್ ತಡೆ ನೀಡಿದೆ
2 ಬಿಜೆಪಿ, ಆರ್‌ಎಸ್‌ಎಸ್ ಕಾರ್ಯಕರ್ತರು
3 ಬಿಎನ್‌ಎಸ್‌ಎಸ್‌ನ ಸೆಕ್ಷನ್ 174(2) ಅಡಿ

ಮಲ್ಲೇಶ್ವರಂ ವಿಧಾನಸಭಾ ಕ್ಷೇತ್ರದ ವಾರ್ಡ್ ಸಂಖ್ಯೆ 64ರ 778 ಮತದಾರರು ಹಾಗೂ ವಾರ್ಡ್ ಸಂಖ್ಯೆ 45ರ 136 ಮತದಾರರಿಗೆ ಸಂಬಂಧಿಸಿದಂತೆ 'ಫಾರ್ಮ್-7' ಅಡಿ ಆಕ್ಷೇಪಣೆಗಳನ್ನು ಸಲ್ಲಿಸಿದ ಆರೋಪದ ಮೇಲೆ, ಬಿಜೆಪಿ ಬೂತ್ ಮಟ್ಟದ ಏಜೆಂಟ್‌ಗಳಾದ ಜಿಎಸ್ ವಸಂತ ಲಕ್ಷ್ಮಿ ಮತ್ತು ದೀಪಕ್ ಸಿಂಗ್ ಆರ್ ವಿರುದ್ಧ ದಾಖಲಿಸಲಾಗಿದ್ದ ಎಫ್‌ಐಆರ್‌ಗಳಿಗೆ ಕರ್ನಾಟಕ ಹೈಕೋರ್ಟ್ ತಡೆ ನೀಡಿದೆ.

2023ರ ಚುನಾವಣೆಯಲ್ಲಿ ಮಲ್ಲೇಶ್ವರಂ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಅನೂಪ್ ಅಯ್ಯಂಗಾರ್ ಅವರು ಅಕ್ಟೋಬರ್ 2 ಮತ್ತು 5ರಂದು ಯಶವಂತಪುರ ಪೊಲೀಸ್ ಠಾಣೆಯಲ್ಲಿ ದಾಖಲಿಸಿದ ಎಫ್‌ಐಆರ್‌ಗಳ ಸಿಂಧುತ್ವವನ್ನು ಪ್ರಶ್ನಿಸಿ ವಸಂತ ಲಕ್ಷ್ಮಿ ಮತ್ತು ದೀಪಕ್ ಸಿಂಗ್ ಸಲ್ಲಿಸಿದ್ದ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಅನಂತ ರಾಮನಾಥ ಹೆಗಡೆ ಅವರು ಈ ಮಧ್ಯಂತರ ಆದೇಶ ಹೊರಡಿಸಿದ್ದಾರೆ.ಕರ್ನಾಟಕದ ಮುಖ್ಯ ಚುನಾವಣಾಧಿಕಾರಿಗಳು ಜೂನ್ 23, 2026 ರಂದು ಹೊರಡಿಸಿದ ಅಧಿಸೂಚನೆಯ ಅನ್ವಯ ತಮ್ಮ ಕರ್ತವ್ಯಗಳನ್ನು ನಿರ್ವಹಿಸುತ್ತಿದ್ದ 'ಬೂತ್ ಮಟ್ಟದ ಏಜೆಂಟ್‌ಗಳು' ತಾವೆಂದು ಅರ್ಜಿದಾರರು ನ್ಯಾಯಾಲಯಕ್ಕೆ ತಿಳಿಸಿದ್ದಾರೆ. ಈ ಅಧಿಸೂಚನೆಯು, ಮಾನ್ಯತೆ ಪಡೆದ ರಾಜಕೀಯ ಪಕ್ಷಗಳನ್ನು ಪ್ರತಿನಿಧಿಸುವ ಬೂತ್ ಮಟ್ಟದ ಏಜೆಂಟ್‌ಗಳ ಜೊತೆಗೂಡಿ ಕರಡು


ಉದಯವಾಹಿನಿ ಚಿತ್ರ

ಮತದಾರರ ಪಟ್ಟಿಯನ್ನು ಪರಿಶೀಲಿಸುವಂತೆ ಹಾಗೂ ಪಟ್ಟಿಯಲ್ಲಿನ ದೋಷಗಳು ಅಥವಾ ಅಗತ್ಯವಿರುವ ತಿದ್ದುಪಡಿಗಳನ್ನು ಗುರುತಿಸುವಂತೆ ಬೂತ್ ಮಟ್ಟದ ಅಧಿಕಾರಿಗಳಿಗೆ ನಿರ್ದೇಶಿಸುತ್ತದೆ.

ಹಕ್ಕು ಪ್ರತಿಪಾದನೆಗಳು ಹಾಗೂ ಆಕ್ಷೇಪಣೆಗಳನ್ನು ಸಲ್ಲಿಸುವುದು ಮತ್ತು ಅವುಗಳ ಇತ್ಯರ್ಥವು 'ಜನತಾ ಪ್ರಾತಿನಿಧ್ಯ ಕಾಯ್ದೆ'ಯ ಭಾಗ-3 ಹಾಗೂ 'ಮತದಾರರ ನೋಂದಣಿ ನಿಯಮಗಳ' ವ್ಯಾಪ್ತಿಗೆ ಒಳಪಡುತ್ತವೆ ಎಂದು ಪ್ರತಿಪಾದಿಸಿದ ಅರ್ಜಿದಾರರು, ಜನತಾ ಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್ 31ರ ಅಡಿಯಲ್ಲಿನ ಅಪರಾಧವು ಒಂದು ವರ್ಷದವರೆಗಿನ ಜೈಲು ಶಿಕ್ಷೆಗೆ ಗುರಿಯಾಗುವಂಥದ್ದಾಗಿದ್ದು, ಅಡಿಯಲ್ಲಿ ಇದು 'ಪೊಲೀಸರು ವಾರಂಟ್ ಇಲ್ಲದೆ ಬಂಧಿಸುವ ಅಧಿಕಾರವಿಲ್ಲದ' ಮತ್ತು 'ಜಾಮೀನು ಪಡೆಯಬಹುದಾದ' ಅಪರಾಧವಾಗಿದೆ ಎಂದು ತಿಳಿಸಿದರು. ಬಿಎನ್‌ಎಸ್‌ಎಸ್‌ನ ಸೆಕ್ಷನ್ 174(2) ರ ಅಡಿಯಲ್ಲಿ ಮ್ಯಾಜಿಸ್ಟ್ರೇಟ್ ಆದೇಶವಿಲ್ಲದೆ ಪೊಲೀಸರು ಇಂತಹ ಅಪರಾಧದ ತನಿಖೆ ನಡೆಸಲು ಸಾಧ್ಯವಿಲ್ಲ. ಆದಾಗ್ಯೂ, ಪ್ರಶ್ನಾರ್ಹ ಎಫ್‌ಐಆರ್‌ಗಳನ್ನು ದಾಖಲಿಸುವ ಮೂಲಕ ಕಡ್ಡಾಯವಾದ ಶಾಸನಬದ್ಧ ನಿರ್ಬಂಧಗಳನ್ನು ಬದಿಗೊತ್ತಲಾಗಿದೆ; ಆ ಮೂಲಕ, ಅನ್ನು 7 ವರ್ಷಗಳವರೆಗೆ ಶಿಕ್ಷೆ ವಿಧಿಸಬಹುದಾದ ಪರಿವರ್ತಿಸಲಾಗಿದೆ ಎಂದು ಅವರು ತಿಳಿಸಿದರು.

ಆರ್‌ಪಿ ಕಾಯಿದೆಯ ಸೆಕ್ಷನ್ 22 ಮತ್ತು ನಿಯಮ 13(2)ರ ಅನ್ವಯ, ಮತದಾರರ ಪಟ್ಟಿಯಲ್ಲಿ ಈಗಾಗಲೇ ಹೆಸರನ್ನು ಹೊಂದಿರುವ ಯಾವುದೇ ವ್ಯಕ್ತಿಯು, ಮತ್ತೊಬ್ಬರ ಹೆಸರನ್ನು ಪಟ್ಟಿಯಲ್ಲಿ ಸೇರಿಸುವುದನ್ನು ಆಕ್ಷೇಪಿಸಲು 'ನಮೂನೆ 7' ಅನ್ನು ಬಳಸಬಹುದು; ಅಲ್ಲದೆ, ಮತದಾರರೊಬ್ಬರು ಸಾಮೂಹಿಕವಾಗಿ ಆಕ್ಷೇಪಣೆಗಳನ್ನು ಸಲ್ಲಿಸುವುದಕ್ಕೆ ಯಾವುದೇ ನಿರ್ಬಂಧವಿಲ್ಲ ಎಂದು ಅರ್ಜಿಯಲ್ಲಿ ಹೇಳಲಾಗಿದೆ.

> ಈ ಪ್ರಕರಣದಲ್ಲಿ, ಚುನಾವಣಾ ಯಾಂತ್ರಿಕತೆಯ ಮುಂದೆ ಇನ್ನೂ ಬಾಕಿಯಿರುವ ಆಕ್ಷೇಪಣೆಗಳ ಸತ್ಯಾಸತ್ಯತೆಯ ಕುರಿತು ಖಾಸಗಿ ರಾಜಕೀಯ ಪ್ರತಿಸ್ಪರ್ಧಿಯೊಬ್ಬರು ಆರಂಭಿಸಿದ ಸಮಾನಾಂತರ ಪೊಲೀಸ್ ತನಿಖೆಯು, ಸಾಂವಿಧಾನಿಕ ಕಾರ್ಯವೊಂದರ ನಿರ್ವಹಣೆಯ ಮಧ್ಯದಲ್ಲಿಯೇ ಅದಕ್ಕೆ ಅಡ್ಡಿಪಡಿಸುತ್ತದೆ ಎಂದು ಆರೋಪಿಸಿದ್ದಾರೆ.-ದೀಪಕ್ ಸಿಂಗ್

**ಶಾಶ್ವತವಾಗಿ ಸ್ಥಳಾಂತರ**

ಬಿಜೆಪಿ ಮತ್ತು ಆರ್‌ಎಸ್‌ಎಸ್ ಕಾರ್ಯಕರ್ತರು ನಿರ್ದಿಷ್ಟ ಸಮುದಾಯವೊಂದನ್ನು ಗುರಿಯಾಗಿಸಿಕೊಂಡು, ಮತಕ್ಷೇತ್ರದಲ್ಲಿಯೇ ವಾಸಿಸುತ್ತಿದ್ದ ಮತದಾರರು ಗೈರುಹಾಜರಾಗಿದ್ದಾರೆ ಅಥವಾ ಶಾಶ್ವತವಾಗಿ ಸ್ಥಳಾಂತರಗೊಂಡಿದ್ದಾರೆ ಎಂದು ಹೇಳಿ 'ಫಾರ್ಮ್ 7'ಗಳನ್ನು ಸಲ್ಲಿಸಿದ್ದಾರೆ ಎಂದು ಆರೋಪಿಸಲಾಗಿದೆ.

ಶ್ರೀ ಆಂಜನೇಯ ದೇವಸ್ಥಾನದ ಆಡಳಿತಕ್ಕೆ ಸಂಬಂಧಿಸಿದಂತೆ ಕರ್ನಾಟಕ ಹೈಕೋರ್ಟ್ ಮಹತ್ವದ ತೀರ್ಪು ನೀಡಿದ್ದು, ಮುಜರಾಯಿ ಇಲಾಖೆಗೆ ಭಾರಿ ಹಿನ್ನಡೆಯಾಗಿದೆ

# ಅಂಜನಾದ್ರಿ ಬೆಟ್ಟದ ವಿವಾದ: ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಶಾಕ್

**ಉದಯವಾಹಿನಿ, ಧಾರವಾಡ**

ಹನುಮಂತನ ಜನ್ಮಸ್ಥಳವಾಗಿರುವ, ಕೊಪ್ಪಳ ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಅಂಜನಾದ್ರಿ ಬೆಟ್ಟದ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ವಿವಾದಕ್ಕೆ ಸಂಬಂಧಿಸಿದಂತೆ ಕರ್ನಾಟಕ ಹೈಕೋರ್ಟ್‌ನ ಧಾರವಾಡ ಪೀಠವು ರಾಜ್ಯ ಸರ್ಕಾರಕ್ಕೆ ಭಾರಿ ಹಿನ್ನಡೆ ನೀಡುವ ಮಹತ್ವದ ತೀರ್ಪನ್ನು ಪ್ರಕಟಿಸಿದೆ. ಅದರಂತೆ, ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠವು, ಅಂಜನಾದ್ರಿ ದೇವಸ್ಥಾನವನ್ನು ಸರ್ಕಾರದ ಹಿಂದೂ ಧಾರ್ಮಿಕ ಮತ್ತು ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಗೆ ಒಳಪಡಿಸಿ ಹೊರಡಿಸಲಾಗಿದ್ದ ಅಧಿಸೂಚನೆ ಹಾಗೂ ಆಡಳಿತಾಧಿಕಾರಿ ನೇಮಕದ ಆದೇಶ ಎರಡನ್ನೂ ಸಂಪೂರ್ಣವಾಗಿ ರದ್ದುಗೊಳಿಸಿದೆ.

**1.** ನೈಸರ್ಗಿಕ ನ್ಯಾಯದ ತತ್ವಗಳ ಉಲ್ಲಂಘನೆ
**2.** ಸರ್ಕಾರಕ್ಕೆ ಮುಂದಿನ ಅವಕಾಶಗಳೇನು?
**3.** ಇಲಾಖೆ ಅಧಿಕೃತ ಅಧಿಸೂಚನೆ ಹೊರಡಿಸಿತು

2018 ರಲ್ಲಿ ಅಂದಿನ ರಾಜ್ಯ ಸರ್ಕಾರವು ಅಂಜನಾದ್ರಿ ದೇವಸ್ಥಾನವನ್ನು ಹಿಂದೂ ಧಾರ್ಮಿಕ ಮತ್ತು ಧಾರ್ಮಿಕ ದತ್ತಿ (ಮುಜರಾಯಿ) ಇಲಾಖೆಯ ವ್ಯಾಪ್ತಿಗೆ ಒಳಪಡಿಸಿ ಅಧಿಕೃತ ಅಧಿಸೂಚನೆ ಹೊರಡಿಸಿತು. ಅದರಂತೆ, ದೇವಸ್ಥಾನದ ಆಡಳಿತದಲ್ಲಿ ಅಕ್ರಮಗಳು ನಡೆಯುತ್ತಿವೆ ಮತ್ತು ಸೂಕ್ತ ನಿರ್ವಹಣೆ ಇಲ್ಲ ಎಂಬ ಕಾರಣ ನೀಡಿ, ಕೊಪ್ಪಳ ಜಿಲ್ಲಾಡಳಿತವು ದೇವಸ್ಥಾನದ ಉಸ್ತುವಾರಿಗೆ ತಹಶೀಲ್ದಾರ್ ದರ್ಜೆಯ ಕಾರ್ಯನಿರ್ವಾಹಕ ಅಧಿಕಾರಿಯನ್ನು ನೇಮಕ ಮಾಡಿ ಆದೇಶ ಹೊರಡಿಸಿತು.

ಆದರೆ, ದೇವಸ್ಥಾನದ ಪ್ರಧಾನ ಅರ್ಚಕರಾದ ವಿದ್ಯಾದಾಸ ಬಾಬಾ ಅವರು ಸರ್ಕಾರದ ಈ ಕ್ರಮವನ್ನು ತೀವ್ರವಾಗಿ ವಿರೋಧಿಸಿದರು. ತಮ್ಮ ಪೂರ್ವಜರ ಕಾಲದಿಂದಲೂ ತಾವೇ ದೇವಸ್ಥಾನದ ಪೂಜೆ ಹಾಗೂ ನಿರ್ವಹಣೆಯನ್ನು ಮಾಡಿಕೊಂಡು ಬರುತ್ತಿದ್ದು, ಇದು ತಮಗೆ ಸೇರಿದ ಪಾರಂಪರಿಕ ಹಕ್ಕಾಗಿದೆ ಎಂದು ವಾದಿಸಿದರು. 1997ರ ಧಾರ್ಮಿಕ ದತ್ತಿ ಕಾಯ್ದೆಯಡಿ ದೇವಸ್ಥಾನವನ್ನು ವಶಕ್ಕೆ ಪಡೆಯುವ ಮುನ್ನ



ಉದಯವಾಹಿನಿ ಚಿತ್ರ

> 1997ರ ಕರ್ನಾಟಕ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಕಾಯ್ದೆಯಡಿ, ದೇವಸ್ಥಾನವನ್ನು ಮುಜರಾಯಿ ಇಲಾಖೆಯ ವ್ಯಾಪ್ತಿಗೆ ತಂದಿದ್ದ 2018ರ ಸೆಪ್ಟೆಂಬರ್ 24ರ ಅಧಿಸೂಚನೆ ಮತ್ತು ಆಡಳಿತ ನಿರ್ವಹಣೆಗಾಗಿ ಕೊಪ್ಪಳ ಜಿಲ್ಲಾಧಿಕಾರಿಗಳು ಹೊರಡಿಸಿದ್ದ 2018ರ ಡಿಸೆಂಬರ್ 15ರ ಆಡಳಿತಾಧಿಕಾರಿ/ಕಾರ್ಯನಿರ್ವಾಹಕ ಅಧಿಕಾರಿ ನೇಮಕದ ಆದೇಶ ಎರಡನ್ನೂ ರದ್ದುಪಡಿಸಿದೆ.
>
> – ಎಂ. ನಾಗಪ್ರಸನ್ನ, ನ್ಯಾಯಮೂರ್ತಿ

### ಪೂಜೆ ಸಲ್ಲಿಸಲು ಅಡ್ಡಿ

**ಜೊತೆಗೆ, ಸರ್ಕಾರ ಮತ್ತು ಜಿಲ್ಲಾಡಳಿತವು ತಮಗೆ ಯಾವುದೇ ಮುನ್ಸೂಚನೆ ಅಥವಾ ನೋಟಿಸ್ ನೀಡದೆ, ಏಕಪಕ್ಷೀಯವಾಗಿ ದೇವಸ್ಥಾನವನ್ನು ಮುಜರಾಯಿ ಇಲಾಖೆಗೆ ಸೇರಿಸಿದೆ ಹಾಗೂ ತಮಗೆ ಪೂಜೆ ಸಲ್ಲಿಸಲು ಅಡ್ಡಿಪಡಿಸುತ್ತಿದೆ ಎಂದು ಆರೋಪಿಸಿ ಹೈಕೋರ್ಟ್ ಮೆಟ್ಟಿಲೇರಿದರು.**

ಸಂಬಂಧಪಟ್ಟ ಅರ್ಚಕರಿಗೆ ಅಥವಾ ಆಡಳಿತ ಮಂಡಳಿಗೆ ಯಾವುದೇ ಪೂರ್ವಭಾವಿ ಸೂಕ್ತ ನೋಟಿಸ್ ನೀಡಿಲ್ಲ ಮತ್ತು ಅವರ ವಾದ ಆಲಿಸಿಲ್ಲ. ಈ ಪ್ರಕ್ರಿಯೆಯಲ್ಲಿ ಜಿಲ್ಲಾಡಳಿತ ನಿಯಮ ಪಾಲಿಸದ ಕಾರಣ ಸರ್ಕಾರದ ಕ್ರಮ ದೋಷಪೂರಿತವಾಗಿದೆ ಎಂದ ಕೋರ್ಟ್, ಈ ಹಿಂದೆ ಸುಪ್ರೀಂ ಕೋರ್ಟ್ ಮತ್ತು ಹೈಕೋರ್ಟ್ ನೀಡಿದ್ದ ಮಧ್ಯಂತರ ಆದೇಶಗಳ ಅನ್ವಯ, ಪ್ರಧಾನ ಅರ್ಚಕರಾದ ವಿದ್ಯಾದಾಸ ಬಾಬಾ ಅವರೇ ದೇವಸ್ಥಾನದಲ್ಲಿ ಪೂಜೆ ಮತ್ತು ಅರ್ಚಕ ಕರ್ತವ್ಯಗಳನ್ನು ಮುಂದುವರಿಸಲು ಪೂರ್ಣ ಪ್ರಮಾಣದ ಅನುಮತಿ ನೀಡಿದೆ. ಏತನ್ಮಧ್ಯೆ, ಈ ತೀರ್ಪಿನಿಂದ ದೇವಸ್ಥಾನದ ಮೇಲೆ ಸರ್ಕಾರಕ್ಕೆ ಯಾವುದೇ ಶಾಶ್ವತ ಹಕ್ಕಿಲ್ಲ ಎಂದು ಅರ್ಥವಲ್ಲ ಎಂದು ಸ್ಪಷ್ಟಪಡಿಸಿದ ಹೈಕೋರ್ಟ್, ಒಂದೊಮ್ಮೆ ರಾಜ್ಯ ಸರ್ಕಾರವು ಅಂಜನಾದ್ರಿ ದೇವಸ್ಥಾನವನ್ನು ತನ್ನ ವ್ಯಾಪ್ತಿಗೆ ತರಲು ಬಯಸಿದರೆ, ಕಾನೂನುಬದ್ಧ ಪ್ರಕ್ರಿಯೆಯನ್ನು ಅನುಸರಿಸಿ, ಸಂಬಂಧಪಟ್ಟವರಿಗೆ ನೋಟಿಸ್ ನೀಡಿ, ವಿಚಾರಣೆ ನಡೆಸಿದ ಬಳಿಕ ಹೊಸದಾಗಿ ಅಧಿಸೂಚನೆ ಹೊರಡಿಸಬಹುದು ಎಂದು ಸರ್ಕಾರಕ್ಕೆ ಅವಕಾಶ ನೀಡಿದೆ.

## ಉದ್ಯೋಗದ ಆಮಿಷವೊಡ್ಡಿ ವಂಚಿಸುತ್ತಿದ್ದ ಗ್ಯಾಂಗ್‌ಗೆ ಪೊಲೀಸ್ ಬ್ರೇಕ್

**ಉದಯವಾಹಿನಿ, ಬಳ್ಳಾರಿ**

ಕಳೆದ ಐದು ತಿಂಗಳಿಂದ ಉದ್ಯೋಗ ಮತ್ತು ಅದನ್ನು ಅನ್ ಲೈನ್ ನಲ್ಲಿಮಾಡಲು ಲ್ಯಾಪ್ ಟಾಪ್ ಕೊಡಿಸುವುದಾಗಿ ಟ್ರೇಡಿಂಗ್ ಹೆಸರಿನಲ್ಲಿ ಅನಂತಪುರಂ ಗ್ಯಾಂಗ್ ನಗರದ ಕಣೇಕಲ್ ಬಸ್ ನಿಲ್ದಾಣದ ಬಳಿ ಕಚೇರಿ ತೆರೆದು ಆಂದ್ರಪ್ರದೇಶದ ಜನರನ್ನು ವಂಚಿಸುತ್ತಿತ್ತು. ಈ ಬಗ್ಗೆ ಮಾಹಿತಿ ಪಡೆದ ಸೈಬರ್ ಠಾಣೆ ಪೊಲೀಸರು. ಬೊಮ್ಮನಾಳ್ ರಸ್ತೆಯಲಿರುವ ಮನೆಯೊಂದನ್ನು ಆಯುರ್ವೇದ ಉತ್ಪನ್ನ ಮಾರಾಟ ಮಾಡುತ್ತೇವೆಂದು



ಬಾಡಿಗೆ ಪಡೆದು. ಟ್ರಾನ್ಸ್ ಇಂಡಿಯಾ ಕೋ.ಪ್ರೈ.ಲಿಮಿಟೆಡ್ ಎಂಬ ಹೆಸರಿನ ಕಛೇರಿಯ ಮೇಲೆ ದಾಳಿಮಾಡಿ. ಅನಂತಪುರಂನ ಸತೀಶ ನಾಯ್ಕ ಎಂಬಾತ 8 ಜನ ಮಹಿಳೆಯರು, 7 ಜನ ಹುಡುಗರನ್ನು ಟೆಲಿಕಾಲರ್ಸ್ ಗಳಾಗಿ ಇಟ್ಟುಕೊಂಡು ಸಾರ್ವಜನಿಕರಿಗೆ ಉದ್ಯೋಗ, ಲ್ಯಾಪ್ಟಾಪ್, ಹಾಗು ಟ್ರೇಡಿಂಗ್ ಮೆಟೇರಿಯಲ್ಗಳನ್ನು ಕೊಡುವುದು ನಂಬಿಸಿ. ಅವರಿಂದ ಹಣವನ್ನು ಆನ್ಲೈನ್ ಮೂಲಕ ಕೆಲಸ ಮಾಡುತ್ತಿರುವ ಸಿಬ್ಬಂದಿಯವರ ಬ್ಯಾಂಕ್ ಖಾತೆಗೆ ಜಮಾ ಮಾಡಿಸಿ. ಈ ಹಣವನ್ನು ಕೆಲಸಗಾರರ ಬ್ಯಾಂಕ್ ಖಾತೆ ಗಳಿಂದ ವಿತ್ ಡ್ರಾ ಮಾಡಿಸಿ ದುರುಪಯೋಗ ಮಾಡಿಕೊಂಡು ಸಾರ್ವಜನಿಕರಿಗೆ ಆನ್ಲೈನ್ ವಂಚನೆ ಮಾಡುತ್ತಿದ್ದ. ಆರೋಪಿಯು ಟೆಲಿಕಾಲರ್ಸ್ ಗಳಿಗೆ ಯಾವುದೇ ಸಂಬಳವನ್ನು ನೀಡದೇ, ಕಮೀಷನ್ ನೀಡುತ್ತಿದ್ದನು. ವಂಚನೆಗೊಳಗಾದವರು ಬಹುತೇಕರು ಆಂದ್ರಪ್ರದೇಶದ ವರೇ ಆಗಿದ್ದಾರೆ. ಒಬ್ಬರಿಂದ 10 ರಿಂದ 15 ಸಾವಿರ ರೂ ಪಡೆಯುವ ಸಿಬ್ಬಂದಿಗೆ 900 ಕಮೀಷನ್ ನೀಡುತ್ತಿದ್ದನಂತೆ.ಮುಖ್ಯ ಆರೋಪಿ ನಾಪತ್ತೆಯಾಗಿದ್ದಾನೆ. ಕಾಲ್ ಸೆಂಟರ್ ನಲ್ಲಿ 15 ಜನರಿಂದ ಮಾಹಿತಿ ಪಡೆದು ಕಳಿಸಲಾಗಿದೆ.

## ಬಂಟ್ಸ್ ಹಾಸ್ಟೆಲ್ ಗಣೇಶೋತ್ಸವ: ಧನ್ಯೋತ್ಸವ

**ಉದಯವಾಹಿನಿ, ಮಂಗಳೂರು**

ಬಂಟರ ಯಾನೆ ನಾಡವರ ಮಾತೃ ಸಂಘ, ಶ್ರೀ ಸಿದ್ಧಿವಿನಾಯಕ ಪ್ರತಿಷ್ಠಾನ ಹಾಗೂ ಸಾರ್ವಜನಿಕ ಶ್ರೀ ಗಣೇಶೋತ್ಸವ ಸಮಿತಿಯ ಆಶ್ರಯದಲ್ಲಿ ಬಂಟ್ಸ್ ಹಾಸ್ಟೆಲ್‌ನಲ್ಲಿ ನಡೆದ 20ನೇ ವರ್ಷದ ಸಾರ್ವಜನಿಕ ಶ್ರೀ ಗಣೇಶೋತ್ಸವದ ಯಶಸ್ಸಿಗೆ ಶ್ರಮಿಸಿದ ಕಾರ್ಯಕರ್ತರಿಗೆ ಧನ್ಯೋತ್ಸವ ಕಾರ್ಯಕ್ರಮ ಬಂಟ್ಸ್ ಹಾಸ್ಟೇಲ್ ಬಳಿ ಇರುವ ಶ್ರೀಮತಿ ಗೀತಾ ಎಸ್.ಎಂ. ಶೆಟ್ಟಿ ಸಭಾಂಗಣದಲ್ಲಿ ಆಯೋಜಿಸಲಾಯಿತು. ಗಣೇಶೋತ್ಸವ


ಉದಯವಾಹಿನಿ ಚಿತ್ರ

ಸಮಿತಿಯ ಅಧ್ಯಕ್ಷ ಜಯಶೀಲ ಅಡ್ಯಂತಾಯ ಅಡ್ಯಾರ್ ಗುತ್ತು ಅವರು ಪ್ರಸ್ತಾವನೆಗೈದು ಮಾತನಾಡಿ, 3 ದಿನಗಳ ಕಾಲ ಆಯೋಜಿಸಲಾದ ಗಣೇಶೋತ್ಸವ ಅತ್ಯಂತ ಶ್ರದ್ಧಾ ಭಕ್ತಿಯಿಂದ ನಡೆದಿದ್ದು, ಈ ನಿಟ್ಟಿನಲ್ಲಿ ಫಲಾಪೇಕ್ಷೆ ಇಲ್ಲದೆ ದುಡಿದ ಕಾರ್ಯ ಕರ್ತ ಬಂಧುಗಳು ಅಭಿನಂದನಾರ್ಹರಾಗಿದ್ದಾರೆ ಎಂದರು. ಬಂಟರ ಯಾನೆ ನಾಡವರ ಮಾತೃ ಸಂಘದ ಅಧ್ಯಕ್ಷ, ಸಿದ್ದಿ ವಿನಾಯಕ ಪ್ರತಿಷ್ಠಾನದ ಮ್ಯಾನೆಜಿಂಗ್ ಟ್ರಸ್ಟಿ ಅಜಿತ್ ಕುಮಾರ್ ರೈ ಮಾಲಾಡಿ ಅವರು ಮಾತನಾಡಿ, ಸಮಿತಿಯ ನೂರಾರು ಮಂದಿ ಮನಪೂರ್ವಕವಾಗಿ ದುಡಿದ ಪರಿಣಾಮವಾಗಿ ಗಣೇಶೋತ್ಸವದ ಎಲ್ಲಾ ಕಾರ್ಯಕ್ರಮಗಳು ಅತ್ಯಂತ ಯಶಸ್ವಿಯಾಗಲು ಸಾಧ್ಯವಾಯಿತು ಎಂದರು. ಸಿದ್ಧಿವಿನಾಯಕ ಪ್ರತಿಷ್ಟಾನದ ಟ್ರಸ್ಟಿ ಡಾ.ಆಶಾಜ್ಯೋತಿ ರೈ ಅವರು ಬಂಟ ಕಲಾ ಸಂಗಮದ ಬಗ್ಗೆ ಹಾಗೂ ಸಂಚಾಲಕ ಕಿರಣ್ ಪಕ್ಕಳ ಅವರು ಬಂಟ ಕ್ರೀಡಾಕೂಟದ ಯಶಸ್ಸಿನ ಬಗ್ಗೆ ಮಾತನಾಡಿದರು. ಸಮಿತಿಯ ಸಂಚಾಲಕ ದಿವಾಕರ ಸಾಮಾನಿ ಚೇಳಾರ್ ಗುತ್ತು ಅವರು ವಿವಿಧ ಉಪಸಮಿತಿಗಳ ಕೆಲಸ ಕಾರ್ಯಗಳನ್ನು ಶ್ಲಾಘಿಸಿದರು. ಕೋಶಾಧಿಕಾರಿ ಪ್ರತಿಮಾ ಶೆಟ್ಟಿ ಲೆಕ್ಕಪತ್ರದ ವಿವರ ನೀಡಿದರು.

## ಸಾಕಾ ಸ್ಟೋನ್ ಕ್ರಷರ್‌ಗೆ ಮುಚ್ಚುವ ಆದೇಶವಿದ್ದರೂ ಕ್ರಮವಿಲ್ಲ

**ಉದಯವಾಹಿನಿ, ಮುದಗಲ್ಲ**

ಪಟ್ಟಣದ ನವೋದಯ ಶಾಲೆ ಸಮೀಪದಲ್ಲಿರುವ ಸಾಕಾ ಸ್ಟೋನ್ ಕ್ರಷರ್‌ಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಕೇಂದ್ರ ಕಚೇರಿ ಬೆಂಗಳೂರಿನಿಂದ ಮುಚ್ಚುವ ಆದೇಶ ಹಾಗೂ ವಿದ್ಯುತ್ ಸಂಪರ್ಕ ಕಡಿತಗೊಳಿಸುವಂತೆ ಆದೇಶ ಜಾರಿಯಾಗಿದ್ದರೂ, ಕ್ರಷರ್ ಮುಚ್ಚುವ ಕ್ರಮ ಇನ್ನೂ ಸಮರ್ಪಕವಾಗಿ ಜಾರಿಯಾಗಿಲ್ಲ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ಮಂಡಳಿಯು ವಿಧಿಸಿರುವ ನಿಯಮಗಳು ಹಾಗೂ ಷರತ್ತುಗಳನ್ನು ಪಾಲಿಸದೆ ಕ್ರಷರ್ ನಡೆಸಲಾಗುತ್ತಿದೆ. ಇದರಿಂದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಧೂಳು ಹರಡುತ್ತಿದ್ದು, ಸ್ಥಳೀಯ ನಿವಾಸಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಈ ಕುರಿತು ಸಾರ್ವಜನಿಕರು ದೂರು ನೀಡಿದ ಹಿನ್ನೆಲೆಯಲ್ಲಿ ಮಾಲಿನ್ಯ ನಿಯಂತ್ರಣ ಮಂಡಳಿಯು ಕ್ರಷರ್ ಮುಚ್ಚುವ ಆದೇಶ ಹೊರಡಿಸಿದೆ ಎನ್ನಲಾಗಿದೆ.

ಮಾಲಿನ್ಯ ನಿಯಂತ್ರಣ ಕ್ರಮಗಳನ್ನು ಸಮರ್ಪಕವಾಗಿ ಅಳವಡಿಸಿಕೊಂಡು, ನಿಯಮಾನುಸಾರ ಅಗತ್ಯ ಅನುಮತಿಗಳನ್ನು ಪಡೆದ ನಂತರವಷ್ಟೇ ಮುಂದಿನ ಕಾರ್ಯಚಟುವಟಿಕೆಗಳನ್ನು ಕೈಗೊಳ್ಳಬೇಕಾಗಿದೆ. ಆದರೆ, ಮುಚ್ಚುವ ಆದೇಶ ಜಾರಿಗೊಳಿಸುವಲ್ಲಿ ಸಂಬಂಧಪಟ್ಟ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದಾರೆ ಎಂಬುದು ಸ್ಥಳೀಯರ ಆರೋಪವಾಗಿದೆ. ಮಂಡಳಿಯ ರಾಯಚೂರು ಪರಿಸರ ಅಧಿಕಾರಿ ಬಿ.ಕೆ. ಸಂತೋಷ್ ಹಾಗೂ ಹೊಸಪೇಟೆ ವಿಭಾಗೀಯ ಕಚೇರಿಯ ಹಿರಿಯ ಪರಿಸರ ಅಧಿಕಾರಿ ಮುರಳೀಧರ್ ಅವರು ಮುಚ್ಚುವ ಆದೇಶವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವಲ್ಲಿ ವಿಫಲರಾಗಿದ್ದಾರೆ ಎಂದು ಸ್ಥಳೀಯರು ದೂರಿದ್ದಾರೆ.

ಮುದಗಲ್‌ನ ವಿದ್ಯುತ್ ಸರಬರಾಜು ಇಲಾಖೆಗೆ ವಿದ್ಯುತ್


ಉದಯವಾಹಿನಿ ಚಿತ್ರ

ಸಂಪರ್ಕ ಕಡಿತಗೊಳಿಸುವಂತೆ ಕೇವಲ ಪತ್ರ ಬರೆದು ಅಧಿಕಾರಿಗಳು ತಮ್ಮ ಜವಾಬ್ದಾರಿಯಿಂದ ನುಣುಚಿಕೊಂಡಿದ್ದಾರೆ. ನಿಯಮಾನುಸಾರ ಜಿಲ್ಲಾಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ, ಸಂಬಂಧಪಟ್ಟ ವಿದ್ಯುತ್ ಇಲಾಖೆಯ ಅಧಿಕಾರಿಗಳ ಸಹಕಾರದೊಂದಿಗೆ ಸ್ಥಳಕ್ಕೆ ಭೇಟಿ ನೀಡಿ, ಆದೇಶವನ್ನು ಜಾರಿಗೊಳಿಸಿ, ಕೈಗೊಂಡ ಕ್ರಮಗಳ ವರದಿಯನ್ನು ಮಂಡಳಿಯ ಕೇಂದ್ರ ಕಚೇರಿಗೆ ಸಲ್ಲಿಸಬೇಕಿತ್ತು ಎಂದು ಸ್ಥಳೀಯರು ಅಭಿಪ್ರಾಯಪಟ್ಟಿದ್ದಾರೆ.

ಕ್ರಷರ್ ಮಾಲೀಕರು ಹಾಗೂ ಸಂಬಂಧಪಟ್ಟ ಅಧಿಕಾರಿಗಳ ನಡುವೆ ಒಳಒಪ್ಪಂದವಿದೆಯೇ ಎಂಬ ಅನುಮಾನವೂ ಸ್ಥಳೀಯರಲ್ಲಿ ಮೂಡಿದೆ. ಆದರೆ, ಈ ಆರೋಪಗಳ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಮತ್ತು ಕ್ರಷರ್ ಮಾಲೀಕರ ಪ್ರತಿಕ್ರಿಯೆ ಲಭ್ಯವಾಗಿಲ್ಲ.

ಶಾಲೆಯ ಸಮೀಪದಲ್ಲಿರುವ ಕ್ರಷರ್‌ನಿಂದ ಉಂಟಾಗುತ್ತಿರುವ ಧೂಳಿನ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, ಮಾಲಿನ್ಯ ನಿಯಂತ್ರಣ ಮಂಡಳಿಯ ಆದೇಶವನ್ನು ತಕ್ಷಣ ಜಾರಿಗೊಳಿಸಬೇಕು. ಸಾರ್ವಜನಿಕರ ಆರೋಗ್ಯ ಮತ್ತು ಪರಿಸರ ಸಂರಕ್ಷಣೆಗೆ ಆದ್ಯತೆ ನೀಡಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳದಿದ್ದರೆ, ಮುಚ್ಚುವ ಆದೇಶ ಜಾರಿಗೊಳಿಸುವಲ್ಲಿ ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ಲೋಕಾಯುಕ್ತರಿಗೆ ದೂರು ಸಲ್ಲಿಸಲಾಗುವುದು ಎಂದು ಸ್ಥಳೀಯರು ಎಚ್ಚರಿಕೆ ನೀಡಿದ್ದಾರೆ.

## ಕೈ ಅಭ್ಯರ್ಥಿಗಳನ್ನು ಗೆಲ್ಲಿಸಿ, ಪ್ರಿಯಾಂಕ್ ಖರ್ಗೆ ಅವರನ್ನು ಬೆಂಬಲಿಸಿ

**ಉದಯವಾಹಿನಿ, ಚಿತ್ತಾಪುರ**

ನೂತನವಾಗಿ ಆಯ್ಕೆಯಾದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸದಸ್ಯರು ಸಚಿವ ಪ್ರಿಯಾಂಕ್ ಖರ್ಗೆ ಅವರ ಕೈ ಬಲಪಡಿಸಬೇಕು ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಭೀಮಣ್ಣ ಸಾಲಿ ಹೇಳಿದರು.

ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ನೂತನ ಸದಸ್ಯರ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮುಂಬರುವ ಜಿಪಂ–ತಾಪಂ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಗೆಲ್ಲಿಸುವ ಮೂಲಕ ಪ್ರಿಯಾಂಕ್ ಖರ್ಗೆ ಅವರನ್ನು ಬೆಂಬಲಿಸಬೇಕು ಎಂದು ಹೇಳಿದರು. ಸಚಿವರು 12ನೇ ಶತಮಾನದ ಬಸವಣ್ಣನವರ ತತ್ವದಂತೆ ಎಲ್ಲಾ ಜಾತಿಗಳಿಗೆ ಪ್ರಾತಿನಿಧ್ಯ ನೀಡಿ 14 ಜನರನ್ನು ನಾಮನಿರ್ದೇಶನ ಮಾಡಿ ಸಮಾನತೆ ನೀಡಿದ್ದಾರೆ. ಸದಸ್ಯರು ಪ್ರತಿ ಗ್ರಾಮಕ್ಕೆ ತೆರಳಿ ಗ್ಯಾರಂಟಿ ಯೋಜನೆಗಳು ಸರಿಯಾಗಿ ತಲುಪುತ್ತಿದೆಯೇ ಎಂದು ಪರಿಶೀಲಿಸಿ, ವಂಚಿತರಿಗೆ ತಲುಪಿಸುವ ಕೆಲಸ ಮಾಡಬೇಕು ಎಂದರು. ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ಬೊಮ್ಮನಳ್ಳಿ ಮಾತನಾಡಿ, ಹಿಂದುಳಿದ ಎಂಬ ಹಣೆಪಟ್ಟಿ ಹೊಂದಿದ್ದ ಚಿತ್ತಾಪುರ ತಾಲ್ಲೂಕಿಗೆ ಸಾವಿರಾರು ಕೋಟಿ ಅನುದಾನ ತಂದು ಅಭಿವೃದ್ಧಿ ಪಡಿಸಿದ ಏಕೈಕ ನಾಯಕ ಪ್ರಿಯಾಂಕ್ ಖರ್ಗೆ. ಅವರು ಜಾತಿ ಭೇದವಿಲ್ಲದೆ ಸಣ್ಣ ಸಮಾಜಗಳಿಗೂ ಅವಕಾಶ ನೀಡಿದ್ದಾರೆ ಎಂದು ಶ್ಲಾಘಿಸಿದರು. ಕೆಪಿಸಿಸಿ ಸದಸ್ಯ ನಾಗರೆಡ್ಡಿ ಪಾಟೀಲ್ ಕರದಾಳ, ಸದಸ್ಯ ರಮೇಶ ಹಡಪದ ಕೊಲ್ಲೂರ್ ಮಾತನಾಡಿದರು. ಇದೇ ವೇಳೆ 14 ನೂತನ ಸದಸ್ಯರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಜಿಪಂ ಮಾಜಿ ಸದಸ್ಯ ಶಿವರುದ್ರ ಭೀಣಿ, ತಾಪಂ ಮಾಜಿ ಅಧ್ಯಕ್ಷ ಜಗಣ್ಣಗೌಡ ರಾಮತೀರ್ಥ, ಇಸ್ಮಾಯಿಲ್ ಸಾಬ್ ಕಮರವಾಡಿ, ರಮೇಶ ಕಟ್ಟಿಮನಿ, ಯುವ ಕಾಂಗ್ರೆಸ್ ಅಧ್ಯಕ್ಷ ದೇವು ಯಾಬಾಳ, ಸಂಜಯ ಬುಳಕರ್, ವೆಂಕಟೇಶ ಕುಲಕರ್ಣಿ ಸೇರಿದಂತೆ ಅನೇಕ ಮುಖಂಡರು ಇದ್ದರು. ವಿಠ್ಠಲ್ ಕಟ್ಟಿಮನಿ ನಿರೂಪಿಸಿ ವಂದಿಸಿದರು.


ಉದಯವಾಹಿನಿ ಚಿತ್ರ

ಆರಂಭಿಕ ರೂ. 57.90 ಕೋಟಿ ಸಾಲದ ಮೇಲಿನ ಬಡ್ಡಿಯಿಂದಾಗಿ ಇಂದು ಸುಮಾರು ರೂ.668 ಕೋಟಿ ರೂ. ಬಾಕಿ ಹೊಣೆಗಾರಿಕೆ ಸೃಷ್ಟಿಯಾಗಿದೆ

# ಎನ್‌ಎಸ್‌ಎಸ್‌ಕೆ ಪುನಃಶ್ಚೇತನ: ಪ್ರಧಾನಿ, ಸಹಕಾರ ಸಚಿವರಿಗೆ ದೇವೇಗೌಡ ಪತ್ರ

**ಉದಯವಾಹಿನಿ, ಬೀದರ್**

ನಾರಂಜಾ ಸಹಕಾರ ಸಕ್ಕರೆ ಕಾರಖಾನೆಯ ಪುನ:ಶ್ಚೇತನಕ್ಕೆ ಸಂಬಂಧಿಸಿದಂತೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರು ಮತ್ತೊಮ್ಮೆ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರದ ಸಹಕಾರ ಸಚಿವ ಅಮಿತ್ ಶಾ ಅವರಿಗೆ ಪತ್ರ ಬರೆಯುವ ಮೂಲಕ ಕಾರಖಾನೆ ಹಾಗೂ ರೈತರ ಹಿತರಕ್ಷಿಸುವ ಪ್ರಯತ್ನವನ್ನು ಮುಂದುವರೆಸಿದ್ದಾರೆ.

**1.** ರೈತರಿಗೆ ಆಗುತ್ತಿರುವ ಅನುಕೂಲ
**2.** ರೈತರ ಹಿತರಕ್ಷಿಸುವ ಪ್ರಯತ್ನ
**3.** ಶಾ ಅವರಿಗೆ ಪ್ರತ್ಯೇಕ ಪತ್ರ

ಆರ್ಥಿಕ ಸಂಕಟದಲ್ಲಿ ಸಿಲುಕಿರುವ ನಾರಂಜಾ ಸಹಕಾರಿ ಸಕ್ಕರೆ ಕಾರಖಾನೆಯನ್ನು ಸಶಕ್ತಗೊಳಿಸಲು ಕಾರಖಾನೆ ಅಧ್ಯಕ್ಷ ಸೂರ್ಯಕಾಂತ ನಾಗಮಾರಪಳ್ಳಿ ಅವರು ಪ್ರಯತ್ನಿಸುತ್ತಿದ್ದಾರೆ. ಮಾಜಿ ಪ್ರಧಾನಿ ದೇವೇಗೌಡ ಅವರು ಸೂರ್ಯಕಾಂತ ನಾಗಮಾರಪಳ್ಳಿ ಅವರ ಪ್ರಯತ್ನಕ್ಕೆ ಇನ್ನಷ್ಟು ಶಕ್ತಿ ತುಂಬಿದ್ದಾರೆ. ಮಾಜಿ ಪ್ರಧಾನಿಯವರ ಈ ಪ್ರಯತ್ನವು ರೈತರಲ್ಲಿ, ಕಾರ್ಮಿಕರಲ್ಲಿ ಹೊಸ ನಿರೀಕ್ಷೆಯನ್ನು ಹುಟ್ಟು ಹಾಕಿದೆ. ವಿಶೇಷವಾಗಿ ಕಾರಖಾನೆಯ ಪುನ:ಶ್ಚೇತನದ ಸಾಧ್ಯತೆಯನ್ನು ಹೆಚ್ಚಿಸಿದೆ.

ನಾರಂಜಾ ಕಾರಖಾನೆಯ ಆರ್ಥಿಕ ಸಮಸ್ಯೆ, ಅದರ ಹಿಂದಿರುವ ಕಾರಣಗಳು, ಈ ಕಾರಖಾನೆಯಿಂದ ಬೀದರ್ ಜಿಲ್ಲೆಯ ರೈತರಿಗೆ ಆಗುತ್ತಿರುವ ಅನುಕೂಲ, ಉದ್ಯೋಗಾವಕಾಶ, ಆರ್ಥಿಕಾಭಿವೃದ್ಧಿ ಮುಂತಾದ ವಿಷಯಗಳನ್ನು ಒಳಗೊಂಡ ವಿವರವಾದ ಮನವಿಪತ್ರವನ್ನು ಕಾರಖಾನೆ ಅಧ್ಯಕ್ಷ ಸೂರ್ಯಕಾಂತ ನಾಗಮಾರಪಳ್ಳಿ ಅವರು ಮಾಜಿ ಪ್ರಧಾನಿ ದೇವೇಗೌಡ ಅವರಿಗೆ ಸಲ್ಲಿಸಿದ್ದರು. ಇದಕ್ಕೆ ತ್ವರಿತವಾಗಿ ಸ್ಪಂದಿಸಿದ ಮಾಜಿ ಪ್ರಧಾನಿಯವರು ಅಕ್ಟೋಬರ್ 7 ರಂದೇ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರದ ಸಹಕಾರ ಸಚಿವ ಅಮಿತ್ ಶಾ ಅವರಿಗೆ


ಉದಯವಾಹಿನಿ ಚಿತ್ರ

ಪ್ರತ್ಯೇಕ ಪತ್ರ ಬರೆದು, ಕಾರಖಾನೆಯ ಪುನ:ಶ್ಚೇತನದ ಬೇಡಿಕೆಗೆ ಸ್ಪಂದಿಸುವಂತೆ ಕೋರಿದ್ದಾರೆ.

ರೈತರಿಂದ ರೈತರಿಗಾಗಿ ಎಂಬ ತತ್ವವನ್ನು ಅನುಸರಿಸಿಕೊಂಡು ಬರುತ್ತಿರುವ ನಾರಂಜಾ ಕಾರಖಾನೆಯು ದಶಕಗಳಿಂದ ಈ ಭಾಗದ ಕಬ್ಬು ಬೆಳೆಗಾರರು, ಕಾರ್ಮಿಕರು ಮತ್ತು ಗ್ರಾಮೀಣ ಸಮುದಾಯಗಳಿಗೆ ಆಸರೆಯಾಗಿದೆ. ಆರ್ಥಿಕ ಸವಾಲುಗಳ ನಡುವೆಯೂ ಸದಸ್ಯ ರೈತರಿಗೆ ಎಂಆರ್‌ಪಿಗಿಂತ ಅಧಿಕ ಕಬ್ಬಿನ ಬೆಲೆ ಪಾವತಿಸಿದೆ, ಷೇರುದಾರ ರೈತರಿಗೆ ಉಚಿತವಾಗಿ ಸಕ್ಕರೆ ವಿತರಿಸಿದೆ. ಆರಂಭದಿಂದಲೂ ರೈತರ ಹಿತಕ್ಕಾಗಿ, ರೈತರ ಆರ್ಥಿಕಾಭಿವೃದ್ಧಿಗಾಗಿ ಶ್ರಮಿಸುತ್ತಿದೆ ಎಂದು ಮಾಜಿ ಪ್ರಧಾನಿಯವರು ತಮ್ಮ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

> ಪುನಶ್ಚೇತನದ ಬೇಡಿಕೆಗೆ ಸ್ಪಂದಿಸುತ್ತ ಬಂದಿದ್ದಾರೆ. ಪ್ರಧಾನಿಯವರಿಗೆ, ಕೇಂದ್ರದ ಸಹಕಾರ ಸಚಿವರಿಗೆ ಪತ್ರ ಬರೆಯುವ ಮೂಲಕ ಕೇಂದ್ರ ಸರಕಾರದ ಮೇಲೆ ಒತ್ತಡ ಹೇರುತ್ತಿದ್ದಾರೆ. ಮಾಜಿ ಪ್ರಧಾನಿಯವರ ಈ ಸಹಕಾರ ಸ್ಮರಣೀಯವಾಗಿದೆ.
>
> – ಸೂರ್ಯಕಾಂತ ನಾಗಮಾರಪಳ್ಳಿ

### ರೈತರ ಪರವಾಗಿ ಕೃತಜ್ಞತೆ

**ಸಹಕಾರಿ ಕ್ಷೇತ್ರದಲ್ಲಿನ ಸಂಸ್ಥೆಗಳು ಉಳಿಯಬೇಕು ಎಂಬ ದೇವೇಗೌಡ ಅವರ ಕಾಳಜಿಯು ಅನುಕರಣೀಯವಾಗಿದೆ. ಇದಕ್ಕಾಗಿ ಕಾರಖಾನೆ ಪರವಾಗಿ,ಜಿಲ್ಲೆಯ ರೈತರ ಪರವಾಗಿ ಕೃತಜ್ಞತೆ ಸಲ್ಲಿಸಲಾಗುತ್ತದೆ ಎಂದು ಸೂರ್ಯಕಾಂತ್ ತಿಳಿಸಿದ್ದಾರೆ.**

ಆರಂಭಿಕ ರೂ. 57.90 ಕೋಟಿ ಸಾಲದ ಮೇಲಿನ ಬಡ್ಡಿಯಿಂದಾಗಿ ಇಂದು ಸುಮಾರು ರೂ.668 ಕೋಟಿ ರೂ. ಬಾಕಿ ಹೊಣೆಗಾರಿಕೆ ಸೃಷ್ಟಿಯಾಗಿದೆ. ತೀವ್ರ ಕಷ್ಟದಲ್ಲಿ ಸಿಲುಕಿರುವ ಈ ಕಾರಖಾನೆಗೆ ಸಕ್ಕರೆ ಅಭಿವೃದ್ಧಿನಿಧಿ ಮತ್ತು ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮ ಮೂಲಕ ಆರ್ಥಿಕ ಬೆಂಬಲ ನೀಡಬೇಕು ಎಂದು ದೇವೇಗೌಡ ಅವರು ಕೋರಿದ್ದಾರೆ.

ಆರ್ಥಿಕ ಸಂಕಟದಲ್ಲಿ ಸಿಲುಕಿರುವ ಸಹಕಾರಿ ಸಕ್ಕರೆ ಕಾರಖಾನೆಗಳಿಗೆ ದಾಮ್ ದುಪ್ಪಟು ಆಧಾರಿತ ಬಡ್ಡಿ ಮನ್ನಾ ಮತ್ತು ಕೈಗೆಟುಕುವ ಏಕಕಾಲ ತಿರುವಳಿಯ ಅವಕಾಶ ನೀಡುವಂತೆಯೂ ಮಾಜಿ ಪ್ರಧಾನಿಯವರು ಕೋರಿದ್ದಾರೆ.

ರಾಷ್ಟ್ರೀಯ ಸಹಕಾರ ನೀತಿ 2025 ಮತ್ತು ಇತರ ರಾಜ್ಯಗಳಲ್ಲಿ ಜಾರಿಗೆ ತರಲಾದ ಇಂತಹದೇ ಒಟಿಎಸ್ ಕ್ರಮಗಳನ್ನು ಮಾಜಿ ಪ್ರಧಾನಿಯವರು ತಮ್ಮ ಪತ್ರದಲ್ಲಿ ಪ್ರಸ್ತಾಪಿಸಿದ್ದಾರೆ. ನಾರಂಜಾ ಕಾರಖಾನೆಗೂ ಇದೇ ಮಾದರಿಯಲ್ಲಿ ಒಟಿಎಸ್ ಅವಕಾಶ ನೀಡಬೇಕು ಎಂದು ತಿಳಿಸಿದ್ದಾರೆ.

## ಮಿನಿ ನ್ಯೂಸ್

### ತಾಳೂರು ರಸ್ತೆ ಗಲಾಟೆ ಡೀಲ್ ರವಿ ಸೇರಿ ಐವರ ಬಂಧನ

**ಉದಯವಾಹಿನಿ, ಬಳ್ಳಾರಿ**

ಮೊನ್ನೆ ಸಂಜೆ ನಗರದ ತಾಳೂರು ರಸ್ತೆಯಲ್ಲಿ ನಡೆದ ಬಸವನಕುಂಟೆಯ ಮಧು ಎಂಬಾತನ ಹತ್ಯಾ ಪ್ರಯತ್ನ ದಾಳಿಯ ಪ್ರಕರಣದಲ್ಲಿ ಐದು ಜನ ಆರೋಪಿಗಳನ್ನು ಪೊಲೀಸರು ಬಂಧಿಸಿದ್ದು. ಇನ್ನೂ ನಾಲ್ವರು ನಾಪತ್ತೆಯಾಗಿದ್ದಾರೆಂದು ಎಸ್ಪಿ ಡಾ.ಸುಮನ್ ಡಿ.ಪನ್ನೇಕರ್ ತಿಳಿಸಿದ್ದಾರೆ. ತನ್ನ ಸ್ನೇಹಿತರೊಂದಿಗೆ ಕೋರ್ಟ್ನಲ್ಲಿ ಕೆಲಸ ಮುಗಿಸಿಕೊಂಡು, ಕಾರಿನಲ್ಲಿ ನಗರದ ತಾಳೂರ ರಸ್ತೆಯಲ್ಲಿ ಹೋಗುತ್ತಿರುವಾಗ ಹಳೆಯ ದ್ವೇಷ ಇಟ್ಟುಕೊಂಡು ಕೊಲೆ ಮಾಡುವ ಉದ್ದೇಶದಿಂದ ಮೋಟರ್ ಸೈಕಲ್ಗಳ ಮೂಲಕ ಕಾರಿಗೆ ಅಡ್ಡಗಟ್ಟಿ, ಅವಾಚ್ಯ ಶಬ್ದಗಳಿಂದ ಬೈದು, ಕಟ್ಟಿಗೆಯಿಂದ ಹೊಡೆದು ರಕ್ತಗಾಯ ಮಾಡಿ. ಕೊಲೆ ಮಾಡಲು ಪ್ರಯತ್ನ ನಡೆಸಿದ್ದರೆಂದು ಮಧು ಗಾಂಧಿನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದನು. ಹಲ್ಲೆ ನಡೆಸಿದ ನಂತರ ಆರೋಪಿಗಳು ಪರಾರಿಯಾಗಿ ಕೊಪ್ಪಳ ಜಿಲ್ಲೆಯ ಕನಕಗಿರಿ ಬಳಿ ತೆರಳುವಾಗ. ಹಣಕಾಸು ವ್ಯವಹಾರ ಮಾಡವ ತಾಳೂರು ರಸ್ತೆಯ ಸತೀಶ (34), ವಿಕ್ರಮ್ ಅಲಿಯಾಸ್ ವಿಕ್ಕಿ (33), ಬೆಳಗಲ್ ಕ್ರಾಸ್ ನ ರವಿ ಅಲಿಯಾಸ್ ಡೀಲ್ ರವಿ (36, ಬಸವನಕುಂಟೆಯ ಶೆಕ್ಷಾವಲಿ (28) ವರ್ಷ, ಕಲೀಲ್ (28) ಪೊಲೀಸರು ಬಂಧಿಸಿ ಕರೆ ತಂದಿದ್ದಾರೆ. ಬಂಧಿತರಿಂದಒಂದು ಕಾರು, ಮತ್ತು 3 ಮೋಟರ್ ಸೈಕಲ್ಗಳು, ದೂರುದಾರರಿಗೆ ಹೊಡೆಯಲು ಬಳಸಿದ ಕಟ್ಟಿಗೆ ಜಪ್ತುಮಾಡಲಾಗಿದೆಮ ಪ್ರಕರಣದಲ್ಲಿ 9 ಜನರು ಸೇರಿ ಕೃತ್ಯವನ್ನು ಮಾಡಿದ್ದು. ಇನ್ನೂ 4 ಜನರು ಪರಾರಿಯಲ್ಲಿದ್ದು, ಅವರ ಪತ್ತೆ ಕಾರ್ಯ ಪ್ರಗತಿಯಲ್ಲಿದೆ.

### ಆಸಿಡ್ ದಾಳಿಯ ಸಂತ್ರಸ್ತರ ರಕ್ಷಣೆ: ಕಾನೂನು ನೆರವು ಕಾರ್ಯಾಗಾರ ಆಯೋಜನೆ

**ಉದಯವಾಹಿನಿ, ಮಂಗಳೂರು**

ಮಂಗಳೂರಿನ ದಕ್ಷಿಣ ಕನ್ನಡ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಇತರೆ ಸಂಬಂಧಪಟ್ಟ ಸರ್ಕಾರಿ ಇಲಾಖೆಗಳ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ಆಸಿಡ್ ದಾಳಿಯ ಸಂತ್ರಸ್ಥರ ರಕ್ಷಣೆಯ ಕುರಿತು ಒಂದು ದಿನದ ಅರಿವು ಕಾರ್ಯಾಗಾರ ನಗರದ ಸೈಂಟ್ ಅಲೋಶಿಯಸ್ ಪದವಿಪೂರ್ವ ಕಾಲೇಜಿನಲ್ಲಿ ನಡೆಯಿತು. ಕಾರ್ಯಾಗಾರವನ್ನು ಪ್ರಧಾನ ಮತ್ತು ಸತ್ರ ನ್ಯಾಯಾಧೀಶ ಮಾನು ಕೆ. ಎಸ್ ಅವರು ಉದ್ಘಾಟಿಸಿ, ವಿಷಯದ ಮಹತ್ವ ಹಾಗೂ ಪ್ರಸ್ತುತ ಸಂದರ್ಭದಲ್ಲಿ ಅದರ ಅಗತ್ಯತೆಯ ಕುರಿತು ಮಾತನಾಡಿದರು. ಕಾರ್ಯಾಗಾರದಲ್ಲಿ ವಿವಿಧ ಕ್ಷೇತ್ರಗಳ ಇಲಾಖೆಗಳ ಜಿಲ್ಲಾ ಅಧಿಕಾರಿಗಳು ಭಾಗವಹಿಸಿ, ಸಂಬಂಧಿತ ವಿಷಯಗಳ ಕುರಿತು ಮಾಹಿತಿ ಹಾಗೂ ಮಾರ್ಗದರ್ಶನ ನೀಡಿದರು. ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶೆ ಜೈಬುನ್ನಿಸಾ, ಮಂಗಳೂರು ವಕೀಲರ ಸಂಘದ ಅಧ್ಯಕ್ಷ ಜಗದೀಶ್ ಶೇಣವ, ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಹೆಚ್.ಆರ್ ತಿಮ್ಮಯ್ಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಶ್ರೀಧರ್ ಎಂ.ಎಸ್., ಉಪ ಪೊಲೀಸ್ ಆಯುಕ್ತ ಕೆ. ರವಿಶಂಕರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಅನಿಲ್ ಕುಮಾರ್ ಎಸ್. ಭೂಮರೆಡ್ಡಿ, ಮಂಗಳೂರು ತಹಶೀಲ್ದಾರ್ ರಮೇಶ್ ಬಾಬು ಟಿ, ಮತ್ತಿತ್ತರರು ಉಪಸ್ಥಿತರಿದ್ದರು.

### ದಸರಾ ನಾಳೆಯಿಂದ ದೇವಿ ಮಹಾತ್ಮೆ ಪುರಾಣ

**ಉದಯವಾಹಿನಿ, ಬಳ್ಳಾರಿ**

ನಗರದ ಕಲ್ಯಾಣ ಸ್ವಾಮಿ ಮಠದಲ್ಲಿ ನಾಳೆ ಅ.11 ರಿಂದ 21 ರ ವರೆಗೆ ದಸರಾ ಹಬ್ಬದ ಅಂಗವಾಗಿ ಪ್ರತಿದಿನ ಸಂಜೆ 6 ರಿಂದ ದೇವಿ ಮಹಾತ್ಮೆ ಪುರಾಣ ಪ್ರವಚನ ಮತ್ತು ಸಂಸ್ಕೃತಿಕ ಕಾರ್ಯಕ್ರಮಗಳ ಪ್ರದರ್ಶನ ಹಾಗು ವಿವಿಧ ಮಠಾಧೀಶರಿಂದ ಆಶೀರ್ವಚನ, ಗಣ್ಯರಿಂದ ನುಡಿ ನಮನ ಇರಲಿದೆಂದು ಮಠದ ಶ್ರೀಗಳು ತಿಳಿಸಿದ್ದಾರೆ. ಶಿಡಗಿನಮೊಳೆಯ ಚನ್ನವೀರಯ್ಯ ಸಾರಂಗ ಮಠ ಇವರಿಂದ ಪುರಾಣದ ವಾಚನೆ, ಡಾ.ಯು.ಶ್ರೀನಿವಾಸಮೂರ್ತಿ ಅವರಿಂದ ಪ್ರವಚನ ನೀಡಲಿದ್ದು. ರಾಘವೇಂದ್ರ ಅವರು ತಬಲಾ ವಾದನ ಮಾಡಲಿದ್ದಾರೆ.

ಅ.16 ರಂದು ಸಂಜೆ 5 ಕ್ಕೆ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ, ಅ.19 ರಂದು ಬೆಳಿಗ್ಗೆ 7 ರಿಂದ ರುದ್ರಹೋಮ ನಡೆಯಲಿದೆ. ಅ.20 ರಂದು ಪುರಣ ಮಂಗಲ ನಡೆಯಲಿದೆ. ಅ.21 ರಂದು ಸಂಜೆ 6 ಕ್ಕೆ ನಗರದ ವಿವಿಧ ದೇವಸ್ಥಾನಗಳ ಪಲ್ಲಕ್ಕಿ ಮೆರವಣಿಗೆ ಬಂದ ಮೇಲೆ ಮಠದ ಆವರಣದಲ್ಲಿ ಬನ್ನಿ ಮುಡಿಯುವ ಕಾರ್ಯಕ್ರಮ ಶ್ರೀಗಳ ಸಾನಿದ್ಯದಲ್ಲಿ ನಡೆಯಲಿದೆ.

### ಜಿ–ಟ್ಯಾಗ್ ತಳಿ ತೊಗರಿಗೆ ಹೆಚ್ಚಿನ ಬೆಂಬಲ ಬೆಲೆ ನೀಡಿ

**ಉದಯವಾಹಿನಿ, ಕಲಬುರಗಿ**

ಕಲಬುರಗಿ ಜಿಲ್ಲೆ ರಾಜ್ಯದ ತೊಗರಿ ಕಣಜ ಎಂದು ಹೆಸರುವಾಸಿಯಾಗಿದೆ. ಕೇಂದ್ರ ಸರ್ಕಾರ ಕಲಬುರಗಿ ತೊಗರಿಗೆ ಜಿ–ಟ್ಯಾಗ್ ನೀಡಿದ್ದು, ಹೊರ ರಾಜ್ಯ ಮತ್ತು ಹೊರ ದೇಶಗಳಲ್ಲಿ ಹೆಚ್ಚಿನ ಬೇಡಿಕೆ ಇದೆ. ಜಿ–ಟ್ಯಾಗ್ ತಳಿ ತೊಗರಿಗೆ ಬೇರೆ ತೊಗರಿ ತಳಿಗಳಿಗಿಂತ ಹೆಚ್ಚಿನ ಬೆಂಬಲ ಬೆಲೆ ನೀಡಬೇಕು ಎಂದು ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಡಾ.ಸಿದ್ರಾಮಪ್ಪ ಪಾಟೀಲ ಧಂಗಾಪುರ ಒತ್ತಾಯಿಸಿದ್ದಾರೆ. ಈ ಸಂಬಂಧ ಕೃಷಿ ಸಚಿವ ಪಿ.ಎಂ.ನರೇಂದ್ರ ಸ್ವಾಮಿ ಅವರಿಗೆ ಮನವಿ ಪತ್ರ ಸಲ್ಲಿಸಿರುವ ಅವರು, ಸರ್ಕಾರ ಮೌಲ್ಯವರ್ಧಿತ ಕೃಷಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕು, ಆರೋಗ್ಯ ಆವಿಷ್ಕಾರ, ಶಿಕ್ಷಣ ಆವಿಷ್ಕಾರದಂತೆ ಕೃಷಿ ಆವಿಷ್ಕಾರ ಮಾಡಲು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಸೂಚಿಸಬೇಕು ಎಂದು ಒತ್ತಾಯಿಸಿದ್ದಾರೆ. ತೊಗರಿ ಮಂ ಡಳಿಗೆ ಹೆಚ್ಚಿನ ಅನುದಾನ ನೀಡುವುದರ ಜೊತೆಗೆ ಅಗತ್ಯವಾದ ಸಿಬ್ಬಂದಿ ನೇಮಕ ಮಾಡಬೇಕು, ಕಲಬುರಗಿ ಜಿಲ್ಲೆಯನ್ನು ಸರ್ಕಾರ ಬರಪೀಡಿತ ಎಂದು ಘೋಷಿಸಿದ್ದು, ಬೆಳೆ ಹಾನಿಯಾದ ರೈತರಿಗೆ ಮಧ್ಯಂತರ ಪರಿಹಾರ ನೀಡಬೇಕು ಎಂದು ಮನವಿ ಮಾಡಿದ್ದಾರೆ.

### ಮಸೀದಿ ಮೇಲೆ ನಿಂತು ಬಿಯರ್ ಕುಡಿದ ಕಾನ್ಸ್‌ಟೇಬಲ್

**ಉದಯವಾಹಿನಿ, ಕಲಬುರಗಿ**

ಕಲಬುರಗಿ ಜಿಲ್ಲೆಯ ಕಮಲಾಪುರ ತಾಲ್ಲೂಕಿನ ಮಹಾಗಾಂವ್ ಪೊಲೀಸ್ ಠಾಣೆಯ ಪೊಲೀಸ್ ಪೇದೆಯೊಬ್ಬರು ಕರ್ತವ್ಯದಲ್ಲಿದ್ದಾಗಲೇ ಮಸೀದಿಯ ಛಾವಣಿ ಮೇಲೆ ನಿಂತು ಬಿಯರ್ ಕುಡಿದ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

ವಿಡಿಯೋ ವೈರಲ್ ಆದ ಬೆನ್ನಲ್ಲೇ ಪೊಲೀಸ್ ಪೇದೆ ಹಣಮಂತ ಅವರನ್ನು ಸೇವೆಯಿಂದ ಅಮಾನತುಗೊಳಿಸಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆದೇಶ ಹೊರಡಿಸಿದ್ದಾರೆ. ಹಣಮಂತ ಅವರು ಹರಸೂರು ಗ್ರಾಮದ ಮಸೀದಿ ಮೇಲೆ ನಿಂತು ಬಿಯರ್ ಕುಡಿದಿದ್ದರು. ಇದನ್ನು ಗ್ರಾಮಸ್ಥರು ವಿಡಿಯೋ ಮಾಡಿ, ಸಾಮಾಜಿಕ ಮಾಧ್ಯಮಗಳಲ್ಲಿ ಹರಿಬಿಟ್ಟಿದ್ದರು. ವಿಡಿಯೋ ವೈರಲ್ ಆದ ಬೆನ್ನಲ್ಲೆ ಅವರ ವಿರುದ್ಧ ಕ್ರಮಕೈಗೊಳ್ಳಲಾಗಿದೆ. ಮಹಾಗಾಂವ್ ಪೊಲೀಸ್ ಠಾಣಾ ವ್ಯಾಪ್ತಿಯ ಹರಸೂರು ಗ್ರಾಮದಲ್ಲಿ ಗಲಾಟೆಯಾಗಿತ್ತು. ಆ ಹಿನ್ನಲೆಯಲ್ಲಿ ಬಂದೋಬಸ್ತ್‌ಗಾಗಿ ಹಣಮಂತ ಅವರನ್ನು ಮಸೀದ ಬಳಿ ನಿಯೋಜನೆ ಮಾಡಲಾಗಿತ್ತು. ಆದರೆ ಕರ್ತವ್ಯದಲ್ಲಿದ್ದಾಗಲೇ ಅವರು ಬಿಯರ್ ಕುಡಿದಿದ್ದರು. ಮದ್ಯ ಸೇವಿಸಿರೋದು ಧೃಡಪಟ್ಟ ಹಿನ್ನಲೆಯಲ್ಲಿ ಅಮಾನತು ಮಾಡಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಆದೇಶಿಸಿದ್ದಾರೆ.


ಉದಯವಾಹಿನಿ ಚಿತ್ರ

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಗ್ಗೆ | 04:30 ರಿಂದ 06:00 |
| ಗುಳಿಕ ಕಾಲ | ಬೆಳಗ್ಗೆ | 03:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ** — ಸ್ವಲ್ಪ ವ್ಯಾಯಾಮದೊಂದಿಗೆ ನಿಮ್ಮ ದಿನವನ್ನು ಪ್ರಾರಂಭಿಸಿ. ನಿಮ್ಮ ಬಗ್ಗೆ ನೀವೇ ಒಳ್ಳೆಯ ಅಭಿಪ್ರಾಯ ಇಟ್ಟುಕೊಳ್ಳುವುದು ಮುಖ್ಯ. ಇದನ್ನು ದಿನವೂ ಮಾಡುವುದನ್ನು ರೂಢಿ ಮಾಡಿಕೊಳ್ಳಿ ಹಾಗೂ ಅದನ್ನು ಕಟ್ಟುನಿಟ್ಟಾಗಿ ಅನುಸರಿಸಿ. ವ್ಯಾಪಾರದಲ್ಲಿ ಲಾಭವಾಗಲಿದೆ.

**ವೃಷಭ** — ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ನೀವು ಮನೆಯಿಂದ ಹೊರ ಇದ್ದು ಉದ್ಯೋಗ ಅಥವಾ ಅಧ್ಯಯನ ಮಾಡುತ್ತಿದ್ದರೆ, ನಿಮ್ಮ ಹಣ ಮತ್ತು ಸಮಯವನ್ನು ವ್ಯರ್ಥ ಮಾಡುವಂತಹ ಜನರಿಂದ ದೂರವಿರುವುದು ಕಲಿತುಕೊಳ್ಳಬೇಕು.

**ಮಿಥುನ** — ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ.

**ಕರ್ಕಾಟಕ** — ಆರೋಗ್ಯಕ್ಕೆ ಸಂಬಂಧಿಸಿದಂತೆ ಈ ಅವಧಿ ಮಂದವಾಗಿರುವುದರಿಂದ ನೀವು ತಿನ್ನುವುದರ ಬಗೆಗೆ ಜಾಗರೂಕರಾಗಿರಿ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು.

**ಸಿಂಹ** — ಅಸಾಧ್ಯವಾದ ಅನಗತ್ಯ ಚಿಂತನೆಯಲ್ಲಿ ನಿಮ್ಮ ಶಕ್ತಿ ವ್ಯರ್ಥ ಮಾಡುವ ಬದಲು ಅದನ್ನು ಸರಿಯಾದ ದಿಕ್ಕಿನಲ್ಲಿ ಬಳಸಿ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು.

**ಕನ್ಯಾ** — ಮಕ್ಕಳು ನಿಮ್ಮ ಸಂಜೆಯನ್ನು ಉಲ್ಲಾಸಮಯವಾಗಿಸುತ್ತಾರೆ. ಮಂಕು ಕವಿದ ಮತ್ತು ಒತ್ತಡದ ದಿನಕ್ಕೆ ಮಂಗಳ ಹಾಡಲು ಒಂದು ಸಂತೋಷಕೂಟವನ್ನು ಯೋಜಿಸಿ. ಮಕ್ಕಳ ಸಾಂಗತ್ಯ ನಿಮ್ಮ ದೇಹವನ್ನು ಪುನಃಶ್ಚೇತನಗೊಳಿಸುತ್ತದೆ.

**ತುಲಾ** — ಆಕರ್ಷಕವಾದ ಮತ್ತು ನಿಮ್ಮನ್ನು ಶಾಂತವಾಗಿರಿಸುವ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಿ. ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ನೀವು ಮಾನಸಿಕ ಒತ್ತಡಗೊಳಗಾಗಬಹುದು.

**ವೃಶ್ಚಿಕ** — ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ ಮತ್ತು ನೀವು ಇದನ್ನು ಬಾಕಿಯಿರುವ ಕೆಲಸಗಳನ್ನು ಪೂರ್ಣಗೊಳಿಸಲು ಬಳಸಬೇಕು. ಆವತ್ತಿಗಾಗಿ ಮಾತ್ರ ಬದುಕುವ ಮತ್ತು ಮನೋರಂಜನೆಗಾಗಿ ಹೆಚ್ಚು ಸಮಯ ಮತ್ತು ಹಣ ಖರ್ಚು ಮಾಡುವ ನಿಮ್ಮ ಪ್ರವೃತ್ತಿಯನ್ನು ನಿಯಂತ್ರಿಸಿ.

**ಧನಸ್ಸು** — ಕೆಲವು ಮಾನಸಿಕ ಒತ್ತಡಗಳ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ. ಹೊರಾಂಗಣ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವಿಕೆ ಪೋಷಕರಿಗೆ ಕೋಪ ಬರಿಸಬಹುದು.

**ಮಕರ** — ಯಶಸ್ಸು ಹತ್ತಿರವಿರುವಂತೆ ತೋರಿದರೂ ಸಹ ಶಕ್ತಿ ಕುಂಠಿತವಾಗುತ್ತದೆ. ನೀವು ನಿಮ್ಮ ಹೂಡಿಕೆಗಳನ್ನು ಸಂಪ್ರದಾಯಬದ್ಧವಾಗಿ ಉಳಿತಾಯ ಮಾಡಿದರೆ ಹಣ ಮಾಡುತ್ತೀರಿ. ನಿಮ್ಮ ಸಂಗಾತಿ ಇಂದು ನಿಮ್ಮನ್ನು ಸಂತೋಷಗೊಳಿಸುವಲ್ಲಿ ಪ್ರಯತ್ನ ಮಾಡುತ್ತಾರೆ.

**ಕುಂಭ** — ಒಬ್ಬ ಸ್ನೇಹಿತ ನಿಮ್ಮ ಮುಕ್ತ ಮನಸ್ಸು ಮತ್ತು ಸಹಿಷ್ಣುತೆಯ ಪರಮಾವಧಿಯನ್ನು ಪರೀಕ್ಷಿಸಬಹುದು. ನೀವು ನಿಮ್ಮ ಮೌಲ್ಯಗಳೊಂದಿಗೆ ರಾಜಿಯಾಗದಿರುವಂತೆ ಮತ್ತು ಸಕಾರಣವಾದ ನಿರ್ಧಾರಗಳನ್ನು ಕೈಗೊಳ್ಳುವಂತೆ ಎಚ್ಚರಿಕೆ ವಹಿಸಬೇಕು.

**ಮೀನ** — ನಿಮ್ಮ ಭರವಸೆ ಒಂದು ಸಮೃದ್ಧ, ಸೂಕ್ಷ್ಮ ಪರಿಮಳಯುಕ್ತ ಮತ್ತು ಬೆರಗುಗೊಳಿಸುವ ಹೂವಿನ ಹಾಗೆ ಅರಳುತ್ತದೆ. ನಿಮಗೆ ಆಕರ್ಷಕವಾಗಿ ತೋರವ ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಆಳವಾಗಿ ಕೆದಕಿ.

### ಮಹಿಳೆಯರು ಮತ್ತು ಮಕ್ಕಳ ಮೇಲಿನ ದೌರ್ಜನ್ಯ ಮತ್ತು ತೊಂದರೆಗೀಡಾದ ಪ್ರಕರಣಗಳ ಬಗ್ಗೆ ಸಂಬಂಧಿಸಿದ ಇಲಾಖೆಗೆ ಮಾಹಿತಿ ಅಗತ್ಯವಾಗಿರುತ್ತದೆ

# ಮಹಿಳೆ ಮತ್ತು ಮಕ್ಕಳ ಪ್ರಕರಣಗಳಲ್ಲಿ ಸಮನ್ವಯತೆ– ಜಿಲ್ಲಾಧಿಕಾರಿ ಸೂಚನೆ

**ಉದಯವಾಹಿನಿ, ಮಂಗಳೂರು**

ಮಹಿಳೆಯರು ಮತ್ತು ಮಕ್ಕಳು ಸಂತ್ರಸ್ತರಾಗಿರುವ ಪ್ರಕರಣಗಳ ಬಗ್ಗೆ ಪೊಲೀಸರು ಮಹಿಳಾ ಮತ್ತು ಮಕ್ಕಳ ಇಲಾಖೆಗೆ ಮಾಹಿತಿ ನೀಡಬೇಕು ಎಂದು ಜಿಲ್ಲಾಧಿಕಾರಿ ದರ್ಶನ್ ಹೆಚ್.ವಿ ಸೂಚಿಸಿದ್ದಾರೆ.

ಅವರು ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

> 1. 2026 ರ ಏಪ್ರಿಲ್‌ನಿಂದ ಸೆಪ್ಟೆಂಬರ್‌ವರೆಗೆ
> 2. ಒಟ್ಟು 11 ಪ್ರಕರಣಗಳು ದಾಖಲಾಗಿದ್ದು
> 3. ಪೈಕಿ 10 ಪ್ರಕರಣಗಳು ತನಿಖೆ ಹಂತದಲ್ಲಿದೆ

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 2026 ರ ಏಪ್ರಿಲ್‌ನಿಂದ ಸೆಪ್ಟೆಂಬರ್‌ವರೆಗೆ ಮಹಿಳೆಯರ ಮತ್ತು ಮಕ್ಕಳ ಮೇಲಿನ ದೌರ್ಜನ್ಯಗಳ ಕುರಿತು 155 ಪ್ರಕರಣಗಳು ದಾಖಲಾಗಿದೆ. ಈ ಪೈಕಿ 52 ಮಹಿಳೆಯರ ಮೇಲೆ ದೌರ್ಜನ್ಯ, 10 ಅತ್ಯಾಚಾರ ಪ್ರಕರಣ, 79 ಪೋಕ್ಸೋ ಪ್ರಕರಣಗಳು, ಒಂದು ಬಾಲ್ಯವಿವಾಹ ಪ್ರಕರಣ ದಾಖಲಾಗಿದೆ. ಇದಲ್ಲದೇ, 39 ಮಕ್ಕಳ ನಾಪತ್ತೆ ಪ್ರಕರಣಗಳು, 86 ಮಹಿಳೆಯರ ನಾಪತ್ತೆ ಪ್ರಕರಣಗಳು ದಾಖಲಾಗಿದೆ. ಈ ಪೈಕಿ ಬಹುತೇಕರನ್ನು ಪತ್ತೆ ಹಚ್ಚಲಾಗಿದೆ. ವರದಕ್ಷಿಣೆ ಕಿರುಕುಳದ ಒಟ್ಟು 11 ಪ್ರಕರಣಗಳು ದಾಖಲಾಗಿದ್ದು, ಈ ಪೈಕಿ 10 ಪ್ರಕರಣಗಳು ತನಿಖೆ ಹಂತದಲ್ಲಿದೆ ಎಂದು ಸಭೆಗೆ ಅಧಿಕಾರಿಗಳು ಮಾಹಿತಿ ನೀಡಿದರು. ಪ್ರಧಾನಮಂತ್ರಿ ಮಾತೃವಂದನಾ ಯೋಜನೆಯಲ್ಲಿ ಮೊದಲನೇ ಬಾರಿಗೆ ಗರ್ಭಿಣಿಯಾದವರಿಗೆ 2 5 ಸಾವಿರ ನೆರವು ನೀಡಲಾಗುತ್ತಿದೆ.


ಉದಯವಾಹಿನಿ ಚಿತ್ರ

> ಮಹಿಳೆಯರು ಮತ್ತು ಮಕ್ಕಳ ಮೇಲಿನ ದೌರ್ಜನ್ಯ ಮತ್ತು ತೊಂದರೆಗೀಡಾದ ಪ್ರಕರಣಗಳ ಬಗ್ಗೆ ಸಂಬಂಧಿಸಿದ ಇಲಾಖೆಗೆ ಮಾಹಿತಿ ಅಗತ್ಯವಾಗಿರುತ್ತದೆ. ಈ ನಿಟ್ಟಿನಲ್ಲಿ ಪೊಲೀಸ್ ಠಾಣೆಯಲ್ಲಿ ಇಂತಹ ಪ್ರಕರಣಗಳು ಬಂದಾಗ ಸಂಬಂಧಿಸಿದ ಇಲಾಖೆಗೆ ಮಾಹಿತಿ ನೀಡಬೇಕು.
>
> – ದರ್ಶನ್ ಹೆಚ್.ವಿ, ಜಿಲ್ಲಾಧಿಕಾರಿ

**181 ಸಂಖ್ಯೆಯ ಬಗ್ಗೆ ವ್ಯಾಪಕ ಪ್ರಚಾರ ಕೈಗೊಳ್ಳಿ**

ಮಹಿಳೆಯರ ಸಹಾಯವಾಣಿ 181 ಸಂಖ್ಯೆಯ ಬಗ್ಗೆ ವ್ಯಾಪಕ ಪ್ರಚಾರ ಕೈಗೊಳ್ಳಬೇಕು. ಮಹಿಳಾ ಮತ್ತು ಮಕ್ಕಳ ಸಂತ್ರಸ್ತರು ಈ ಸಂಖ್ಯೆಗೆ ಕರೆ ಮಾಡಿದಾಗ, ತಕ್ಷಣವೇ ಅವರಿಗೆ ಅಗತ್ಯ ನೆರವು ದೊರಕಿಸುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಈ ಯೋಜನೆಯಡಿ 4,438 ಫಲಾನುಭವಿಗಳು ದಾಖಲಿಸಿ ಗುರಿ ಮೀರಿದ ಸಾಧನೆ ಮಾಡಲಾಗಿದೆ. ಎರಡನೇ ಬಾರಿ ಗರ್ಭಿಣಿಯಾಗಿ ಹೆಣ್ಣು ಮಗುವಾದಲ್ಲಿ ರೂ. 6 ಸಾವಿರ ನೀಡಲಾಗುತ್ತಿದೆ. ಈ ಯೋಜನೆಯಡಿ 1406 ಫಲಾನುಭವಿಗಳು ದಾಖಲಾಗಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಶ್ರೀಧರ್ ಮಾಹಿತಿ ನೀಡಿದರು.

ಕೌಟುಂಬಿಕ ದೌರ್ಜನ್ಯ ಕಾಯ್ದೆಯಡಿ ಜಿಲ್ಲೆಯಲ್ಲಿ 73 ಪ್ರಕರಣ ದಾಖಲಾಗಿದ್ದು, ಈ ಪೈಕಿ 30 ಪ್ರಕರಣಗಳು ಇತ್ಯರ್ಥಗೊಂಡಿದ್ದು, 31 ಸಮಾಲೋಚನಾ ಹಂತದಲ್ಲಿದೆ. ಸಖಿ ಒನ್ ಸ್ಟಾಪ್ ಕೇಂದ್ರದಲ್ಲಿ ಮಹಿಳೆ ಮತ್ತು ಮಕ್ಕಳ ಸಂತ್ರಸ್ತರಿಗೆ ನೆರವು ನೀಡಲಾಗುತ್ತಿದ್ದು, 24 ಮಂದಿಗೆ ಪೊಲೀಸ್ ನೆರವು, 59 ವೈದ್ಯಕೀಯ ನೆರವು, 11 ಮಂದಿಗೆ ತಾತ್ಕಾಲಿಕ ವಸತಿ ಒದಗಿಸಲಾಗಿದೆ ಎಂದು ಅಧಿಕಾರಿಗಳು ಸಭೆಗೆ ತಿಳಿಸಿದರು.

ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ ತಡೆಗಟ್ಟಲು 10 ಕ್ಕಿಂತ ಹೆಚ್ಚಿನ ಸಿಬ್ಬಂದಿಗಳು ಕಾರ್ಯನಿರ್ವಹಿಸುವ ಖಾಸಗಿ, ಸರಕಾರಿ ಕಚೇರಿ, ಉದ್ಯಮ ಕೈಗಾರಿಕೆಗಳಲ್ಲಿ ಆಂತರಿಕ ದೂರು ಸಮಿತಿ ಕಡ್ಡಾಯವಾಗಿದೆ. ಈಗಾಗಲೇ ಜಿಲ್ಲೆಯಲ್ಲಿ 1823 ಸಮಿತಿ ರಚನೆಯಾಗಿದೆ. ಬಾಕಿ ಇರುವ ಕಾರ್ಖಾನೆ ಕೈಗಾರಿಕೆಗಳಲ್ಲಿ ಆಂತರಿಕ ದೂರು ಸಮಿತಿ ರಚಿಸಲು ತ್ವರಿತ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಕಾರ್ಮಿಕ ಇಲಾಖೆ, ಬಾಯ್ಲರ್, ಕೈಗಾರಿಕೆ ಇಲಾಖೆಗಳಿಗೆ ಸೂಚಿಸಿದರು.

ಪಡೀಲ್ ಜಿಲ್ಲಾಧಿಕಾರಿ ಕಚೇರಿಯಲ್ಲಿ ಶಿಶುಪಾಲನಾ ಕೇಂದ್ರ ತೆರೆಯಲು ಅನುಮೋದನೆ ದೊರೆತಿರುತ್ತದೆ ಎಂದು ಸಭೆಗೆ ತಿಳಿಸಲಾಯಿತು.

### ಪ್ರದೀಪ್ ಈಶ್ವರ್ ಕ್ಷಮೆ ಕೇಳದಿದ್ದರೆ ತೀವ್ರ ಹೋರಾಟದ ಎಚ್ಚರಿಕೆ– ಇಲಿಯಾಸ್ ಪಟೇಲ್ ಬಳಗಾನೂರ

# ಉತ್ತರ ಕರ್ನಾಟಕದ ಇತಿಹಾಸ, ಭಾಷೆಗೆ ಅಪಮಾನ

**ಉದಯವಾಹಿನಿ, ಬೆಂಗಳೂರು**

ಕರ್ನಾಟಕ ಏಕೀಕರಣಕ್ಕೆ ಪ್ರಾಣ ಬಿಟ್ಟು ಹೋರಾಡಿದ, ಕನ್ನಡ ಭಾಷೆ–ಸಾಹಿತ್ಯಕ್ಕೆ ತಾಯಿನೆಲವಾದ ಐತಿಹಾಸಿಕ ಉತ್ತರ ಕರ್ನಾಟಕದ ಭಾಷೆ ಮತ್ತು ಸಂಸ್ಕೃತಿಯ ಕುರಿತು ಶಾಸಕ ಪ್ರದೀಪ್ ಈಶ್ವರ್ ಅವರು ನಡೆಸಿರುವ ಲಘು ಹೇಳಿಕೆ ಅತ್ಯಂತ ಖಂಡನೀಯ ಮತ್ತು ಅಕ್ಷಮ್ಯ ಅಪರಾಧ ಎಂದು ಲೇಖಕ, ಉತ್ತರ ಕರ್ನಾಟಕದ ಸ್ವಾಭಿಮಾನಿ ಕನ್ನಡಿಗರಾದ ಇಲಿಯಾಸ್ ಪಟೇಲ್ ಬಳಗಾನೂರ ಅವರು ಸುದೀರ್ಘ ಪತ್ರಿಕಾ ಪ್ರಕಟಣೆಯಲ್ಲಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅವರು, "ಉತ್ತರ ಕರ್ನಾಟಕ ಅಂದರೆ ಕೇವಲ ಒಂದು ಭೌಗೋಳಿಕ ಪ್ರದೇಶವಲ್ಲ; ಅದು ಕನ್ನಡದ ಉಸಿರು, ಕನ್ನಡಿಗರ ನಿಜವಾದ ಶಕ್ತಿ. 12ನೇ ಶತಮಾನದಲ್ಲಿ ವಚನ ಕ್ರಾಂತಿ ನಡೆಸಿ ಸಮಾನತೆಯ ಸಂದೇಶ ಸಾರಿದ ಬಸವಾದಿ ಶರಣರ ನೆಲ ಇದು. ಕವಿಚಕ್ರವರ್ತಿ ರನ್ನ, ಪಂಪ, ಕನಕದಾಸರಂತಹ ಮಹನೀಯರು ಕನ್ನಡ ಸಾಹಿತ್ಯದ ಸಿರಿ–ಸಂಪತ್ತನ್ನು ಬೆಳೆಸಿದ ಗಂಡುಮೆಟ್ಟಿನ ನಾಡು. ಬ್ರಿಟಿಷರ ವಿರುದ್ಧ ಮೊದಲು ಕತ್ತಿಯೆತ್ತಿದ ಕಿತ್ತೂರು ರಾಣಿ ಚೆನ್ನಮ್ಮ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಹಾಗೂ ಸುರಪುರ ರಾಜಾ ವೆಂಕಟಪ್ಪ ನಾಯಕ ಅವರಂತಹ ವೀರರು ರಕ್ತ ಬಸಿದು ಉಳಿಸಿದ ಹೆಮ್ಮೆಯ ನಾಡಿದು," ಎಂದು ಇತಿಹಾಸದ ಪುಟಗಳನ್ನು ನೆನಪಿಸಿದ್ದಾರೆ.



"ಬ್ರಿಟಿಷ್, ನಿಜಾಮ ಮತ್ತು ಬೊಂಬಾಯಿ ಆಳ್ವಿಕೆಗಳ ನಡುವೆಯೂ, ಅನ್ಯಭಾಷೆಗಳ ಕರಾಳ ಪ್ರಭಾವಕ್ಕೆ ಸಿಲುಕದೆ ಕನ್ನಡದ ನೈಜ ಸೊಗಡು ಮತ್ತು ಗಂಡುಮೆಟ್ಟಿನ ಭಾಷೆಯನ್ನು ಎದೆಕೊಟ್ಟು ಕಾಪಾಡಿಕೊಂಡು ಬಂದವರು ಉತ್ತರ ಕರ್ನಾಟಕದ ಜನ. ಆಲೂರು ವೆಂಕಟರಾಯರು, ಪಾಟೀಲ ಪುಟ್ಟಪ್ಪನವರಂತಹ ಮಹನೀಯರು ಹೋರಾಡಿ ಕರ್ನಾಟಕ ಏಕೀಕರಣಕ್ಕೆ ನಾಂದಿ ಹಾಡಿದ್ದೇ ಈ ನೆಲದಲ್ಲಿ. ಇಷ್ಟೆಲ್ಲಾ ಬಲಿಷ್ಠ ಹಾಗೂ ಭವ್ಯ ಇತಿಹಾಸವಿರುವ ನೆಲದ ನುಡಿಯನ್ನು, ಉತ್ತರ ಕರ್ನಾಟಕದ ಜಾನಪದ ಸೊಗಡಿನ ಭಾಷೆಯನ್ನು ಕೀಳಾಗಿ ಕಾಣುವ ಹಕ್ಕು ಯಾವ ಪ್ರದೀಪ್ ಈಶ್ವರ್‌ಗೂ ಇಲ್ಲ," ಎಂದು ತೀವ್ರವಾಗಿ ತೊಳಲಿದ್ದಾರೆ. "ಜನಪ್ರತಿನಿಧಿ ಎನಿಸಿಕೊಂಡವರಿಗೆ ಈ ನೆಲದ ಇತಿಹಾಸ, ಸಂಸ್ಕೃತಿಯ ಕನಿಷ್ಠ ಅರಿವಿರಬೇಕು. ನಾಲಿಗೆ ಹರಿಬಾರದು. ಉತ್ತರ ಕರ್ನಾಟಕದ ಜನರ ಸ್ವಾಭಿಮಾನಕ್ಕೆ ಧಕ್ಕೆ ತಂದಿರುವ ಪ್ರದೀಪ್ ಈಶ್ವರ್ ಅವರು ತಕ್ಷಣವೇ ತಮ್ಮ ಹೇಳಿಕೆಯನ್ನು ಹಿಂಪಡೆದು, ಬಹಿರಂಗವಾಗಿ ಬೇಷರತ್ ಕ್ಷಮೆಯಾಚಿಸಬೇಕು. ಇಲ್ಲವಾದಲ್ಲಿ ಉತ್ತರ ಕರ್ನಾಟಕದ ಪ್ರತಿಯೊಂದು ಜಿಲ್ಲೆಯಲ್ಲೂ ಅವರ ವಿರುದ್ಧ ಹೋರಾಟ ರೂಪಿಸಲಾಗುವುದು. ಅಷ್ಟೇ ಅಲ್ಲ, ಅವರು ಈ ಭಾಗಕ್ಕೆ ಕಾಲಿಡದಂತೆ ತಡೆದು ಕಪ್ಪು ಬಾವುಟ ಪ್ರದರ್ಶಿಸಿ ತಕ್ಕ ಪಾಠ ಕಲಿಸಬೇಕಾಗುತ್ತದೆ," ಎಂದು ಇಲಿಯಾಸ್ ಪಟೇಲ್ ಬಳಗಾನೂರ ಅವರು ಅತ್ಯಂತ ಕಠಿಣವಾಗಿ ಎಚ್ಚರಿಸಿದ್ದಾರೆ.

## ಬೆಳಗಾವಿಯ ಹಿಂಡಲಗಾ ಕೇಂದ್ರ ಕಾರಾಗೃಹಕ್ಕೆ ಸ್ಥಳಾಂತರಿಸುವ ನಿರ್ಧಾರ ರದ್ದು!

**ಉದಯವಾಹಿನಿ, ಬೆಳಗಾವಿ**

ಅತ್ಯಾಚಾರ ಪ್ರಕರಣವೊಂದರಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವ ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರನ್ನು ಬೆಂಗಳೂರಿನ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಿಂದ ಬೆಳಗಾವಿಯ ಹಿಂಡಲಗಾ ಕೇಂದ್ರ ಕಾರಾಗೃಹಕ್ಕೆ ಸ್ಥಳಾಂತರಿಸುವ ನಿರ್ಧಾರವನ್ನು ಕಾರಾಗೃಹ ಅಧಿಕಾರಿಗಳು ರದ್ದುಗೊಳಿಸಿದ್ದಾರೆ.

ಮೂಲಗಳ ಪ್ರಕಾರ, ಪ್ರಜ್ವಲ್ ರೇವಣ್ಣ ಅವರ ಕೋಣೆಯಲ್ಲಿ ಮೊಬೈಲ್ ಫೋನ್ ಪತ್ತೆಯಾದ ಹಿನ್ನೆಲೆಯಲ್ಲಿ ಅವರನ್ನು ಹಿಂಡಲಗಾ ಜೈಲಿಗೆ ಸ್ಥಳಾಂತರಿಸುವಂತೆ ಕಾರಾಗೃಹ ಮತ್ತು ಸುಧಾರಣಾ ಸೇವೆಗಳ ಇಲಾಖೆ ಆದೇಶಿಸಿದ ಕೆಲವೇ ಗಂಟೆಗಳ ನಂತರ, ಶುಕ್ರವಾರ ಸಂಜೆ ಅಧಿಕಾರಿಗಳು ಅವರನ್ನು ಪರಪ್ಪನ ಅಗ್ರಹಾರ ಜೈಲಿನಲ್ಲಿಯೇ ಮುಂದುವರಿಸಲು ನಿರ್ಧರಿಸಿದ್ದಾರೆ.

ಸೆಂಟ್ರಲ್ ಕ್ರೈಮ್ ಬ್ರಾಂಚ್ ತಂಡವೊಂದು ಪರಪ್ಪನ ಅಗ್ರಹಾರ ಜೈಲಿನಲ್ಲಿ ನಡೆಸಿದ ಅನಿರೀಕ್ಷಿತ ಪರಿಶೀಲನೆ ವೇಳೆ ಪ್ರಜ್ವಲ್ ಮತ್ತು ಇನ್ನೊಬ್ಬ ವಿಚಾರಣಾಧೀನ ಕೈದಿ ಬಳಿ ಮೊಬೈಲ್ ಹಾಗೂ ಪೆನ್


ಉದಯವಾಹಿನಿ ಚಿತ್ರ

ಡ್ರೈವ್ ಪತ್ತೆಯಾದ ನಂತರ ಈ ವರ್ಗಾವಣೆಯ ನಿರ್ಧಾರವನ್ನು ಕೈಗೊಳ್ಳಲಾಗಿತ್ತು. ಪರಿಶೀಲನೆಯ ಸಮಯದಲ್ಲಿ ಪೊಲೀಸರು ಚಾರ್ಜರ್ ಮತ್ತು ನೋಟ್‌ಬುಕ್ ಅನ್ನು ಕೂಡ ವಶಪಡಿಸಿಕೊಂಡಿದ್ದು, ಇದು ಜೈಲಿನ ಭದ್ರತೆ ಹಾಗೂ ನಿಷೇಧಿತ ಎಲೆಕ್ಟ್ರಾನಿಕ್ ಸಾಧನಗಳ ಬಳಕೆಯ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಈ ವಸ್ತುಗಳು ಪತ್ತೆಯಾದ ಬೆನ್ನಲ್ಲೇ, ಪ್ರಜ್ವಲ್ ಅವರನ್ನು ಹಿಂಡಲಗಾ ಜೈಲಿಗೆ ಸ್ಥಳಾಂತರಿಸುವಂತೆ ಕಾರಾಗೃಹ ಇಲಾಖೆ ಡಿಜಿಪಿ ಅಲೋಕ್ ಕುಮಾರ್ ಅವರು ಶುಕ್ರವಾರ ಈ ಆದೇಶ ಹೊರಡಿಸಿದ್ದರು ಎಂದು ವರದಿಯಾಗಿದೆ.

## ಅನ್ಯ ಉದ್ದೇಶಕ್ಕೆ ಕೃಷಿ ವಿಜ್ಞಾನ ಕೇಂದ್ರದ ಜಮೀನು ಬಳಕೆ ಬೇಡ

**ಉದಯವಾಹಿನಿ, ಕಲಬುರಗಿ**

ನಗರದ ಆಳಂದ ಚೆಕ್‌ಪೋಸ್ಟ್ ಹತ್ತಿರದ ಕೃಷಿ ಸಂಶೋಧನಾ ಕೇಂದ್ರದ ಜಮೀನಿನಲ್ಲಿರುವ ಜಾಗವನ್ನು ಅನ್ಯ ಕಾರ್ಯಗಳ ಉದ್ದೇಶಕ್ಕೆ ಬಳಕೆ ಮಾಡಲು ಅವಕಾಶ ನೀಡದಂತೆ ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಡಾ.ಸಿದ್ರಾಮಪ್ಪ ಪಾಟೀಲ ಧಂಗಾಪುರ ಆಗ್ರಹಿಸಿದ್ದಾರೆ.ಈ ಸಂಬಂಧ ಕೃಷಿ ಸಚಿವ ಪಿ.ಎಂ.ನರೇಂದ್ರಸ್ವಾಮಿ ಅವರಿಗೆ ಮನವಿ ಪತ್ರ ಸಲ್ಲಿಸಿರುವ ಅವರು, ಡಾ.ಮಲ್ಲಿಕಾರ್ಜುನ ಖರ್ಗೆ ಅವರು 1974ರಲ್ಲಿ ರಾಜ್ಯದ ಸಚಿವರಾಗಿದ್ದ ಸಂದರ್ಭದಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಆಡಳಿತ ಮಂಡಳಿ ಸದಸ್ಯರಾಗಿದ್ದರು. ಈ ಸಂದರ್ಭದಲ್ಲಿ ಅವರು ಕಲಬುರಗಿ ಕೃಷಿ ವಿಜ್ಞಾನ ಕೇಂದ್ರ ಸ್ಥಾಪನೆಗೆ ಕಾರಣಿಕರ್ತರಾಗಿದ್ದರು. ಕೃಷಿ ವಿಜ್ಞಾನ ಕೇಂದ್ರಕ್ಕೆ ಆಳಂದ ಚೆಕ್‌ಪೋಸ್ಟ್ ಬಳಿ 134 ಎಕರೆ ಜಮೀನು ಕೊಡಿಸಲಾಗಿದೆ.

ಈ ಕೇಂದ್ರದಲ್ಲಿ ತೊಗರಿ ಮತ್ತು ಕಡಲೆ ಸಂಶೋಧನಾ ಕೇಂದ್ರ, ಕೃಷಿ ವಿಜ್ಞಾನ ಕೇಂದ್ರ, ಕೇಂದ್ರ ಸರ್ಕಾರದ ದ್ವಿದಳ ಧಾನ್ಯ ಆತ್ಮ ನಿರ್ಬರ ಮಿಷನ್ ಯೋಜನೆ ಅಡಿ ಸಂಶೋಧನೆ ಮತ್ತು ಬೀಜೋತ್ಪಾದನೆ ಕಾರ್ಯಕ್ರಮ ಚಾಲ್ತಿಯಲ್ಲಿದ್ದು, ದೇಶದ ಅತ್ಯುತ್ತಮ ಸಂಶೋಧನೆ ಕೇಂದ್ರಗಳಲ್ಲಿ ಕಲಬುರಗಿ ಕೃಷಿ ಸಂಶೋಧನಾ ಕೇಂದ್ರವು ಒಂದೆಂದು ಗುರುತಿಸಿಕೊಂಡಿದೆ. 134 ಎಕರೆ ಜಮೀನಿನ 50 ಎಕರೆಯಲ್ಲಿ ಕೃಷಿ ವಿಜ್ಞಾನ ಕೇಂದ್ರ, 25 ಎಕರೆಯಲ್ಲಿ ಕೃಷಿ ಮಹಾವಿದ್ಯಾಲಯ, 55 ಎಕರೆಯಲ್ಲಿ ಕೃಷಿ ಸಂಶೋಧನಾ ಕೇಂದ್ರ, 4 ಎಕರೆಯಲ್ಲಿ ಕಟ್ಟಡ ಮತ್ತು ಉಗ್ರಾಣ ಕೆಲಸ ನಿರ್ವಹಿಸುತ್ತಿದೆ. ಕೃಷಿ ಸಂಶೋಧನೆಗಾಗಿ ಮೀಸಲಿಟ್ಟಿರುವ ಈ ಜಮೀನಿನಲ್ಲಿ ಜಿಲ್ಲಾಡಳಿತ 12 ಎಕರೆ ಜಮೀನನ್ನು ಅಜೀಂ ಪ್ರೇಮ್ ಜಿ ಫೌಂಡೇಶನ್‌ನಿಂದ 500 ಹಾಸಿಗೆಗಳ ಆಸ್ಪತ್ರೆ ನಿರ್ಮಾಣಕ್ಕೆ ನಿರಾಪೇಕ್ಷಣಾ ಪತ್ರ ನೀಡುವಂತೆ ಪ್ರಸ್ತಾಪಿಸಿ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದರಿರುವುದಾಗಿ ತಿಳಿದುಬಂದಿದೆ.

## ದೇಶದ ಪ್ರಗತಿಗೆ ಪ್ರಧಾನಿ ಮೋದಿ ಕೊಡುಗೆ ಅಪಾರ

**ಉದಯವಾಹಿನಿ, ಯಾದಗಿರಿ**

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ದೇಶದ ಕಟ್ಟಕಡೆಯ ವ್ಯಕ್ತಿಗೂ ಅಭಿವೃದ್ಧಿಯ ಫಲ ತಲುಪಿಸುವ ಉದ್ದೇಶದಿಂದ ಹಲವು ಯೋಜನೆಗಳನ್ನು ಜಾರಿಗೊಳಿಸಿದೆ. ಸಾರ್ವಜನಿಕ ಸೇವೆಯಲ್ಲಿ 25 ವರ್ಷಗಳನ್ನು ಪೂರೈಸಿರುವ ಪ್ರಧಾನಿ ಮೋದಿ ಅವರು ದೇಶದ ಅಭಿವೃದ್ಧಿಗಾಗಿ ನಿರಂತರವಾಗಿ ಶ್ರಮಿಸಿದ್ದು, ದೇಶದ ಸುಭದ್ರತೆಗೆ ಅವರ ಕೊಡುಗೆ ಅಪಾರವಾಗಿದೆ ಎಂದು ಬಿಜೆಪಿ ಹಿರಿಯ ಮುಖಂಡ ರಾಚನಗೌಡ ಮುದ್ನಾಳ ಹೇಳಿದರು. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತ ಅಭಿವೃದ್ಧಿಯತ್ತ ಸಾಗುತ್ತಿದ್ದು, ಜಾಗತಿಕ ಮಟ್ಟದಲ್ಲಿ ತನ್ನ ಪ್ರಭಾವವನ್ನು ಹೆಚ್ಚಿಸಿಕೊಂಡಿದೆ ಎಂದು ಅಭಿಪ್ರಾಯಪಟ್ಟರು.ಪ್ರಧಾನಿ ಮೋದಿ ಅವರ ಕಳೆದ 25 ವರ್ಷಗಳ ಸಾರ್ವಜನಿಕ ಜೀವನವು ದೇಶದ ಸೇವೆ, ಸಮರ್ಪಣೆ ಹಾಗೂ ದೃಢ ಸಂಕಲ್ಪಕ್ಕೆ ಸಾಕ್ಷಿಯಾಗಿದೆ ಎಂದು ಅವರು ತಿಳಿಸಿದರು. ಗುಜರಾತ್‌ನಿಂದ ತಮ್ಮ ರಾಜಕೀಯ ಪಯಣ ಆರಂಭಿಸಿ, ನಂತರ ದೇಶದ ಪ್ರಧಾನಿಯಾಗಿ ಜವಾಬ್ದಾರಿ ನಿರ್ವಹಿಸುತ್ತಿರುವ ನರೇಂದ್ರ ಮೋದಿ ಅವರು ವಿಕಸಿತ ಭಾರತ ನಿರ್ಮಾಣದ ಗುರಿಯೊಂದಿಗೆ ದೇಶವನ್ನು ಮುನ್ನಡೆಸುತ್ತಿದ್ದಾರೆ. ಅವರ ದೂರದೃಷ್ಟಿ ಹಾಗೂ ಸುದೀರ್ಘ ಸಾರ್ವಜನಿಕ ಸೇವೆ ನವ ಭಾರತದ ನಿರ್ಮಾಣಕ್ಕೆ ಪ್ರೇರಣೆಯಾಗಿದೆ ಎಂದು ರಾಚನಗೌಡ ಮುದ್ನಾಳ ಹೇಳಿದರು.

## ಇಲಾಖೆಯ 6 ಕೋಟಿ ಅನುದಾನ ಬಳಕೆಯ ಸ್ವತಂತ್ರ ಆಡಿಟ್‌ಗೆ ಆಗ್ರಹ

**ಉದಯವಾಹಿನಿ, ಕಲಬುರಗಿ**

ರಾಯಚೂರು ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಸುಮಾರು 6 ಕೋಟಿ ರೂ.ಸರ್ಕಾರಿ ಅನುದಾನದ ಬಳಕೆ, ಖರೀದಿ, ಟೆಂಡರ್, ಪೂರೈಕೆ, ಬಿಲ್ ಪಾವತಿ, ದಾಸ್ತಾನು, ವಿತರಣೆ ಹಾಗೂ ಸಂಬಂಧಿತ ಆಡಳಿತಾತ್ಮಕ ಪ್ರಕ್ರಿಯೆಗಳ ಕುರಿತು ಕೇಳಿಬಂದಿರುವ ಗಂಭೀರ ಆರೋಪಗಳ ಹಿನ್ನೆಲೆಯಲ್ಲಿ, ಇಲಾಖಾ ಮಟ್ಟದ ಸಾಮಾನ್ಯ ಪರಿಶೀಲನೆಯ ಬದಲಾಗಿ ಸ್ವತಂತ್ರ ಉನ್ನತ ಮಟ್ಟದ ವಿಶೇಷ ಆಡಿಟ್ ಮತ್ತು ಸಮಗ್ರ ದಾಖಲೆ ಆಧಾರಿತ ತನಿಖೆ ನಡೆಸಬೇಕೆಂದು ಕಲ್ಯಾಣ ಕರ್ನಾಟಕ ಪ್ರತ್ಯೇಕ ರಾಜ್ಯ ಹೋರಾಟ ಸಮಿತಿ ಅಧ್ಯಕ್ಷ ಎಂ.ಎಸ್. ಪಾಟೀಲ್ ನರಿಬೋಳ ಆಗ್ರಹಿಸಿದ್ದಾರೆ.

ಈ ಕುರಿತು ಈಗಾಗಲೇ ಕರ್ನಾಟಕ ಲೋಕಾಯುಕ್ತರಿಗೆ2025ರ ಜೂನ್ 12 ರಂದು ದೂರು ಸಲ್ಲಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.ಸಾರ್ವಜನಿಕ ಹಣದ ಸಂರಕ್ಷಣೆ, ವಿದ್ಯಾರ್ಥಿಗಳ ಹಿತಾಸಕ್ತಿ ಮತ್ತು ಸರ್ಕಾರಿ ಆಡಳಿತದಲ್ಲಿ ಪಾರದರ್ಶಕತೆಯನ್ನು ಖಚಿತಪಡಿಸುವ ಉದ್ದೇಶದಿಂದ, ಈ ಪ್ರಕರಣದ ತನಿಖೆಯನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಂಬಂಧಪಟ್ಟ ಅಧಿಕಾರಿಗಳ ನೇರ ಅಥವಾ ಪರೋಕ್ಷ ಹಸ್ತಕ್ಷೇಪವಿಲ್ಲದೆ ನಡೆಸಬೇಕು ಎಂದು ಜಿಲ್ಲಾ ಪಂಚಾಯತ್ ರಾಯಚೂರು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಸಲ್ಲಿಸಿರುವ ಮನವಿಯಲ್ಲಿ ಒತ್ತಾಯಿಸಲಾಗಿದೆ.

## ದುಬಲಗುಂಡಿ ಗ್ರಾಮ ಪಂಚಾಯಿತಿಯಲ್ಲಿ ಭಾರಿ ಭ್ರಷ್ಟಾಚಾರ

**ಉದಯವಾಹಿನಿ, ಬೀದರ್**

ಜಿಲ್ಲೆಯ ಹುಮ್ನಾಬಾದ್ ತಾಲ್ಲೂಕಿನ ದುಬಲಗುಂಡಿ ಗ್ರಾಮ ಪಂಚಾಯಿತಿಯಲ್ಲಿ ನಕಲಿ ಬಿಲ್‌ಗಳನ್ನು ಸೃಷ್ಟಿಸಿ ಲಕ್ಷಾಂತರ ರೂಪಾಯಿಗಳ ಸರ್ಕಾರಿ ಹಣವನ್ನು ದುರುಪಯೋಗಪಡಿಸಿಕೊಳ್ಳಲಾಗಿದೆ ಎಂದು ಗ್ರಾಮ ಪಂಚಾಯಿತಿ ಮಾಜಿ ಸದಸ್ಯರು ಆದ ನ್ಯಾಯವಾದಿ ವಿಜಯಕುಮಾರ ನಾತೆ ಗಂಭೀರ ಆರೋಪ ಮಾಡಿದ್ದಾರೆ.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶನಿವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಈ ಅವ್ಯವಹಾರಗಳ ವಿರುದ್ಧ ಕಳೆದ ನಾಲ್ಕು ತಿಂಗಳಿನಿಂದ ತಾವು ಹೋರಾಟ ನಡೆಸುತ್ತಿರುವುದಾಗಿ ಅವರು ತಿಳಿಸಿದ್ದಾರೆ. ಎಸ್.ಜಿ.ಆರ್.ವೈ ಯೋಜನೆಯಡಿ 5 ಗ್ರಾಮ ಪಂಚಾಯಿತಿ ಕಟ್ಟಡಗಳ ನಿರ್ಮಾಣಕ್ಕೆಂದು ತಲಾ 8 ಲಕ್ಷ ರೂಪಾಯಿ ಹಣ ಬಂದಿದ್ದು, ಯಾವುದೇ ಕಟ್ಟಡ ನಿರ್ಮಿಸದೆಯೇ ನಕಲಿ ಬಿಲ್ ಮೂಲಕ ಹಣವನ್ನು ಎತ್ತಲಾಗಿದೆ. ಸಿವಿಲ್ ಗುತ್ತಿಗೆದಾರರ ಅರ್ಹತೆ ಇಲ್ಲದ, ಕೇವಲ ಪೈಪ್‌ಲೈನ್ ಸರಬರಾಜುದಾರರಾಗಿರುವ 'ಗಣಪತಿ' ಎಂಬುವವರ ಹೆಸರಿಗೆ ಹಣ ಪಾವತಿಸಲಾಗಿದೆ. ಅಕ್ರಮದ ಬಗ್ಗೆ ತನಿಖೆಯಾಗುವ ಭೀತಿಯಿಂದಾಗಿ, ನುಂಗಿದ್ದ ಹಣದಲ್ಲಿ 8 ಲಕ್ಷ ರೂಪಾಯಿಗಳನ್ನು 2026ರ ಸೆಪ್ಟೆಂಬರ್ 30ರಂದು ಪಂಚಾಯಿತಿಯ ಎಸ್‌ಬಿಐ ಖಾತೆಗೆ ವಾಪಸ್ ಕಟ್ಟಲಾಗಿದೆ. 15ನೇ ಹಣಕಾಸು ಯೋಜನೆಯಡಿ 37 ರಸೀದಿಗಳಿಲ್ಲದೆ (ವೋಚರ್ ಇಲ್ಲದೆ) ಸುಮಾರು 20 ಲಕ್ಷ ರೂಪಾಯಿಗಳನ್ನು ಪಾವತಿಸಲಾಗಿದೆ. ಉದ್ಯೋಗ ಖಾತ್ರಿ ಯೋಜನೆಯಡಿ 894 ಕಾಮಗಾರಿಗಳಿಗೆ ಸುಮಾರು 99 ಲಕ್ಷ ರೂಪಾಯಿಗಳನ್ನು ಯಾವುದೇ ಕೆಲಸ ಮಾಡದೆಯೇ ಪಾವತಿಸಲಾಗಿದೆ ಎಂದು ದೂರಿದರು.

## ಖಾಸಗಿ ಶಾಲೆಗಳಲ್ಲಿ ಆರ್‌ಟಿಇ ಪ್ರವೇಶ ಮರುಪ್ರಾರಂಭಿಸಿ

**ಉದಯವಾಹಿನಿ, ವಿಜಯಪುರ**

ಖಾಸಗಿ ಅನುದಾನರಹಿತ ಶಾಲೆಗಳಲ್ಲಿ ಅರ್ಹ ಮಕ್ಕಳಿಗೆ ಆರ್‌ಟಿಇ ಕಾಯ್ದೆಯಡಿ ಪ್ರವೇಶ ನೀಡುವ ವ್ಯವಸ್ಥೆಯನ್ನು ಮರುಪ್ರಾರಂಭಿಸಬೇಕು ಎಂದು ಭೀಮ್ ರಾಜ್ಯ ದಲಿತ್ ಸೇವಾ ಸಮಿತಿ ಆಗ್ರಹಿಸಿದೆ.

ಈ ಕುರಿತು ಸಮಿತಿಯ ರಾಜ್ಯ ಹಾಗೂ ಜಿಲ್ಲಾ ಘಟಕದ ಪದಾಧಿಕಾರಿಗಳು


ಉದಯವಾಹಿನಿ ಚಿತ್ರ

ವಿಜಯಪುರ ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿ, ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಿದರು. 2019ರ ಜ.30ರಂದು ಆರ್‌ಟಿಇ ನಿಯಮಗಳ ರೂಲ್ 4ಕ್ಕೆ ಮಾಡಲಾದ ತಿದ್ದುಪಡಿಯಿಂದ, ನೆರೆಹೊರೆಯಲ್ಲಿ ಸರ್ಕಾರಿ ಅಥವಾ ಅನುದಾನಿತ ಶಾಲೆಗಳಿರುವ ಪ್ರದೇಶಗಳಲ್ಲಿ ಖಾಸಗಿ ಶಾಲೆಗಳ ಆರ್‌ಟಿಇ ಪ್ರವೇಶಕ್ಕೆ ನಿಬರ್‌ಂಧ ಉಂಟಾಗಿದೆ. ಇದರಿಂದ ಬಡ ಹಾಗೂ ಹಿಂದುಳಿದ ಕುಟುಂಬಗಳ ಮಕ್ಕಳಿಗೆ ಉತ್ತಮ ಶಿಕ್ಷಣದ ಅವಕಾಶ ಸೀಮಿತವಾಗಿದೆ ಎಂದು ಸಮಿತಿ ತಿಳಿಸಿದೆ. ಆರ್‌ಟಿಇ ಕಾಯ್ದೆಯ ಆಶಯದಂತೆ ಪ್ರತಿಯೊಂದು ಮಗುವಿಗೂ ಗುಣಮಟ್ಟದ ಶಿಕ್ಷಣಕ್ಕೆ ಸಮಾನ ಅವಕಾಶ ಕಲ್ಪಿಸಬೇಕು. ನಿಯಮಗಳಲ್ಲಿನ ಬದಲಾವಣೆಗಳನ್ನು ಮರುಪರಿಶೀಲಿಸಿ, ಅರ್ಹ ಮಕ್ಕಳಿಗೆ ಖಾಸಗಿ ಶಾಲೆಗಳಲ್ಲೂ ಪ್ರವೇಶ ಕಲ್ಪಿಸಬೇಕು ಎಂದು ಒತ್ತಾಯಿಸಿದೆ. ಸಮಿತಿಯ ರಾಜ್ಯಾಧ್ಯಕ್ಷ ಅಪ್ಪುರಾಜ್ ನಿಮಾದಾರ, ಉಪಾಧ್ಯಕ್ಷ ವಿಜಯಕುಮಾರ ನಿಮಾದಾರ, ಪ್ರಧಾನ ಕಾರ್ಯದರ್ಶಿ ಸೋಮಶೇಖರ ಕಬಾಡೆ, ಜಿಲ್ಲಾ ಅಧ್ಯಕ್ಷ ನಾಗರಾಜ ಕಬಾಡೆ, ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ಕಾಸೆ ಇದ್ದರು.

## ಪ್ರಜಾಪ್ರಭುತ್ವದ ಮೌಲ್ಯ ಅರಿತು ಜವಾಬ್ದಾರಿಯುತ ನಾಗರಿಕರಾಗಿ

**ಉದಯವಾಹಿನಿ, ವಿಜಯಪುರ**

ವಿದ್ಯಾರ್ಥಿಗಳು ಪ್ರಜಾಪ್ರಭುತ್ವದ ಮಹತ್ವ, ಸಂವಿಧಾನದ ಆಶಯಗಳು ಹಾಗೂ ಸಂಸದೀಯ ವ್ಯವಸ್ಥೆಯ ಕಾರ್ಯವೈಖರಿಯನ್ನು ಅರಿತು ಜವಾಬ್ದಾರಿಯುತ ನಾಗರಿಕರಾಗಿ ರೂಪುಗೊಳ್ಳಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಹೇಳಿದರು. ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಭವನದಲ್ಲಿ ಗುರುವಾರ ನಡೆದ ವಿಜಯಪುರ ತಾಲ್ಲೂಕು ಮಟ್ಟದ ಯುವ ಸಂಸತ್ತು ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಪ್ರಜಾಪ್ರಭುತ್ವದ ಮೌಲ್ಯ, ನಾಯಕತ್ವದ ಗುಣ ಹಾಗೂ ಸಾರ್ವಜನಿಕ ಸಮಸ್ಯೆಗಳ ಕುರಿತು ಚರ್ಚಿಸುವ ಮನೋಭಾವ ಬೆಳೆಸುತ್ತವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿಜಯಪುರ ತಹಶೀಲ್ದಾರ್ ಪ್ರಶಾಂತ ಚನಗೊಂಡ ಮಾತನಾಡಿ, ಯುವ ಸಂಸತ್ತಿನಲ್ಲಿ ವಿದ್ಯಾರ್ಥಿಗಳು ಅತ್ಯುತ್ತಮವಾಗಿ ಭಾಗವಹಿಸಿರುವುದು ಸಂತಸದ ಸಂಗತಿ. ತಂಡ ರಾಜ್ಯಮಟ್ಟಕ್ಕೆ ಆಯ್ಕೆಯಾಗಿ ವಿಜಯಪುರ ತಾಲ್ಲೂಕಿನ ಕೀರ್ತಿ ಹೆಚ್ಚಿಸಲಿ ಎಂದು ಹಾರೈಸಿದರು.



ಉದಯವಾಹಿನಿ ಚಿತ್ರ

### ನೀರು ಪೂರೈಕೆಯ ಜವಾಬ್ದಾರಿ ಹೊಂದಿರುವ ಸಿಬ್ಬಂದಿಯ ನಿರ್ಲಕ್ಷ್ಯದಿಂದ ಸಮಸ್ಯೆ ಉಂಟಾಗುತ್ತಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ

# ಭೀಮಾನದಿ ಸಮೀಪದಲ್ಲಿದ್ದರೂ ಕೌಳೂರು ಜನರಿಗೆ ಹನಿನೀರಿಗೂ ಪರದಾಟ!

**ಉದಯವಾಹಿನಿ, ಯಾದಗಿರಿ**

ಊರಿನ ಪಕ್ಕದಲ್ಲೇ ಭೀಮಾನದಿ ಹರಿಯುತ್ತಿದ್ದರೂ ಇಡೀ ಊರಿಗೆ ನೀರಿನ ಬರಗಾಲ! ಕುಡಿಯುವ ನೀರಿಗಾಗಿ ಮಹಿಳೆಯರ ನಿತ್ಯದ ಪರದಾಟ, ವಾರ್ಡ್‌ವಾರು ನೀರು ಪೂರೈಕೆಯಲ್ಲಿನ ವ್ಯತ್ಯಾಸ, ಅಂಗನವಾಡಿ ಕೇಂದ್ರಗಳಲ್ಲಿನ ಮೂಲಸೌಕರ್ಯಗಳ ಕೊರತೆ ಇವೆಲ್ಲವೂ ಕೌಳೂರು ಗ್ರಾಮದ ಜನರನ್ನು ಕಾಡುತ್ತಿರುವ ಗಂಭೀರ ಸಮಸ್ಯೆಗಳಾಗಿವೆ. ಯಾದಗಿರಿ ತಾಲ್ಲೂಕು ಹಾಗೂ ಗುರುಮಠಕಲ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಕೌಳೂರು ಗ್ರಾಮದಲ್ಲಿ ಜನರು ಕುಡಿಯುವ ನೀರಿಗಾಗಿ ಪರದಾಡುತ್ತಿರುವುದಕ್ಕೆ ಪರಿಹಾರ ಯಾವಾಗ ಎಂಬ ಪ್ರಶ್ನೆ ಇದೀಗ ಗ್ರಾಮಸ್ಥರನ್ನು ಕಾಡುತ್ತಿದೆ.

> 1. ಜನರು ಪರದಾಡುವಂತಾಗಿರುವುದಕ್ಕೆ ಕಾರಣವೇನು?
> 2. ನೀರು ಪೂರೈಕೆಯ ವ್ಯವಸ್ಥೆಯಲ್ಲಿ ಲೋಪವಿದೆಯೇ?
> 3. ಸಂಬಂಧಪಟ್ಟ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ?

ಭೀಮಾನದಿ ಸಮೀಪದಲ್ಲಿದ್ದರೂ ಗ್ರಾಮಸ್ಥರಿಗೆ ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆಯಾಗುತ್ತಿಲ್ಲ ಎಂಬುದು ಸ್ಥಳೀಯರ ಅಳಲು. ಮನೆಗೆ ನೀರು ಬರುತ್ತದೆಯೋ ಇಲ್ಲವೋ ಎಂಬ ಆತಂಕದಲ್ಲೇ ಮಹಿಳೆಯರು ದಿನ ಕಳೆಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಮನೆಗೆಲಸ, ಮಕ್ಕಳ ಆರೈಕೆ ಸೇರಿದಂತೆ ದೈನಂದಿನ ಚಟುವಟಿಕೆಗಳನ್ನು ಬದಿಗಿಟ್ಟು ನೀರಿಗಾಗಿ ಕಾಯಬೇಕಾಗಿದೆ. ನೀರಿನಂತಹ ಮೂಲಭೂತ ಸೌಲಭ್ಯಕ್ಕಾಗಿ ಜನರು ಪರದಾಡುವಂತಾಗಿರುವುದಕ್ಕೆ


ಉದಯವಾಹಿನಿ ಚಿತ್ರ

> ನೀರು ಪೂರೈಕೆಯ ಜವಾಬ್ದಾರಿ ಹೊಂದಿರುವ ಸಿಬ್ಬಂದಿಯ ನಿರ್ಲಕ್ಷ್ಯದಿಂದ ಸಮಸ್ಯೆ ಉಂಟಾಗುತ್ತಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ಸಮಸ್ಯೆಯ ನೈಜ ಕಾರಣವನ್ನು ಪತ್ತೆಹಚ್ಚಿ ಪರಿಹಾರ ಕಲ್ಪಿಸಬೇಕು.
>
> – ಗ್ರಾಮಸ್ಥರು

ಕಾರಣವೇನು? ನೀರು ಪೂರೈಕೆಯ ವ್ಯವಸ್ಥೆಯಲ್ಲಿ ಲೋಪವಿದೆಯೇ? ಎಂಬ ಪ್ರಶ್ನೆಗಳು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿವೆ.

ನೀರಿನ ಸಮಸ್ಯೆಯಿಂದ ಬೇಸತ್ತ ಮಹಿಳೆಯರು ತಮ್ಮ ಅಳಲು ಹಾಗೂ ಆಕ್ರೋಶವನ್ನು ವಿಡಿಯೋ ಮೂಲಕ ವ್ಯಕ್ತಪಡಿಸಿದ್ದು, ಈ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದೆ ಎನ್ನಲಾಗಿದೆ. ಮಹಿಳೆಯರ ಈ ಆಕ್ರೋಶವು ನೀರು ಪೂರೈಕೆ ವ್ಯವಸ್ಥೆಯಲ್ಲಿನ ಸಮಸ್ಯೆಗಳನ್ನು ಪರಿಹರಿಸಬೇಕಾದ ಅಗತ್ಯವನ್ನು ಎತ್ತಿ ತೋರಿಸಿದೆ.

ವಾಟರ್‌ಮ್ಯಾನ್ ನಿರ್ಲಕ್ಷ್ಯ ವಹಿಸುತ್ತಿದ್ದಾರೆ ಎಂಬ ಆರೋಪವನ್ನೂ ಸ್ಥಳೀಯರು ಮಾಡಿದ್ದಾರೆ. ಆದರೆ, ಈ ಆರೋಪಗಳ ಕುರಿತು ಸಂಬಂಧಪಟ್ಟ ಸಿಬ್ಬಂದಿಯ ಪ್ರತಿಕ್ರಿಯೆ ಲಭ್ಯವಾಗಿಲ್ಲ. ಅಧಿಕಾರಿಗಳು ಆರೋಪಗಳ ಸತ್ಯಾಸತ್ಯತೆಯನ್ನು ಪರಿಶೀಲಿಸಿ, ಎಲ್ಲ ವಾರ್ಡ್‌ಗಳಿಗೂ ಸಮಾನವಾಗಿ ನೀರು ಪೂರೈಕೆಯಾಗುವಂತೆ ಕ್ರಮ ಕೈಗೊಳ್ಳಬೇಕಿದೆ.

ಗ್ರಾಮದಲ್ಲಿ ನೀರಿನ ಸಮಸ್ಯೆಯೊಂದೇ ಅಲ್ಲ, ಮಕ್ಕಳ ಆರೈಕೆ ಮತ್ತು ಶಿಕ್ಷಣಕ್ಕೆ ಸಂಬಂಧಿಸಿದ ಮೂಲಸೌಕರ್ಯಗಳ ಬಗ್ಗೆಯೂ ಕಳವಳ ವ್ಯಕ್ತವಾಗಿದೆ. ಕೌಳೂರು ಗ್ರಾಮದಲ್ಲಿ ಒಟ್ಟು ನಾಲ್ಕು ಅಂಗನವಾಡಿ ಕೇಂದ್ರಗಳಿದ್ದು, ಅವುಗಳಲ್ಲಿ ಎರಡು ಸ್ವಂತ ಕಟ್ಟಡಗಳಲ್ಲಿ ಹಾಗೂ ಉಳಿದ ಎರಡು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದು ಸ್ಥಳೀಯರು ತಿಳಿಸಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಕಟ್ಟಡಗಳ ಸ್ಥಿತಿ, ಕುಡಿಯುವ ನೀರು, ಸ್ವಚ್ಛತೆ ಹಾಗೂ ಮಕ್ಕಳಿಗೆ ಲಭ್ಯವಿರುವ ಸೌಲಭ್ಯಗಳನ್ನು ಪರಿಶೀಲಿಸಬೇಕು. ಅಗತ್ಯವಿರುವ ಕೇಂದ್ರಗಳಿಗೆ ಸೂಕ್ತ ಕಟ್ಟಡ ಮತ್ತು ಮೂಲಸೌಕರ್ಯಗಳನ್ನು ಒದಗಿಸಬೇಕೆಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಕುಡಿಯುವ ನೀರು, ಮಕ್ಕಳಿಗೆ ಅಗತ್ಯವಾದ ಸೌಲಭ್ಯಗಳು ಹಾಗೂ ಮೂಲಭೂತ ಅಭಿವೃದ್ಧಿ ಕಾರ್ಯಗಳು ಜನರ ಬದುಕಿಗೆ ನೇರವಾಗಿ ಸಂಬಂಧಿಸಿವೆ. ಇಂತಹ ಸಮಸ್ಯೆಗಳು ಎದುರಾದಾಗ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ತಕ್ಷಣ ಸ್ಪಂದಿಸಬೇಕಾಗಿದೆ. ಆದರೆ, ಗ್ರಾಮದಲ್ಲಿ ಸಮಸ್ಯೆಗಳು ಮುಂದುವರಿದಿದ್ದರೂ ಸೂಕ್ತ ಪರಿಹಾರ ದೊರೆಯುತ್ತಿಲ್ಲ ಎಂಬ ಅಸಮಾಧಾನ ಸ್ಥಳೀಯರಲ್ಲಿ ವ್ಯಕ್ತವಾಗುತ್ತಿದೆ.

### 4 ಪ್ರಾಂತ್ಯಗಳನ್ನ 15 ಸಣ್ಣ ಭಾಗಗಳಾಗಿ ವಿಭಜಿಸಲು ಅಸಿಮ್ ಮುನೀರ್ ರಹಸ್ಯ ಸ್ಕೆಚ್!

# ಪಾಕಿಸ್ತಾನ ಇಬ್ಭಾಗಕ್ಕೆ ಸೇನಾ ಮುಖ್ಯಸ್ಥನ ಮಾಸ್ಟರ್‌ಪ್ಲಾನ್?

**ಇಸ್ಲಾಮಾಬಾದ್ (ಪಾಕಿಸ್ತಾನ):** ಪಾಕಿಸ್ತಾನದ ಸರ್ವಾಧಿಕಾರಿಯಾಗಲು ವ್ಯವಸ್ಥಿತ ಪ್ಲಾನ್ ರೂಪಿಸುತ್ತಿರುವ ಸೇನಾ ಮುಖ್ಯಸ್ಥ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್, ದೇಶದ ಪ್ರಸ್ತುತ ಇರುವ 4 ಪ್ರಮುಖ ಪ್ರಾಂತ್ಯಗಳನ್ನು ವಿಭಜಿಸಿ 12 ರಿಂದ 15 ಸಣ್ಣ ಆಡಳಿತ ಘಟಕಗಳನ್ನಾಗಿ ಮರುಸಂಘಟಿಸುವ ಮಹಾಯೋಜನೆಯ ಮೂಲಕ, ಇಡೀ ದೇಶ ಸಂಪೂರ್ಣವಾಗಿ ಸೇನೆಯ ಕೈಗೊಂಬೆಯಾಗಿಸಲು ಕಸರತ್ತು ನಡೆಸುತ್ತಿದ್ದಾನೆ.

1. ಸೇನಾ ಮುಖ್ಯಸ್ಥ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್
2. ಪಾಕಿಸ್ತಾನದ ಸರ್ವಾಧಿಕಾರಿಯಾಗಲು ವ್ಯವಸ್ಥಿತ ಪ್ಲಾನ್
3. ಬ್ರಿಟಿಷರ ವಿಭಜಿಸಿ ಮತ್ತು ಆಳುವ ಉದ್ದೇಶದಿಂದ ಈ ರೀತಿ ಯೋಜನೆ

ಬ್ರಿಟಿಷರ ವಿಭಜಿಸಿ ಮತ್ತು ಆಳುವ ನೀತಿಯಂತೆ ಅಸಿಮ್ ಮುನೀರ, ಈ ಪ್ಲಾನ್ ಮಾಡುತ್ತಿದ್ದು, 28ನೇ ಸಂವಿಧಾನ ತಿದ್ದುಪಡಿಯ ಮೂಲಕ ಈ ಬದಲಾವಣೆಯ ಮೂಲಕ, ಸದ್ಯ ಪಾಕಿಸ್ತಾನದಲ್ಲಿ ಪಂಜಾಬ್, ಸಿಂಧ್, ಖೈಬರ್ ಪಖ್ತುಂಖ್ವಾ ಮತ್ತು ಬಲೂಚಿಸ್ತಾನ್ ಎಂಬ 4 ಪ್ರಮುಖ ಪ್ರಾಂತ್ಯಗಳನ್ನು 12 ರಿಂದ 15 ಸಣ್ಣ ಆಡಳಿತಾತ್ಮಕ ಘಟಕಗಳಾಗಿ ಮರುಸಂಘಟಿಸುವ ಅಥವಾ ವಿಭಜಿಸುವ ಉದ್ದೇಶವಿದಾಗಿದೆ. ಅದರಂತೆ,

**ಪಂಜಾಬ್ ಪ್ರಾಂತ್ಯ:** ಪಶ್ಚಿಮ ಪಂಜಾಬ್, ದಕ್ಷಿಣ ಪಂಜಾಬ್,



ಬಹಾವಲ್ಪುರ್ ಮತ್ತು ಪೋಟೋಹಾರ್

**ಸಿಂಧ್ ಪ್ರಾಂತ್ಯ:** ಕರಾಚಿ/ಕೆಳ ಸಿಂಧ್, ಮೇಲ್ ಸಿಂಧ್ ಮತ್ತು ಮೆಹ್ರಾನ್

**ಬಲೂಚಿಸ್ತಾನ್ ಪ್ರಾಂತ್ಯ:** ಬಲೂಚಿಸ್ತಾನ್ ಮತ್ತು ಮಕ್ರಾನ್

**ಖೈಬರ್ ಪಖ್ತುಂಖ್ವಾ :** ಖೈಬರ್, ದಕ್ಷಿಣ ಏಕಿಪಿ, ಹಜಾರಾ ಮತ್ತು ಕೋಹಿಸ್ತಾನ್

**ಸೇವೆಯ ಕೊರತೆ:** ಪ್ರಾಂತ್ಯಗಳು ದೊಡ್ಡದಾಗಿರುವುದರಿಂದ ಗ್ರಾಮೀಣ ಭಾಗದ ಜನರಿಗೆ ಕುಡಿಯುವ ನೀರು, ಶಿಕ್ಷಣದಂತಹ ಕನಿಷ್ಠ ಸೌಲಭ್ಯಗಳೂ ಸಿಗುತ್ತಿಲ್ಲ ಹಾಗೂ ಸರ್ಕಾರಿ ಕೆಲಸಗಳಿಗಾಗಿ ಗಂಟೆಗಟ್ಟಲೆ ಪ್ರಯಾಣಿಸಬೇಕಾಗಿದೆ. ಸಣ್ಣ ಪ್ರಾಂತ್ಯಗಳಿಂದ ಆಡಳಿತ ಸುಲಭವಾಗುತ್ತದೆ ಎಂಬುದು ಸೇನೆಯ ವಾದ. ಮುಂದುವರೆದು, ಈ ವಿಭಜನೆಯ ನಿಜವಾದ ಉದ್ದೇಶ ಆಡಳಿತ ಸುಧಾರಣೆಯಲ್ಲ, ಬದಲಿಗೆ ಪ್ರಾದೇಶಿಕ ರಾಜಕೀಯ ಪಕ್ಷಗಳ ಬಲವನ್ನು ಕುಗ್ಗಿಸುವುದು ಎಂದು ವಿಶ್ಲೇಷಕರು ಶಂಕಿಸಿದ್ದಾರೆ. ಅದರಂತೆ, ಪಂಜಾಬ್‌ನಲ್ಲಿ ನವಾಜ್ ಷರೀಫ್ ಅವರ PML(N) ಮತ್ತು ಸಿಂಧ್‌ನಲ್ಲಿ ಭುಟ್ಟೋ ಕುಟುಂಬದ ಕಕಕ ಪಕ್ಷಗಳು ಬಲವಾದ ಹಿಡಿತ ಹೊಂದಿವೆ. ಅದರಂತೆ, ಪ್ರಾಂತ್ಯಗಳು ಸಣ್ಣದಾದರೆ ಈ ರಾಜಕೀಯ ಶಕ್ತಿ ಕೇಂದ್ರಗಳು ದುರ್ಬಲಗೊಂಡು, ಇಡೀ ದೇಶ ಸಂಪೂರ್ಣವಾಗಿ ಸೇನೆಯ ಕೈಗೊಂಬೆಯಾಗಲಿದೆ ಎಂಬ ಆತಂಕವಿದೆ. ಆದರೆ, ಪಾಕಿಸ್ತಾನದ ಸಂವಿಧಾನದ ಆರ್ಟಿಕಲ್ 239ರ ಪ್ರಕಾರ, ಯಾವುದೇ ಪ್ರಾಂತ್ಯದ ಗಡಿಯನ್ನು ಬದಲಾಯಿಸಬೇಕಾದರೆ ರಾಷ್ಟ್ರೀಯ ಅಸೆಂಬ್ಲಿ ಹಾಗೂ ಸೆನೆಟ್‌ನಲ್ಲಿ 2/3 ಬಹುಮತದ ಜೊತೆಗೆ ಸಂಬಂಧಪಟ್ಟ ಪ್ರಾಂತ್ಯದ ಅಸೆಂಬ್ಲಿಯಲ್ಲೂ 2/3 ರಷ್ಟು ಒಪ್ಪಿಗೆ ಅಗತ್ಯ. ಈಗಾಗಲೇ ಸೆಪ್ಟೆಂಬರ್ 3 ರಂದು ಸಿಂಧ್ ಅಸೆಂಬ್ಲಿಯು ತನ್ನ ಪ್ರಾಂತ್ಯದ ವಿಭಜನೆಯನ್ನು ಸ್ಪಷ್ಟವಾಗಿ ತಿರಸ್ಕರಿಸಿ ಸರ್ವಾನುಮತದ ನಿರ್ಣಯವನ್ನು ಅಂಗೀಕರಿಸಿದೆ.

### ವಿಭಜನೆಗೆ ಕಾರಣವೇನು?

**ಆಡಳಿತಾತ್ಮಕ ಅಸಮತೋಲನ:** ಪಾಕಿಸ್ತಾನದ ಪ್ರಾಂತ್ಯಗಳು ಗಾತ್ರ ಮತ್ತು ಜನಸಂಖ್ಯೆಯಲ್ಲಿ ಭಾರಿ ವ್ಯತ್ಯಾಸ ಹೊಂದಿವೆ. ಉದಾಹರಣೆಗೆ, ಪಂಜಾಬ್ ಒಂದರಲ್ಲೇ 12.8 ಕೋಟಿ ಜನಸಂಖ್ಯೆ ಇದ್ದು, ಇದು ದೇಶದ ಅರ್ಧಕ್ಕಿಂತ ಹೆಚ್ಚು ಜನಸಂಖ್ಯೆಯಾಗಿದೆ. ಮತ್ತೊಂದೆಡೆ ಬಲೂಚಿಸ್ತಾನ್ ವಿಸ್ತೀರ್ಣದಲ್ಲಿ ದೊಡ್ಡದಾಗಿದ್ದರೂ ಕೇವಲ 1.5 ಕೋಟಿ ಜನಸಂಖ್ಯೆ ಹೊಂದಿದೆ.

## ಭಾರತೀಯ ಮೂಲದ ನ್ಯಾಯಶಾಸ್ತ್ರಜ್ಞೆಗೆ ನೊಬೆಲ್ ಶಾಂತಿ ಪ್ರಶಸ್ತಿ; ಟ್ರಂಪ್ ಕೆಂಡಾಮಂಡಲ, ಹತಾಶೆ!

**ವಾಷಿಂಗ್ಟನ್:** ನೊಬೆಲ್ ಶಾಂತಿ ಪ್ರಶಸ್ತಿ ಕೈ ತಪ್ಪಿರುವುದಕ್ಕೆ ಹತಾಶಗೊಂಡಿರುವ ಡೊನಾಲ್ಡ್ ಟ್ರಂಪ್, ಭಾರತೀಯ ಮೂಲದ, ದಕ್ಷಿಣ ಆಫ್ರಿಕಾದ ಪ್ರಸಿದ್ಧ ನ್ಯಾಯಶಾಸ್ತ್ರಜ್ಞೆಯಾದ 84 ವರ್ಷದ ನವನೇತಮ್ ನವಿ ಪಿಳ್ಳೆ ಅವರಿಗೆ 2026ರ ಸಾಲಿನ ಪ್ರತಿಷ್ಠಿತ ನೊಬೆಲ್ ಶಾಂತಿ ಪ್ರಶಸ್ತಿ ಘೋಷಣೆಯಾಗಿರುವುದಕ್ಕೆ ಪ್ರತಿಕ್ರಿಯೆ ನೀಡಿದ್ದು ನಾರ್ವೆಗೆ "ಅಳಿಸಲಾಗದ ಕಳಂಕ" ತಂದೊಡ್ಡುವಂತಹ "ಅಪಮಾನಕರ" ಆಯ್ಕೆ ಎಂದು ಹೇಳಿದ್ದಾರೆ.

ನೊಬೆಲ್ ಶಾಂತಿ ಪ್ರಶಸ್ತಿಯು ತಮಗೆ ಸಿಗಬೇಕಿತ್ತು ಎಂದು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಶುಕ್ರವಾರ ವಾದಿಸಿದರು. ಯುದ್ಧಾಪರಾಧಗಳು ಮತ್ತು ಮಾನವೀಯತೆಯ ವಿರುದ್ಧದ ಅಪರಾಧಗಳ ವಿರುದ್ಧ ಹೋರಾಟಕ್ಕಾಗಿ ದಕ್ಷಿಣ ಆಫ್ರಿಕಾದ ನ್ಯಾಯಾಧೀಶೆ ಮತ್ತು ಮಾನವ ಹಕ್ಕುಗಳ ಹೋರಾಟಗಾರ್ತಿ ನವಿ ಪಿಳ್ಳೆ ಅವರು ಶುಕ್ರವಾರ ಈ ಪ್ರತಿಷ್ಠಿತ ಪ್ರಶಸ್ತಿಯನ್ನು ಪಡೆದರು.

ಆದರೆ ಟ್ರಂಪ್, ನಾರ್ವೇಜಿಯನ್ ನೊಬೆಲ್ ಸಮಿತಿಯ ಆಯ್ಕೆಯನ್ನು "ಅಪಮಾನಕರ ಮತ್ತು ಮುಜುಗರದ ನಿರ್ಧಾರ" ಎಂದು ಹೇಳಿದ್ದಾರೆ. ನ್ಯೂಯಾರ್ಕ್‌ನ ಸಿರಾಕ್ಯೂಸ್‌ನಲ್ಲಿ ತಮ್ಮ ಬೆಂಬಲಿಗರ ಸಮಾವೇಶವನ್ನುದ್ದೇಶಿಸಿ





ಮಾತನಾಡುತ್ತಾ, ತಾವು ಪಿಳ್ಳೆ ಅವರ ಬಗ್ಗೆ "ಎಂದಿಗೂ ಕೇಳಿರಲಿಲ್ಲ" ಎಂದು ಹೇಳಿದರು. "ನಾನು ಈ ನಿರ್ದಿಷ್ಟ ವ್ಯಕ್ತಿಯ ಬಗ್ಗೆ ಎಂದಿಗೂ ಕೇಳಿರಲಿಲ್ಲ, ಆದರೂ ಅವರಿಗೆ ಅಭಿನಂದನೆಗಳು" ಎಂದು ಅವರು ಹೇಳಿದರು. "ನಿಮ್ಮ ಅಧ್ಯಕ್ಷನಾಗಿ ನನ್ನ ನೇತೃತ್ವದ ಅಮೆರಿಕ ಸಂಯುಕ್ತ ಸಂಸ್ಥಾನವು ನೊಬೆಲ್ ಶಾಂತಿ ಪ್ರಶಸ್ತಿಯನ್ನು ಪಡೆಯಬೇಕಿತ್ತು, ಆದರೆ ಅದು ಸಿಗಲಿಲ್ಲ." ಪಿಳ್ಳೆ ಅವರನ್ನು ಪ್ರಶಸ್ತಿ ವಿಜೇತರನ್ನಾಗಿ ಆಯ್ಕೆ ಮಾಡಿರುವುದು "ನಾರ್ವೆ ದೇಶದ ಮೇಲೆ ಅಳಿಸಲಾಗದ ಕಳಂಕ"ವನ್ನು ಉಂಟುಮಾಡಿದೆ ಎಂದು ಅವರು ಹೇಳಿದರು. ಜನವರಿ 2025 ರಲ್ಲಿ ಶ್ವೇತಭವನಕ್ಕೆ ಮರಳಿದಾಗಿನಿಂದ, ನೊಬೆಲ್ ಶಾಂತಿ ಪ್ರಶಸ್ತಿಯನ್ನು ಗೆಲ್ಲುವ ತಮ್ಮ ಬಯಕೆಯನ್ನು ಟ್ರಂಪ್ ಬಹಿರಂಗವಾಗಿ ಹೇಳುತ್ತಿದ್ದಾರೆ. ಆದರೆ ಇರಾನ್ ವಿರುದ್ಧದ ಯುದ್ಧ, ಗ್ರೀನ್‌ಲ್ಯಾಂಡ್‌ನಂತಹ ಪ್ರದೇಶಗಳ ವಿಸ್ತರಣೆಯ ಮಹತ್ವಾಕಾಂಕ್ಷೆಗಳು, ವಲಸಿಗರ ಕುರಿತಾದ ಕಠಿಣ ನಿಲುವು ಹಾಗೂ ಬಹುಪಕ್ಷೀಯತೆ ಮತ್ತು ಮಾಧ್ಯಮಗಳ ಮೇಲಿನ ದಾಳಿಗಳು ಅವರನ್ನು ಈ ಪ್ರಶಸ್ತಿಗೆ ಅನರ್ಹರನ್ನಾಗಿ ಮಾಡಿವೆ ಎಂದು ಪಿಳ್ಳೆ ಅವರ ಆಯ್ಕೆಯ ಘೋಷಣೆಗೆ ಮುನ್ನ ಓಸ್ಲೋದಲ್ಲಿನ ತಜ್ಞರು ಅಭಿಪ್ರಾಯಪಟ್ಟಿದ್ದರು. ಈ ಪ್ರಶಸ್ತಿಯು ಚಿನ್ನದ ಪದಕ, ಪ್ರಮಾಣಪತ್ರ ಮತ್ತು 1.2 ಮಿಲಿಯನ್ ಡಾಲರ್ ನಗದು ಬಹುಮಾನವನ್ನು ಒಳಗೊಂಡಿದೆ.

"ಪ್ರಜಾಪ್ರಭುತ್ವ ವಿರೋಧಿ ಮತ್ತು ನಾಗರಿಕತೆಯ ನಿಜವಾದ ಶತ್ರುಗಳಾಗಿರುವ ಕೆಲವೇ ಕೆಲವು ಉಗ್ರ ಸಿದ್ಧಾಂತವಾದಿಗಳಿಂದಾಗಿ ನೊಬೆಲ್ ಶಾಂತಿ ಪ್ರಶಸ್ತಿಯು ಶಾಶ್ವತವಾಗಿ ತನ್ನ ಘನತೆಯನ್ನು ಕಳೆದುಕೊಂಡಿದೆ" ಎಂದು ಟ್ರಂಪ್ ಹೇಳಿದರು. ಈ ವ್ಯಂಗ್ಯದ ಮಾತುಗಳು ವೆನೆಜುವೆಲಾದ ವಿರೋಧ ಪಕ್ಷದ ನಾಯಕಿ ಮಾರಿಯಾ ಕೊರಿನಾ ಮಚಾದೊ ಅವರನ್ನು ಉಲ್ಲೇಖಿಸುವಂತಿದ್ದವು; ಅವರು ಕಳೆದ ವರ್ಷ ಪ್ರಶಸ್ತಿಯನ್ನು ಗೆದ್ದ ನಂತರ ತಮ್ಮ ನೊಬೆಲ್ ಚಿನ್ನದ ಪದಕವನ್ನು ಟ್ರಂಪ್ ಅವರಿಗೆ ನೀಡಿದ್ದರು.

## ಜ್ಞಾನೇಶ್ ಕುಮಾರ್ ಹೋಗುತ್ತಾರೆ, ಸರ್ಕಾರ ಬಿದ್ದ ಬಳಿಕ ಪ್ರಜಾಪ್ರಭುತ್ವದ ಮರುಸ್ಥಾಪನೆ

**ನವದೆಹಲಿ:** ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ನಿರ್ಗಮನದ ಬಳಿಕ ಆಡಳಿತಾರೂಢ ಸರ್ಕಾರವನ್ನು ಮತದಾನದ ಮೂಲಕ ಅಧಿಕಾರದಿಂದ ಕೆಳಗಿಳಿಸಿ ಪ್ರಜಾಪ್ರಭುತ್ವವನ್ನು ಸರಿಪಡಿಸಲಾಗುವುದು ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ತಿಳಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಜ್ಞಾನೇಶ್ ಕುಮಾರ್ ಹೋಗುತ್ತಾರೆ, ಸರ್ಕಾರವೂ ಹೋಗುತ್ತದೆ. ಬಳಿಕ ಪ್ರಜಾಪ್ರಭುತ್ವದ ಮರುಸ್ಥಾಪನೆ ಕಾರ್ಯ ನಡೆಯಲಿದೆ ಎಂದಿದ್ದಾರೆ. ಈ ನಡುವೆ ದೆಹಲಿ ಪ್ರತಿಭಟನೆ ಹಿನ್ನೆಲೆ ತಿಭಟನಾಕಾರರ ವಿರುದ್ಧ ಸರ್ಕಾರದ ಕಠಿಣ ದಮನಕಾರಿ ಕ್ರಮಗಳನ್ನು ತಮಿಳುನಾಡಿನ ಮಾಜಿ ಮುಖ್ಯಮಂತ್ರಿ ಹಾಗೂ ದ್ರಾವಿಡ ಮುನ್ನೇತ್ರ ಕಳಗಂ (ಡಿಎಂಕೆ) ಅಧ್ಯಕ್ಷ ಎಂ.ಕೆ. ಸ್ಟಾಲಿನ್ ಕೂಡ ಟೀಕಿಸಿದ್ದಾರೆ.



ಈ ಕುರಿತು ಎಕ್ಸ್ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ದೆಹಲಿಯಲ್ಲಿ ನಡೆಯುತ್ತಿರುವ ಘಟನೆಗಳು ಮತ್ತು ಶಾಂತಿಯುತ ಪ್ರತಿಭಟನಾಕಾರರ ವಿರುದ್ಧ ನಡೆಯುತ್ತಿರುವ ದಮನಕಾರಿ ಕ್ರಮಗಳು ನಾನು ಕಂಡ ತುರ್ತು ಪರಿಸ್ಥಿತಿಯ ನೋವಿನ ನೆನಪುಗಳನ್ನು ಮರುಕಳಿಸುವಂತೆ ಮಾಡುತ್ತವೆ. ದೆಹಲಿ ಹಾಗೂ ದೇಶಾದ್ಯಂತ ವಶಕ್ಕೆ ಪಡೆಯಲಾದ ಎಲ್ಲಾ ರಾಜಕೀಯ ನಾಯಕರು, ವಿದ್ಯಾರ್ಥಿಗಳು ಮತ್ತು ಯುವ ಪ್ರತಿಭಟನಾಕಾರರನ್ನು ತಕ್ಷಣವೇ ಬಿಡುಗಡೆ ಮಾಡಬೇಕು ಎಂದು ಅವರು ಒತ್ತಾಯಿಸಿದ್ದಾರೆ. ರಾಜ್ಯದ ಆಡಳಿತ ಪಕ್ಷವನ್ನು ಟೀಕಿಸಿರುವ ಅವರು, ತಮಿಳುನಾಡಿನಲ್ಲಿ ಬಿಜೆಪಿ ಸರ್ಕಾರದ ವಿಸ್ತರಣೆಯಂತೆ ವರ್ತಿಸುತ್ತಿರುವ ಹಾಗೂ ಪ್ರತಿಭಟನಾ ನಿರತ ವಿದ್ಯಾರ್ಥಿಗಳ ಮೇಲೆ ಪೊಲೀಸ್ ದೌರ್ಜನ್ಯವನ್ನು ನಡೆಸುತ್ತಿರುವ ಕ್ರಮವನ್ನು ಖಂಡಿಸಲಾಗುವುದು. ಶಾಂತಿಯುತವಾಗಿ ಪ್ರತಿಭಟಿಸುವ ತಮ್ಮ ಪ್ರಜಾಸತ್ತಾತ್ಮಕ ಹಕ್ಕನ್ನು ಚಲಾಯಿಸುತ್ತಿರುವ ಯುವಜನರ ಮೇಲಿನ ದಾಳಿಯನ್ನು ಕೇಂದ್ರ ಸರ್ಕಾರ ತಕ್ಷಣವೇ ನಿಲ್ಲಿಸಬೇಕು ಎಂದು ಆಗ್ರಹಿಸಿದರು. ಪ್ರತಿಭಟನೆ ಕುರಿತು ಮಾತನಾಡಿರುವ ಕಾಂಗ್ರೆಸ್, ಯುವಜನರ ಶಾಂತಿಯುತ ಪ್ರತಿಭಟನೆಯಿಂದಾಗಿ ಪ್ರಧಾನಿ ಮತ್ತು ಗೃಹ ಸಚಿವರ ಜೋಡಿಯು ತೀವ್ರ ಆತಂಕ ಮತ್ತು ವಿಚಲಿತರಾಗಿದ್ದಾರೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಯು ನೈತಿಕವಾಗಿ ಅನಿವಾರ್ಯ ಎಂದಿದೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡರುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್, ವ್ಯವಸ್ಥೆಯ ಮೇಲಿನ ಸಾರ್ವಜನಿಕರ ನಂಬಿಕೆ ಮತ್ತು ವಿಶ್ವಾಸವನ್ನು ಮರುಸ್ಥಾಪಿಸಲು, ಈಗಾಗಲೇ ಸುಮಾರು 14 ಕೋಟಿ ಭಾರತೀಯರನ್ನು ಮತದಾನದ ಹಕ್ಕಿನಿಂದ ವಂಚಿತರನ್ನಾಗಿಸಿರುವ ಎಸ್‌ಐಆರ್ ಅನ್ನು ಅಮಾನತುಗೊಳಿಸುವುದು ಅತ್ಯಗತ್ಯ ಎಂದಿದೆ. ಸ್ವತಃ ಸುಪ್ರೀಂ ಕೋರ್ಟ್‌ಗೇ ಸುಳ್ಳು ಹೇಳಿರುವ ಮುಖ್ಯ ಚುನಾವಣಾ ಆಯುಕ್ತರ ರಾಜೀನಾಮೆ ಈಗ ನೈತಿಕವಾಗಿ ಅನಿವಾರ್ಯವಾಗಿದೆ. ಆದರೆ, ಎಲ್ಲಾ ಜನರ, ಅದರಲ್ಲೂ ವಿಶೇಷವಾಗಿ ಯುವಜನತೆಯ ಆಶೋತ್ತರಗಳನ್ನು ಈಡೇರಿಸಲು ಅತ್ಯಗತ್ಯವಾಗಿರುವ ನಮ್ಮ ಪ್ರಜಾಪ್ರಭುತ್ವದ ಮೂಲಭೂತ ತಳಹದಿಯನ್ನು ಮರುಸ್ಥಾಪಿಸುವ ನಿಟ್ಟಿನಲ್ಲಿ ಇದು ಕೇವಲ ಮೊದಲ ಹೆಜ್ಜೆ ಮಾತ್ರ ಎಂದಿದ್ದಾರೆ.

## ಜನರ ಮತ ಹಕ್ಕು ರಕ್ಷಣೆಗೆ ಇಂಡಿಯಾ ಒಕ್ಕೂಟದಿಂದ ದೆಹಲಿಯಲ್ಲಿ ನಾಳೆ ಪ್ರತಿಭಟನೆ

**ಕೇರಳಂ:** ಜನರ ಮತದಾನದ ಹಕ್ಕು ರಕ್ಷಣೆಯ ಹೋರಾಟದ ಭಾಗವಾಗಿ ಇಂಡಿಯಾ ಮೈತ್ರಿಕೂಟದ ಒಕ್ಕೂಟ ನವದೆಹಲಿಯಲ್ಲಿ ಸೋಮವಾರದಿಂದ ಪ್ರತಿಭಟನೆ ನಡೆಸಲಿದೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ತಿಳಿಸಿದರು.



ಇಲ್ಲಿ ವರದಿಗಾರರ ಜೊತೆ ಮಾತನಾಡಿದ ಅವರು, ಇಂಡಿಯಾ ಒಕ್ಕೂಟ ಇತ್ತೀಚಿಗೆ ರಾಷ್ಟ್ರಪತಿ ಅವರನ್ನು ಭೇಟಿಯಾಗಿ ಭಾರತದ ಮುಖ್ಯ ಚುನಾವಣಾ ಆಯುಕ್ತರ ವಿಚಾರ ಮತ್ತು ಮತ ಕಳ್ಳತನ ಕುರಿತು ಕಳವಳ ವ್ಯಕ್ತಪಡಿಸಿದೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ರಕ್ಷಿಸಲು ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ನಡೆಸುತ್ತಿರುವ ಪ್ರಯತ್ನಗಳು ಅವರ ಪತನಕ್ಕೆ ಕಾರಣವಾಗಲಿವೆ ಎಂದು ಆರೋಪಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಪತನ ಹಂತವನ್ನು ತಲುಪುತ್ತಿರುವಂತೆ ವರ್ತಿಸುತ್ತಿದ್ದಾರೆ. ಅವರು ವಿಪಕ್ಷಗಳ ಪ್ರತಿಭಟನೆಗೆ ಹೆದರುತ್ತಿದ್ದಾರೆ. ಪ್ರತಿಭಟನೆ ಹಿನ್ನೆಲೆ ಮೆಟ್ರೋ ನಿಲ್ದಾಣ ಸೇರಿದಂತೆ ಪ್ರಮುಖ ನಿರ್ಬಂಧಗಳನ್ನು ವಿಧಿಸಿದ್ದಾರೆ. ಚುನಾವಣಾ ಪ್ರಕ್ರಿಯೆ ಮತ್ತು ವ್ಯವಸ್ಥೆಯು ಮುಕ್ತ ಹಾಗೂ ನ್ಯಾಯಸಮ್ಮತವಾಗುವವರೆಗೆ ಕಾಂಗ್ರೆಸ್ ಮತ್ತು ಇಂಡಿಯಾ ಮೈತ್ರಿಕೂಟ ತಮ್ಮ ಹೋರಾಟವನ್ನು ಮುಂದುವರಿಸಲಿವೆ ಎಂದರು. ಕೇರಳದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯ ವಿರುದ್ಧ ಕಾಂಗ್ರೆಸ್ ಎಚ್ಚರಿಕೆಯಿಂದ ಮಧ್ಯಪ್ರವೇಶಿಸಿದೆ. ಜೊತೆಗೆ, ಚುನಾವಣಾ ಆಯೋಗದ ಲೆಟರ್‌ಹೆಡ್‌ನಲ್ಲಿ ಬಿಜೆಪಿಯ ಚುನಾವಣಾ ಚಿಹ್ನೆಯಾದ ಕಮಲ ಕಾಣಿಸಿಕೊಂಡಿದ್ದರಿಂದ ಉಂಟಾದ ವಿವಾದವನ್ನೂ ಅವರು ಪ್ರಸ್ತಾಪಿಸಿದರು.

ಕೇರಳದಲ್ಲಿನ ಏಮ್ಸ್‌ಗೂ ಕೇಂದ್ರ ಬಿಜೆಪಿ ಸರ್ಕಾರ ಅನುದಾನ ನೀಡುತ್ತಿಲ್ಲ. ರಾಜ್ಯಕ್ಕೆ ಈ ಸೌಲಭ್ಯವನ್ನು ನಿರಾಕರಿಸಲು ಕೇಂದ್ರ ಸರ್ಕಾರ ನೀಡಿದ ಕಾರಣಗಳು ಸಮರ್ಥನೀಯವಾಗಿಲ್ಲ ಎಂದು ಕೂಡ ಟೀಕಿಸಿದರು.

## CJP ಪ್ರತಿಭಟನೆ ವಿಫಲ ಪ್ರದರ್ಶನ

**ನವದೆಹಲಿ:** ನಗರವನ್ನು "ಬಂಧಿ"ಯನ್ನಾಗಿಸುವ ಉದ್ದೇಶವಿದ್ದ ಪ್ರತಿಭಟನೆಯು ಅಂತಿಮವಾಗಿ "ವಿಫಲ ಪ್ರದರ್ಶನ"ವಾಯಿತು ಎಂದು ಬಿಜೆಪಿ ನಾಯಕ ಸಂಬಿತ್ ಪಾತ್ರಾ ಸಿಜೆಪಿ ಪ್ರತಿಭಟನೆ ಬಗ್ಗೆ ಶನಿವಾರ ಹೇಳಿದ್ದಾರೆ.



ಇದೇ ವೇಳೆ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ವಿದೇಶಿ ಶಕ್ತಿಗಳೊಂದಿಗೆ ಕೈಜೋಡಿಸಿ ಅರಾಜಕತೆಯನ್ನು ಹರ ಡು ತ್ತಿದ್ದಾರೆ ಎಂದು ಅವರು ಆರೋಪಿಸಿದರು.

ಜಂತರ್ ಮಂತರ್ ಪ್ರತಿಭಟನಾ ಸ್ಥಳದತ್ತ ತೆರಳುತ್ತಿದ್ದ ನೂರಾರು ಯುವಕರು ಮತ್ತು ಹಲವಾರು ರಾಜಕಾರಣಿಗಳನ್ನು ಪೊಲೀಸರು ವಶಕ್ಕೆ ಪಡೆದ ನಂತರ ಮಾತನಾಡಿದ ಪಾತ್ರಾ, ಇದು ಗುಂಪುಶಾಹಿಯ ವಿರುದ್ಧ ಪ್ರಜಾಪ್ರಭುತ್ವದ ಗೆಲುವು ಎಂದು ಬಣ್ಣಿಸಿದರು. ಪಕ್ಷದ ಪ್ರಧಾನ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಪಾತ್ರಾ, ರಾಹುಲ್ ಗಾಂಧಿ ಅವರನ್ನು "ಅಯೋಗ್ಯ" ನಾಯಕ ಎಂದು ಕರೆದರು. ಸಭೆಯೊಂದರಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂಡಿಯಾ' ಮೈತ್ರಿಕೂಟದ "ಮತ ಕಳ್ಳತನ"ದ ಆರೋಪವನ್ನು ನಿರಾಕರಿಸಲಿಲ್ಲ ಎಂದು ಗಾಂಧಿ ಶುಕ್ರವಾರ ನೀಡಿದ್ದ ಹೇಳಿಕೆಯನ್ನು ಅವರು ಖಂಡಿಸಿದರು. "ಜಂತರ್ ಮಂತರ್‌ನಲ್ಲಿ ನಡೆಯುತ್ತಿರುವುದು ಮತ್ತು ಟಿವಿ ಹಾಗೂ ವಿವಿಧ ಸಾಮಾಜಿಕ ಜಾಲತಾಣಗಳಲ್ಲಿ ತೋರಿಸಲಾಗುತ್ತಿರುವುದು ಭಾರತದ ನೈಜ ಚಿತ್ರಣವಲ್ಲ. ಭಾರತ ಶಾಂತಿಯುತವಾಗಿದೆ ಮತ್ತು ಉತ್ತಮ ಆಡಳಿತದೊಂದಿಗೆ ಮುನ್ನಡೆಯುತ್ತಿದೆ," ಎಂದು ಪಾತ್ರಾ ಹೇಳಿದರು. ಈ ಪ್ರತಿಭಟನೆಯ ಮೂಲಕ ರಾಷ್ಟ್ರ ರಾಜಧಾನಿ ಮತ್ತು ಇಡೀ ಭಾರತವನ್ನೇ ಒತ್ತೆಯಾಳಾಗಿ ಇರಿಸಿಕೊಳ್ಳುವ ಪ್ರಯತ್ನ ನಡೆಯಿತು ಎಂದು ಅವರು ಆರೋಪಿಸಿದರು.

"ಇಲ್ಲಿ ಹಿಂಸಾಚಾರವನ್ನು ಪ್ರಚೋದಿಸುವ, ದೈಹಿಕ ಸಂಘರ್ಷ ಮತ್ತು ಬೀದಿ ಜಗಳಗಳನ್ನು ಉಂಟುಮಾಡುವ ಪ್ರಯತ್ನಗಳು ನಡೆದವು. ಆದರೆ ಇದು ವಿಫಲ ಪ್ರದರ್ಶನವಾಗಿ ಉಳಿಯಿತು. ಗುಂಪುಶಾಹಿಯ ವಿರುದ್ಧ ಪ್ರಜಾಪ್ರಭುತ್ವ ಜಯಗಳಿಸಿತು. ಇಂದು ದೆಹಲಿಯಲ್ಲಿ ಪ್ರಜಾಪ್ರಭುತ್ವವು ತನ್ನ ಶಕ್ತಿಯನ್ನು ಸಾಬೀತುಪಡಿಸಿರುವ ರೀತಿ ಮತ್ತು ಇಡೀ ಪರಿಸ್ಥಿತಿ ನಿಯಂತ್ರಣದಲ್ಲಿರುವುದನ್ನು ಗಮನಿಸಿದರೆ, ಅರಾಜಕತಾವಾದಿಗಳು ವಿಫಲರಾಗಿದ್ದಾರೆ ಮತ್ತು ಅವರ ವಿಫಲ ಪ್ರದರ್ಶನ ಯಶಸ್ವಿಯಾಗಲಿಲ್ಲ ಎಂದು ನಾನು ಪುನರುಚ್ಚರಿಸಲು ಬಯಸುತ್ತೇನೆ," ಎಂದು ಅವರು ಹೇಳಿದರು.

### ರಷ್ಯಾದ ಕಚ್ಚಾ ತೈಲ ಖರೀದಿ ಬಲವಾಗಿ ವಿರೋಧಿಸಿ ಭಾರತ, ಚೀನಾದಂತಹ ರಾಷ್ಟ್ರಗಳ ಮೇಲೆ ತೆರಿಗೆ ಹೇರಿದ್ದ ಅಧ್ಯಕ್ಷ ಈಗ ಉಲ್ಟಾ ಹೊಡೆದಿದ್ದಾರೆ

# ರಷ್ಯಾದ ತೈಲ ಖರೀದಿಗೆ ನಿರ್ಬಂಧ ಹೇರಿದ್ದ ಟ್ರಂಪ್, ರಷ್ಯಾದೊಂದಿಗೇ ಡೀಸೆಲ್ ಖರೀದಿ ಒಪ್ಪಂದ

**ಅಮೆರಿಕ:** ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳೋದೊಂದು,ಮಾಡೋದೊಂದು ಎಂಬುದಕ್ಕೆ ಮತ್ತೊಂದು ಹೊಸ ಉದಾಹರಣೆ ಸಿಕ್ಕಿದೆ. ರಷ್ಯಾದ ಕಚ್ಚಾ ತೈಲ ಖರೀದಿ ಮಾಡಿದ್ದಕ್ಕೆ ಇತರೆ ರಾಷ್ಟ್ರಗಳ ಮೇಲೆ ಭಾರಿ ತೆರಿಗೆ ಹಾಕಿದ್ದ ಟ್ರಂಪ್ ಇದೀಗ, ತಾನೇ ರಷ್ಯಾದ ಜೊತೆಗೆ ಡೀಸೆಲ್ ಖರೀದಿ ಒಪ್ಪಂದ ಮಾಡಿಕೊಂಡು ವಿಶ್ವಕ್ಕೇ ಶಾಕ್ ನೀಡಿದ್ದಾರೆ.

1. ಉಲ್ಟಾ ಹೊಡೆದ ಅಮೇರಿಕ ಅಧ್ಯಕ್ಷ ಟ್ರಂಪ್
2. ಆಘಾತಕಾರಿ ಒಪ್ಪಂದ ಮಾಡಿಕೊಂಡಿದ್ದಾರೆ.
3. ಟ್ರುಥ್ ಸೋಷಿಯಲ್ ಮೀಡಿಯಾದಲ್ಲಿ ಮಾಹಿತಿ

ರಷ್ಯಾದ ಕಚ್ಚಾ ತೈಲ ಖರೀದಿಯನ್ನು ಬಲವಾಗಿ ವಿರೋಧಿಸಿ ಭಾರತ, ಚೀನಾದಂತಹ ರಾಷ್ಟ್ರಗಳ ಮೇಲೆ ತೆರಿಗೆ ಯುದ್ಧ ಸಾರಿದ್ದ ಅಮೆರಿಕದ ಅಧ್ಯಕ್ಷ ಈಗ ದಿಢೀರ್ ಉಲ್ಟಾ ಹೊಡೆದಿದ್ದಾರೆ. ರಷ್ಯಾದಿಂದ ತೈಲ ಖರೀದಿ ಮಾಡಲು ಮಹತ್ವದ ಮತ್ತು ಆಘಾತಕಾರಿ ಒಪ್ಪಂದ ಮಾಡಿಕೊಂಡಿದ್ದಾರೆ. ಈ ಬಗ್ಗೆ ಅವರೇ ಟ್ರುಥ್ ಸೋಷಿಯಲ್ ಮೀಡಿಯಾದಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ.

ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ಜೊತೆಗಿನ ದೂರವಾಣಿ ಕರೆಯಲ್ಲಿ ಡೀಸೆಲ್ ಪೂರೈಕೆಗಾಗಿ ಒಪ್ಪಂದ ಮಾಡಿಕೊಂಡಿದ್ದೇವೆ. ಇದರನ್ವಯ ರಷ್ಯಾ, ತಕ್ಷಣವೇ ಅಮೆರಿಕಕ್ಕೆ 3 ಲಕ್ಷ ಟನ್ ಡೀಸೆಲ್ ಅನ್ನು ಪೂರೈಸಲಿದೆ. ಆ ಬಳಿಕ ನವೆಂಬರ್‌ನಲ್ಲಿ 5 ಲಕ್ಷ ಟನ್ ಕೊಟ್ಟರೆ, ಅದಾದ ಬಳಿಕ 10 ಲಕ್ಷ ಟನ್ ಸರಬರಾಜು ಮಾಡಲಿದೆ. ನಂತರ 30 ಲಕ್ಷ ಟನ್ ಡೀಸೆಲ್ ವಿತರಿಸಲಿದೆ ಎಂದು ಟ್ರಂಪ್ ಬರೆದುಕೊಂಡಿದ್ದಾರೆ.

ಕಳೆದ ತಿಂಗಳು ವಿರೋಧ, ಈಗ ದೋಸ್ತಿ! ರಷ್ಯಾದ ತೈಲ ಮತ್ತು ಅನಿಲ ಆದಾಯಕ್ಕೆ ಬ್ರೇಕ್ ಹಾಕುವ ಉದ್ದೇಶದಿಂದ ಕಳೆದ ತಿಂಗಳಷ್ಟೇ ಟ್ರಂಪ್ ಕಠಿಣ ನಿರ್ಬಂಧಗಳ ಕಾಯ್ದೆಗೆ ಸಹಿ ಹಾಕಿದ್ದರು. ಅದಾಗಿ




### ಸಿಡಿಮಿಡಿಗೊಂಡ ಉಕ್ರೇನ್

**ಡೊನಾಲ್ಡ್ ಟ್ರಂಪ್ ಅವರ ಈ ನಿರ್ಧಾರವು ಉಕ್ರೇನ್ ಪಾಲಿಗೆ ಬರಸಿಡಿಲು ಬಡಿದಂತಾಗಿದೆ. ತನ್ನ ವಿರುದ್ಧ ಕಳೆದ ನಾಲ್ಕೂವರೆ ವರ್ಷಗಳಿಂದ ಯುದ್ಧ ಮಾಡುತ್ತಿರುವ ರಷ್ಯಾದಿಂದ ಅಮೆರಿಕವೇ ಡೀಸೆಲ್ ಖರೀದಿ ಒಪ್ಪಂದ ಮಾಡಿಕೊಂಡಿದ್ದು 'ಬಲಿಷ್ಠ ದೇಶದ ಅತ್ಯಂತ ದುರ್ಬಲ ನಿರ್ಧಾರ' ಎಂದು ಟೀಕಿಸಿದೆ.**

30 ದಿನ ಕಳೆಯುವಷ್ಟರಲ್ಲಿ ಉಲ್ಟಾ ಹೊಡೆದಿರುವ ಅಮೆರಿಕದ ಅಧ್ಯಕ್ಷ ರಷ್ಯಾದ ಜೊತೆಗೆ ಒಪ್ಪಂದ ಮಾಡಿಕೊಂಡು ಜಗತ್ತಿಗೇ ಶಾಕ್ ನೀಡಿದ್ದಾರೆ.

ರಷ್ಯಾ ಜೊತೆ ತುರ್ತು ಒಪ್ಪಂದ ಮಾಡಿಕೊಂಡಿದ್ದೇಕೆ? ಇರಾನ್ ಜೊತೆಗಿನ ಸಂಘರ್ಷದಿಂದ ಅಮೆರಿಕದಲ್ಲಿ ತೈಲ ಬೆಲೆ ಗಗನಕ್ಕೇರಿದೆ. ಒಂದು ಗ್ಯಾಲನ್ ಡೀಸೆಲ್ ಸದ್ಯ 6.28 ಡಾಲರ್‌ಗೆ ತಲುಪಿದೆ. ಇದೇ ವೇಳೆ ನವೆಂಬರ್‌ನಲ್ಲಿ ಮಧ್ಯಂತರ ಚುನಾವಣೆ ನಡೆಯಲಿದ್ದು, ಡೊನಾಲ್ಡ್ ಟ್ರಂಪ್ ವಿರುದ್ಧ ಜನಾಕ್ರೋಶ ವ್ಯಕ್ತವಾಗುತ್ತಿದೆ. ಇದನ್ನು ತಣಿಸಲು ಟ್ರಂಪ್ ಈ ಆಘಾತಕಾರಿ ನಿರ್ಧಾರ ತಳೆದಿದ್ದಾರೆ.

ತಮ್ಮ ಈ ನಿರ್ಧಾರವನ್ನು ಸಮರ್ಥಿಸಿಕೊಂಡಿರುವ ಟ್ರಂಪ್, ಅಮೆರಿಕನ್ನರಿಗೆ ಅದರಲ್ಲೂ ಮುಖ್ಯವಾಗಿ ನಮ್ಮ ಶ್ರೇಷ್ಠ ರೈತರು ಮತ್ತು ಟ್ರಕ್ಕರ್‌ಗಳಿಗೆ ಇಂಧನ ಬೆಲೆ ಕಡಿಮೆ ಮಾಡುವುದು ನನ್ನ ಮೊದಲ ಆದ್ಯತೆ. ಹೀಗಾಗಿ, ತಕ್ಷಣಕ್ಕೆ ಡೀಸೆಲ್ ಸರಬರಾಜು ಮಾಡಿಕೊಳ್ಳಲು ರಷ್ಯಾದ ಜೊತೆಗೆ ತುರ್ತು ಒಪ್ಪಂದ ಮಾಡಿಕೊಂಡಿದ್ದಾಗಿ ತಿಳಿಸಿದ್ದಾರೆ.

**ಟ್ರಂಪ್ ಒಪ್ಪಂದಕ್ಕೆ ವಿರೋಧ:** ಈ ವಿಚಿತ್ರ ಒಪ್ಪಂದಕ್ಕೆ ಅಮೆರಿಕದೊಳಗೆ, ಅದರ ಮಿತ್ರ ರಾಷ್ಟ್ರಗಳು ಅದರಲ್ಲೂ ಪ್ರಮುಖವಾಗಿ ಉಕ್ರೇನ್ ತೀವ್ರ ವಿರೋಧ ವ್ಯಕ್ತಪಡಿಸಿವೆ. ಅಮೆರಿಕದ ಸಂಸತ್ತು ರಷ್ಯಾ ವಿರುದ್ಧ ಕಠಿಣ ನಿರ್ಬಂಧ ಹೇರಲು ಒಮ್ಮತದಿಂದ ನಿರ್ಣಯ ಅಂಗೀಕರಿಸಿದ್ದಾಗ ಟ್ರಂಪ್ ಅವರ ಈ ಕ್ರಮವು ಶ್ವೇತಭವನದ ಬದ್ಧತೆಯನ್ನೇ ಪ್ರಶ್ನಿಸುವಂತಿದೆ.

ಟ್ರಂಪ್ ಅವರ ಈ ನಿರ್ಧಾರವು ಉಕ್ರೇನ್, ಯುರೋಪಿಯನ್ ಮಿತ್ರರಾಷ್ಟ್ರಗಳು ಮತ್ತು ಅಮೆರಿಕದ ರಾಷ್ಟ್ರೀಯ ಭದ್ರತೆಗೆ ಮಾಡಿದ ದ್ರೋಹ. ರಷ್ಯಾಕ್ಕೆ ತಾವೇ ಆರ್ಥಿಕ ನೆರವು ನೀಡಲು ಮುಂದಾಗಿದ್ದಾರೆ. ಇದು, ಅಧ್ಯಕ್ಷರ ಮಿತಿಮೀರಿದ ನಡವಳಿಕೆ ಎಂದು ಸೆನೆಟ್‌ನ ಡೆಮಾಕ್ರೆಟಿಕ್ ನಾಯಕ ಚಕ್ ಶುಮರ್, ಸೆನೆಟರ್ ಜೀನ್ ಶಾಹೀನ್, ಎಲಿಜಬೆತ್ ವಾರೆನ್ ಅವರು ಜಂಟಿ ಹೇಳಿಕೆಯಲ್ಲಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ನಿರ್ಬಂಧ ಸಡಿಲಿಸಿದ ಖಜಾನೆ ಇಲಾಖೆ:** ಇನ್ನೊಂದು ಆಘಾತಕಾರಿ ಬೆಳವಣಿಗೆಯಲ್ಲಿ ಅಮೆರಿಕದ ಖಜಾನೆ ಇಲಾಖೆಯು, ರಷ್ಯಾದ ಡೀಸೆಲ್ ಜಾಗತಿಕ ಮಾರುಕಟ್ಟೆಗಳಿಗೆ ಪೂರೈಕೆಯಾಗಲು ಅನುಕೂಲವಾಗುವಂತೆ ತಾನೇ ಹೇರಿದ್ದ ನಿರ್ಬಂಧಗಳನ್ನು ಸಡಿಲಿಸಿ ತಾತ್ಕಾಲಿಕ ಲೈಸೆನ್ಸ್ ಅನ್ನು ತಕ್ಷಣವೇ ಜಾರಿಗೊಳಿಸಿದೆ. ಹಡಗುಗಳಿಗೆ ತುಂಬಿದ ರಷ್ಯಾದ ಡೀಸೆಲ್ ಪೂರೈಕೆಯ ಮೇಲೆ ಏಪ್ರಿಲ್ 2027ರವರೆಗೆ ಅಮೆರಿಕದ ಯಾವುದೇ ನಿರ್ಬಂಧಗಳು ಅನ್ವಯಿಸುವುದಿಲ್ಲ ಎಂದು ಅದು ಹೇಳಿದೆ.

## ಮಿನಿ ನ್ಯೂಸ್

### ಇಎಸ್ಐ ಆಸ್ಪತ್ರೆಯಲ್ಲಿ ಮಹಿಳೆಯ ಶವ ಕಚ್ಚಿ ತಿಂದ ಇಲಿಗಳು: ತನಿಖೆಗೆ ತಂಡ ರಚನೆ

**ಕೋಲ್ಕತ್ತಾ:** ಇಲ್ಲಿನ ಮಾಣಿಕ್ತಲ ಇಎಸ್‌ಐ ಆಸ್ಪತ್ರೆಯ ವೈದ್ಯಕೀಯ ಸೇವೆಗಳು ತೀವ್ರ ವಿವಾದಕ್ಕೀಡಾಗಿವೆ. ಡಯಾಲಿಸಿಸ್‌ಗಾಗಿ ದಾಖಲಾಗಿದ್ದ ಮಹಿಳೆಯೊಬ್ಬರು ಮೃತಪಟ್ಟ ನಂತರ, ಅವರ ದೇಹದ ಮೇಲೆ ಗಾಯಗಳು ಕಂಡುಬಂದಿವೆ. ಇಲಿಗಳು ಮೃತದೇಹವನ್ನು ಕಚ್ಚಿ ತಿಂದಿವೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ. ಈ ಆರೋಪಗಳ ಕುರಿತು ತನಿಖೆ ನಡೆಸಲು ಆಸ್ಪತ್ರೆಯ ಆಡಳಿತ ಮಂಡಳಿಯು 10 ಸದಸ್ಯರ ಸಮಿತಿಯನ್ನು ರಚಿಸಿದ್ದು, ಮೂರು ದಿನಗಳೊಳಗೆ ಆಸ್ಪತ್ರೆಯ ಅಧೀಕ್ಷಕರಿಗೆ ವರದಿ ಸಲ್ಲಿಸುವಂತೆ ಸೂಚಿಸಿದೆ. ಹೌರಾದ ಅಂಡುಲ್ ನಿವಾಸಿಯಾದ ಅಲ್ಪನಾ ಡೇ ಎಂಬುವರನ್ನು ಕಳೆದ ಗುರುವಾರ (ಅಕ್ಟೋಬರ್ 8) ಡಯಾಲಿಸಿಸ್‌ಗಾಗಿ ಮಾಣಿಕ್ತಲ ಇಎಸ್‌ಐ ಆಸ್ಪತ್ರೆಯ ಶಸ್ತ್ರಚಿಕಿತ್ಸಾ ವಿಭಾಗದ (ಸರ್ಜರಿ ವಾರ್ಡ್) 108ನೇ ಬೆಡ್‌ಗೆ ದಾಖಲಿಸಲಾಗಿತ್ತು. ಆದರೆ, ಅಂದು ರಾತ್ರಿ ಅವರು ಕೊನೆಯುಸಿರೆಳೆದರು. ಶುಕ್ರವಾರ (ಅಕ್ಟೋಬರ್ 9) ಬೆಳಗ್ಗೆ ಕುಟುಂಬಸ್ಥರು ಆಸ್ಪತ್ರೆಗೆ ಬಂದಾಗ ಮಹಿಳೆಯ ದೇಹದ ವಿವಿಧ ಭಾಗಗಳಲ್ಲಿ ಗಾಯಗಳಿರುವುದನ್ನು ಗಮನಿಸಿದ್ದಾರೆ. ಇಲಿಗಳು ಅವರ ದವಡೆ, ಹಣೆಯ ಭಾಗ, ಕಣ್ಣುಗಳು, ಕೈಗಳು ಮತ್ತು ಕಾಲುಗಳ ಮಾಂಸವನ್ನು ಕಚ್ಚಿ ತಿಂದಿವೆ ಎಂದು ಅವರು ಆರೋಪಿಸಿದ್ದಾರೆ. ಅಷ್ಟೇ ಅಲ್ಲದೆ, ಕೈ ಬೆರಳುಗಳ ಮಾಂಸವೂ ಕಾಣೆಯಾಗಿದೆ ಎಂದು ಕುಟುಂಬದವರು ಆರೋಪಿಸಿದ್ದಾರೆ.

### ಶಾಸಕ ವಿನಯ್ ಕುಲಕರ್ಣಿಗೆ ವಿಧಿಸಲಾದ ಶಿಕ್ಷೆಗೆ ತಡೆ ಪ್ರಶ್ನಿಸಿ ಅರ್ಜಿ; ನೋಟಿಸ್ ಜಾರಿ ಮಾಡಿದ ಸುಪ್ರೀಂ

**ನವದೆಹಲಿ:** 2016ರಲ್ಲಿ ನಡೆದ ಧಾರವಾಡ ಜಿಲ್ಲಾ ಪಂಚಾಯತ್ ಬಿಜೆಪಿ ಸದಸ್ಯ ಯೋಗೇಶ್ ಗೌಡ ಹತ್ಯೆ ಪ್ರಕರಣದಲ್ಲಿ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಅವರಿಗೆ ವಿಧಿಸಲಾಗಿದ್ದ ಶಿಕ್ಷೆಗೆ (ದೋಷಿ ಎಂದು ತೀರ್ಮಾನಿಸಿದ್ದನ್ನು) ಕರ್ನಾಟಕ ಹೈಕೋರ್ಟ್ ತಡೆ ನೀಡಿರುವುದನ್ನು ಪ್ರಶ್ನಿಸಿ ಸಲ್ಲಿಕೆಯಾದ ಅರ್ಜಿಯ ಸಂಬಂಧ ಸುಪ್ರೀಂಕೋರ್ಟ್ ನೋಟಿಸ್ ಜಾರಿ ಮಾಡಿದೆ. ನ್ಯಾಯಮೂರ್ತಿಗಳಾದ ಪ್ರಶಾಂತ್ ಕುಮಾರ್ ಮಿಶ್ರಾ ಮತ್ತು ಶ್ರೀ ಚಂದ್ರಶೇಖರ್ ಅವರಿದ್ದ ಪೀಠವು ಅರ್ಜಿಯ ವಿಚಾರಣೆ ನಡೆಸಿತು. ಅಲ್ಲದೆ, ಮುಂದಿನ ವಿಚಾರಣೆಯ ದಿನಾಂಕದೊಳಗೆ ಮೂರು ದಿನಗಳ ಅವಧಿಯಲ್ಲಿ ಪ್ರತ್ಯುತ್ತರ ಸಲ್ಲಿಸಬೇಕು ಎಂದು ನೋಟಿಸ್ ಜಾರಿ ಮಾಡಿದೆ. ಜೊತೆಗೆ, ಸಂಬಂಧಿತ ಎಲ್ಲಾ ಪ್ರಕರಣಗಳನ್ನು 27.10.2026ರಂದು ವಿಚಾರಣೆಗೆ ನಿಗದಿಪಡಿಸಬೇಕು. ಮುಂದಿನ ವಿಚಾರಣೆಯ ದಿನಾಂಕದಂದು ಮತ್ತೆ ಮುಂದೂಡಿಕೆಗೆ ಕೋರುವ ಯಾವುದೇ ಮನವಿಯನ್ನು ಪರಿಗಣಿಸಲಾಗುವುದಿಲ್ಲ ಎಂದು ಸರ್ವೋಚ್ಚ ನ್ಯಾಯಾಲಯ ತನ್ನ ಆದೇಶದಲ್ಲಿ ಸ್ಪಷ್ಟಪಡಿಸಿದೆ.

### ಮಹಾತ್ಮ ಗಾಂಧೀಜಿ ಮರಿಮೊಮ್ಮಗ ಪೊಲೀಸ್ ವಶಕ್ಕೆ

**ಮುಂಬೈ:** ಸಿಇಸಿ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಒತ್ತಾಯಿಸಿ ಕಾಕ್ರೋಚ್ ಜನತಾ ಪಾರ್ಟಿ ಜಂತರ್ ಮಂತರ್‌ನಲ್ಲಿ ನಡೆಸುತ್ತಿರುವ ಪ್ರತಿಭಟನೆಗೆ ಬೆಂಬಲ ಸೂಚಿಸಿ



ಮುಂಬೈನ ಆಗಸ್ಟ್ ಕ್ರಾಂತಿ ಮೈದಾನದಲ್ಲಿ ಪ್ರತಿಭಟನೆ ನಡೆಸಲು ಸಿದ್ಧರಾಗಿದ್ದ ತುಷಾರ್ ಗಾಂಧಿ ಮತ್ತು ಅವರ ಸಂಘಟನೆಯ ಇತರರನ್ನು ಮುಂಬೈ ಪೊಲೀಸರು ವಶಕ್ಕೆ ಪಡೆದಿದ್ದಾರೆ. ತುಷಾರ್ ಗಾಂಧಿ ಮಹಾತ್ಮ ಗಾಂಧೀಜೀಯವರ ಮರಿಮೊಮ್ಮಗ. ಅವರನ್ನು ಬಾಂದ್ರಾದಿಂದ ಡಿ.ಎನ್. ನಗರ ಪೊಲೀಸ್ ಠಾಣೆಗೆ ಕರೆದೊಯ್ಯಲಾಯಿತು ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಹಮ್ ಭಾರತ್ ಕೆ ಲೋಗ್ ಸಂಘಟನೆಯ ನೇತೃತ್ವ ವಹಿಸಿರುವ ತುಷಾರ್ ಗಾಂಧಿ ಇಂದು ಮಧ್ಯಾಹ್ನ 3:30ಕ್ಕೆ ಆಗಸ್ಟ್ ಕ್ರಾಂತಿ ಮೈದಾನದಲ್ಲಿ ನಡೆಯಲಿರುವ ಪ್ರತಿಭಟನಾ ಸಭೆಯಲ್ಲಿ ಪಾಲ್ಗೊಳ್ಳುವಂತೆ ನಾಗರಿಕರನ್ನು ಕೋರಿ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದರು. ಕಾರ್ಯಕರ್ತ ಫಿರೋಜ್ ಮಿಥಿಬೋರ್‌ವಾಲಾ ಅವರನ್ನು ನಿವಾಸದಿಂದ ವಶಕ್ಕೆ ಪಡೆದ ಪೊಲೀಸರು ಎಂಐಡಿಸಿ ಪೊಲೀಸ್ ಠಾಣೆಗೆ ಕರೆದೊಯ್ದರು. ಗಮದೇವಿ ಪೊಲೀಸ್ ಠಾಣೆ ವ್ಯಾಪ್ತಿಯನ್ನು ಕರೆ ನೀಡಲಾಗಿದ್ದ ಈ ಪ್ರತಿಭಟನಾ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಯಾವುದೇ ಅರ್ಜಿ ಸಲ್ಲಿಕೆಯಾಗಿಲ್ಲ. ಈ ಸಭೆ ಸೇರಲು ಪೊಲೀಶರು ಯಾವುದೇ ಅಧಿಕೃತ ಅನುಮತಿಯನ್ನು ನೀಡಿಲ್ಲ ಎಂದು ವಲಯ ಡಿಸಿಪಿ ರಾಗಸುಧಾ ಆರ್ ತಿಳಿಸಿದ್ದಾರೆ.

### ದೆಹಲಿ ಮೆಟ್ರೋ, ರೈಲು ಸಂಚಾರದ ಮೇಲೆ ನಿರ್ಬಂಧ: ಸುಪ್ರೀಂಗೆ ನ್ಯಾಯಾಂಗ ನಿಂದನೆ ಅರ್ಜಿ ಸಲ್ಲಿಕೆ

**ನವದೆಹಲಿ:** ದೆಹಲಿಯಲ್ಲಿ ಮೆಟ್ರೋ, ರೈಲು ಸಂಚಾರದ ಮೇಲೆ ಸಂಪೂರ್ಣ ನಿರ್ಬಂಧ ಹೇರಿದ್ದು ನ್ಯಾಯಾಂಗ ನಿಂದನೆ ಎಂದು ಆರೋಪಿಸಿ ಮುಖ್ಯ ಅರ್ಜಿದಾರ ವಕೀಲ ಶೈಲೇಂದ್ರ ಮಣಿ ತ್ರಿಪಾಠಿ ಅವರು ವಕೀಲ ಚಾಂದ್ ಖುರೇಷಿ ಅವರ ಮೂಲಕ ಅರ್ಜಿಯನ್ನು ಸಲ್ಲಿಸಿದ್ದಾರೆ. ಶುಕ್ರವಾರವಷ್ಟೇ ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ನೇತೃತ್ವದ ಪೀಠವು ಪ್ರತಿಭಟನೆ ನಿಯಂತ್ರಿಸಲು ಇಡೀ ಸಂಚಾರ ವ್ಯವಸ್ಥೆ ನಿರ್ಬಂಧಿಸುವುದು ಸರಿಯಲ್ಲ. ನೊಣ ಹೊಡೆಯಲು ಸುತ್ತಿಗೆ ಬಳಸಬೇಕೆ ಎಂದು ಮಾರ್ಮಿಕವಾಗಿ ಹೇಳಿತ್ತು. ಶನಿವಾರ ಸಿಜೆಪಿ ಪ್ರತಿಭಟನೆ ಹಿನ್ನೆಲೆಯಲ್ಲಿ ದೆಹಲಿಯ 45 ಮೆಟ್ರೋ ನಿಲ್ದಾಣಗಳು, ಹಲವು ರೈಲುಗಳನ್ನು ಸಂಪೂರ್ಣವಾಗಿ ನಿಲ್ಲಿಸಲಾಗಿದೆ. ಹೀಗಾಗಿ, ದೆಹಲಿ ಪೊಲೀಸ್, ಕೇಂದ್ರ ಸರ್ಕಾರ ಮತ್ತು ಮೆಟ್ರೋ ಅಧಿಕಾರಿಗಳ ವಿರುದ್ಧ ನ್ಯಾಯಾಂಗ ನಿಂದನೆ ಕ್ರಮ ಕೈಗೊಳ್ಳುವಂತೆ ಅರ್ಜಿಯಲ್ಲಿ ಕೋರಲಾಗಿದೆ. ಅಲ್ಲದೆ, ಮೆಟ್ರೋ ಮತ್ತು ರೈಲ್ವೆ ಕಾರ್ಯಾಚರಣೆಗಳ ಮೇಲಿನ ಸಂಪೂರ್ಣ ನಿರ್ಬಂಧಗಳನ್ನು ತಕ್ಷಣವೇ ಹಿಂಪಡೆಯುವಂತೆ ಹಾಗೂ ಹಿಂದಿನಂತೆ ಸಲೀಸಾಗಿ ಸಂಚಾರ ವ್ಯವಸ್ಥೆ ನಡೆಯುವಂತೆ ತುರ್ತಾಗಿ ಸೂಚಿಸಬೇಕು ಎಂದು ಮನವಿ ಮಾಡಲಾಗಿದೆ.

### ದೇಶವಿರೋಧಿ ಶಕ್ತಿಗಳಿಂದ ಅಶಾಂತಿ ಸೃಷ್ಟಿಗೆ ಯತ್ನ; ಪ್ರತಿಭಟನೆಯಿಂದ ದೂರವಿರಿ: ಇಮಾಮ್ ಮುಖ್ಯಸ್ಥ ಕರೆ

**ನವದೆಹಲಿ:** ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಕಾಕ್ರೋಚ್ ಜನತಾ ಪಾರ್ಟಿ(ಸಿಜೆಪಿ) ಶನಿವಾರ ಬೃಹತ್ ಪ್ರತಿಭಟನೆ ನಡೆಸುತ್ತಿದ್ದು,



ಈ ಪ್ರತಿಭಟನೆಯನ್ನು ತಡೆಯಲು ದೆಹಲಿ ಪೊಲೀಸರು ರಾಷ್ಟ್ರ ರಾಜಧಾನಿಯಲ್ಲಿ ಹಲವು ಕಠಿಣ ಕ್ರಮಗಳನ್ನು ತೆಗೆದುಕೊಂಡಿದ್ದಾರೆ. ಈ ಮಧ್ಯೆ, ಸಿಇಸಿ ವಿರುದ್ಧದ ಸಿಜೆಪಿ ನೇತೃತ್ವದ ಪ್ರತಿಭಟನೆಯಿಂದ ದೂರವಿರುವಂತೆ ಪ್ರಮುಖ ಮುಸ್ಲಿಂ ಧರ್ಮಗುರುಯೊಬ್ಬರು ತಮ್ಮ ಸಮುದಾಯದ ಜನತೆಗೆ ಕರೆ ನೀಡಿದ್ದಾರೆ. ಅಲ್ಲದೆ ಮುಸ್ಲಿಮರು ರಾಜಕೀಯ ಉದ್ದೇಶಗಳಿಗಾಗಿ ತಮ್ಮನ್ನು "ಬಳಸಿಕೊಳ್ಳುವುದಕ್ಕೆ" ಅವಕಾಶ ನೀಡಬಾರದು ಎಂದು ಎಚ್ಚರಿಸಿದ್ದಾರೆ. ಆಲ್ ಇಂಡಿಯಾ ಇಮಾಮ್ ಸಂಘದ ಮುಖ್ಯ ಇಮಾಮ್ ಉಮರ್ ಅಹ್ಮದ್ ಇಲ್ಯಾಸಿ, ಮುಸ್ಲಿಮರು, ವಿಶೇಷವಾಗಿ ಮಸೀದಿ ಇಮಾಮ್‌ಗಳು, ಪ್ರಸ್ತಾವಿತ ಪ್ರತಿಭಟನೆಗಳಿಂದ ದೂರವಿರುವಂತೆ ಮನವಿ ಮಾಡಿದ್ದಾರೆ. ಕೆಲವು ಶಕ್ತಿಗಳು "ದೇಶದಲ್ಲಿ ಶಾಂತಿಯನ್ನು ಕದಡಲು" ಪ್ರಯತ್ನಿಸುತ್ತಿವೆ ಎಂದು ಉಮರ್ ಅಹ್ಮದ್ ಇಲ್ಯಾಸಿ ಆರೋಪಿಸಿದ್ದಾರೆ.

# 8 ದಿನಕ್ಕೆ 400 ಕೋಟಿ ದಾಟಿದ ದೃಶ್ಯಂ 3



ಬಾಲಿವುಡ್ ಸೂಪರ್ ಸ್ಟಾರ್ ಅಜಯ್ ದೇವ್‌ಗನ್ ಮುಖ್ಯಭೂಮಿಕೆಯ 'ದೃಶ್ಯಂ 3: ದಿ ಕನ್ಕ್ಲೂಷನ್' ಚಿತ್ರವು ಬಾಕ್ಸ್ ಆಫೀಸ್‌ನಲ್ಲಿ ಮತ್ತೊಂದು ಪ್ರಮುಖ ಮೈಲಿಗಲ್ಲನ್ನು ತಲುಪಿದೆ. ಚಿತ್ರಮಂದಿರಗಳಲ್ಲಿ ಮೊದಲ ವಾರವನ್ನು ಯಶಸ್ವಿಯಾಗಿ ಪೂರೈಸಿದ ನಂತರ, ಈ ಕ್ರೈಮ್ ಥ್ರಿಲ್ಲರ್ ಹಿಂದಿ 'ದೃಶ್ಯಂ' ಸರಣಿಯಲ್ಲೇ ಅತಿ ಹೆಚ್ಚು ಗಳಿಕೆ ಕಂಡ ಚಿತ್ರವಾಗಿ ಹಾಗೂ ನಾಯಕ ನಟನಾಗಿ ಅಜಯ್ ದೇವಗನ್ ಅವರ ವೃತ್ತಿಜೀವನದಲ್ಲಿ ಭಾರತದಲ್ಲಿ ಎರಡನೇ ಅತಿ ಹೆಚ್ಚು ಗಳಿಕೆ (ನೆಟ್ ಕಲೆಕ್ಷನ್) ಮಾಡಿದ ಚಿತ್ರವಾಗಿ ಹೊರಹೊಮ್ಮಿದೆ. ಈ ವಾರ ಯಾವುದೇ ಹೊಸ ಹಿಂದಿ ಚಲನಚಿತ್ರಗಳು ಬಿಡುಗಡೆಯಾಗದಿರುವುದರಿಂದ, ವಾರಾಂತ್ಯದಲ್ಲಿ ಹೆಚ್ಚಿನ ಸಂಖ್ಯೆಯ ಪ್ರೇಕ್ಷಕರನ್ನು ಸೆಳೆಯುವ ಅವಕಾಶವೂ ಈ ಚಿತ್ರಕ್ಕಿದೆ.

## ಭಾರತದಲ್ಲಿ ಅತಿ ಹೆಚ್ಚು ಗಳಿಸಿದ ಅಜಯ್ ದೇವ್ ಗನ್ ನಟನೆಯ 2ನೇ ಸಿನಿಮಾ

**8ನೇ ದಿನದ ಬಾಕ್ಸ್ ಆಫೀಸ್ ಕಲೆಕ್ಷನ್** : ಸಿನಿಮಾ ಇಂಡಸ್ಟ್ರಿ ಟ್ರ್ಯಾಕರ್ ಸ್ಯಾಕ್ನಿಲ್ಕ್ ವರದಿ ಪ್ರಕಾರ, 'ದೃಶ್ಯಂ 3: ದಿ ಕನ್ಕ್ಲೂಷನ್' ಚಿತ್ರವು ಭಾರತದಲ್ಲಿ 8ನೇ ದಿನದಂದು 17.40 ಕೋಟಿ ರೂಪಾಯಿ ಕಲೆಕ್ಷನ್ ಮಾಡಿದೆ. ಈ ಪೈಕಿ, 14.50 ಕೋಟಿ ರೂಪಾಯಿ ನೆಟ್ ಕಲೆಕ್ಷನ್ ಆಗಿದೆ.

'ದೃಶ್ಯಂ 3' ಅಜಯ್ ದೇವ್ ಗನ್ ಅವರ ವೃತ್ತಿಜೀವನದಲ್ಲಿ ಎರಡನೇ ಅತಿ ಹೆಚ್ಚು ಗಳಿಕೆ ಕಂಡ ಚಿತ್ರವಾಗಿ ಹೊರಹೊಮ್ಮಿದೆ. ಬಿಡುಗಡೆಯಾದ ಮೊದಲ ವಾರದ ಅಂತ್ಯದ ವೇಳೆಗೆ ಭಾರತದಲ್ಲಿ 245 ಕೋಟಿ ರೂಪಾಯಿಗೂ ಹೆಚ್ಚು ನಿವ್ವಳ ಗಳಿಕೆಯನ್ನು ದಾಖಲಿಸುವ ಮೂಲಕ, ಈ ಚಿತ್ರವು 'ದೃಶ್ಯಂ 2' ಅನ್ನು ಹಿಂದಿಕ್ಕಿದೆ. 'ದೃಶ್ಯಂ 2' ಭಾರತದಲ್ಲಿ ಸುಮಾರು 239.67 ಕೋಟಿ ರೂಪಾಯಿ ನೆಟ್ ಕಲೆಕ್ಷನ್ ಮಾಡಿತ್ತು.

ಅಲ್ಲದೇ, ಇದು 'ಗೋಲ್‌ಮಾಲ್ ಅಗೈನ್', 'ಟೋಟಲ್ ಧಮಾಲ್', 'ಶೈತಾನ್' ಮತ್ತು 'ಸಿಂಘಂ ರಿಟರ್ನ್ಸ್' ಸೇರಿದಂತೆ ಅಜಯ್ ದೇವ್‌ಗನ್ ಅವರ ಹಲವು ಯಶಸ್ವಿ ಚಿತ್ರಗಳ ಗಳಿಕೆಯನ್ನೂ ಹಿಂದಿಕ್ಕಿದೆ.

ಅಜಯ್ ದೇವ್‌ಗನ್ ನಟನೆಯ ಇತರೆ ಪ್ರಮುಖ ಚಿತ್ರಗಳ ಪೈಕಿ, ಸುಮಾರು 279.59 ಕೋಟಿ ರೂಪಾಯಿಗಳ ಭಾರತದ ನಿವ್ವಳ ಗಳಿಕೆಯೊಂದಿಗೆ 'ತಾನ್ಹಾಜಿ: ದಿ ಅನ್‌ಸಂಗ್ ವಾರಿಯರ್' ಮುಂಚೂಣಿಯಲ್ಲಿದೆ. ಇದೀಗ ಚಿತ್ರಮಂದಿರಗಳಲ್ಲಿ ಪ್ರದರ್ಶನ ಕಾಣುತ್ತಿರುವ 'ದೃಶ್ಯಂ 3', ಆ ದಾಖಲೆಯನ್ನೂ ಪುಡಿಗಟ್ಟೋದು ಬಹುತೇಕ ಪಕ್ಕಾ ಆಗಿದೆ. ಚಿತ್ರವು ತನ್ನ ಎರಡನೇ ವಾರಾಂತ್ಯವನ್ನು ಪ್ರವೇಶಿಸಿದ್ದು, ಬಾಕ್ಸ್ ಆಫೀಸ್‌ನಲ್ಲಿ ಅಜಯ್ ಸಿನಿಮಾದೊಂದಿಗೆ ಪೈಪೋಟಿ ನಡೆಸಲು ಈ ವಾರ ಯಾವುದೇ ಹೊಸ ಹಿಂದಿ ಚಿತ್ರಗಳು ಬಿಡುಗಡೆಯಾಗಿಲ್ಲ. ಹಾಗಾಗಿ, ಗಲ್ಲಾಪೆಟ್ಟಿಗೆಯಲ್ಲಿ ಮತ್ತಷ್ಟು ಉತ್ತಮ ಗಳಿಕೆ ಮಾಡುವ ನಿರೀಕ್ಷೆಗಳಿವೆ.

**ಅಭಿಷೇಕ್ ಪಾಠಕ್ ನಿರ್ದೇಶನದ 'ದೃಶ್ಯಂ 3:** ದಿ ಕನ್ಕ್ಲೂಷನ್' ಚಿತ್ರದಲ್ಲಿ ಅಜಯ್ ದೇವ್‌ಗನ್ ಅವರು ವಿಜಯ್ ಸಾಲ್ಗಾಂಕರ್ ಪಾತ್ರದಲ್ಲಿ ನಟಿಸಿದ್ದಾರೆ. ಉಳಿದಂತೆ ಟಬು, ಶ್ರಿಯಾ ಶರಣ್, ಇಶಿತಾ ದತ್ತಾ, ಮೃಣಾಲ್ ಜಾಧವ್ ಮತ್ತು ರಜತ್ ಕಪೂರ್ ಕೂಡಾ ಕಾಣಿಸಿಕೊಂಡಿದ್ದು, ಜೈದೀಪ್ ಅಹ್ಲಾವತ್ ಮತ್ತು ಪ್ರಕಾಶ್ ರಾಜ್ ಅವರು ತಾರಾಗಣಕ್ಕೆ ಹೊಸದಾಗಿ ಸೇರ್ಪಡೆಗೊಂಡಿದ್ದಾರೆ. ಅಕ್ಟೋಬರ್ 2ರಂದು ಚಿತ್ರಮಂದಿರಗಳಲ್ಲಿ ಬಿಡುಗಡೆಯಾದ ಈ ಚಿತ್ರವು ಹಿಂದಿ 'ದೃಶ್ಯಂ' ಸರಣಿಯ ಅಂತಿಮ ಭಾಗವಾಗಿದೆ.



# ಜೈಲರ್ 2 ಅಡ್ವಾನ್ಸ್ ಟಿಕೆಟ್: ವಿದೇಶಗಳಲ್ಲಿ 1M ದಾಟಿದ ರಜನಿ, ಶಿವಣ್ಣನ ಸಿನಿಮಾ; ಕೂಲಿಯನ್ನು ಹಿಂದಿಕ್ಕಬಲ್ಲದೇ?

ರಜನಿಕಾಂತ್ ಮುಖ್ಯಭೂಮಿಕೆಯ ಜೈಲರ್ 2 ಸಿನಿಮಾದ ಮುಂಗಡ ಟಿಕೆಟ್ ಬುಕಿಂಗ್‌ಗಳು ಸಾಗರೋತ್ತರ ಪ್ರದೇಶಗಳಲ್ಲಿ ಉತ್ತಮ ಆರಂಭವನ್ನು ಕಂಡಿವೆ. ಈ ಪ್ರೀ-ಸೇಲ್ಸ್‌ನಲ್ಲಿ ಅಮೆರಿಕ ಮುಂಚೂಣಿಯಲ್ಲಿದ್ದು, ನಂತರದ ಸ್ಥಾನಗಳಲ್ಲಿ ಯುಎಇ, ಯುನೈಟೆಡ್ ಕಿಂಗ್‌ಡಮ್, ಆಸ್ಟ್ರೇಲಿಯಾ ಮತ್ತು ಪ್ರಮುಖ ಯುರೋಪಿಯನ್ ಪ್ರದೇಶಗಳಿವೆ.




ಭಾರತೀಯ ಮಾರುಕಟ್ಟೆಯಲ್ಲಿ ಮುಂಗಡ ಬುಕಿಂಗ್ ಇನ್ನೂ ಪ್ರಾರಂಭವಾಗದಿದ್ದರೂ, ಜೈಲರ್ 2 ವಿದೇಶಿ ಮಾರುಕಟ್ಟೆಗಳಲ್ಲಿ 1 ಮಿಲಿಯನ್ ಡಾಲರ್ ಗಳಿಕೆಯ ಗಡಿಯನ್ನು ದಾಟಿದೆ. ಚಿತ್ರದ ವಿತರಕರಲ್ಲೊಬ್ಬರಾದ ಶ್ಲೋಕ ಎಂಟರ್‌ಟೈನ್‌ಮೆಂಟ್ಸ್ ಪ್ರಕಾರ, ಅಮೆರಿಕದಲ್ಲಿ ಬಹುನಿರೀಕ್ಷಿತ ಚಿತ್ರದ ಮುಂಗಡ ಮಾರಾಟವು ಈಗಾಗಲೇ 6,50,000 ಡಾಲರ್‌ಗಳನ್ನು ಮೀರಿದೆ. ಈ ಚಿತ್ರವು ಇತರ ವಿದೇಶಿ ಪ್ರದೇಶಗಳಲ್ಲೂ ಉತ್ತಮ ಪ್ರದರ್ಶನ ಕಾಣುತ್ತಿದೆ.

ಶ್ಲೋಕ ಎಂಟರ್‌ಟೈನ್ಮೆಂಟ್ ಮತ್ತು ಅಹಿಂಸಾ ಎಂಟರ್‌ಟೈನ್ಮೆಂಟ್ ಉತ್ತರ ಅಮೆರಿಕ, ಯುಕೆ, ಯುರೋಪ್, ಆಫ್ರಿಕಾ, ಶ್ರೀಲಂಕಾ ಮತ್ತು ನೇಪಾಳದಾದ್ಯಂತ ಸಿನಿಮಾ ವಿತರಣೆಯನ್ನು ನಿರ್ವಹಿಸುತ್ತಿದ್ದರೆ, ಸ್ಪೇಸ್ ಬಾಕ್ಸ್ ಮೂವಿ ಜಪಾನ್, ಥೈಲ್ಯಾಂಡ್, ಇಂಡೋನೇಷ್ಯಾ, ಫಿಲಿಪೈನ್ಸ್, ಹಾಂಗ್ ಕಾಂಗ್ ಮತ್ತು ಕಾಂಬೋಡಿಯಾದಂತಹ ಪ್ರಮುಖ ಮಾರುಕಟ್ಟೆಗಳು ಸೇರಿದಂತೆ ಈಸ್ಟ್ ಏಷ್ಯಾ ಮತ್ತು ಸೌತ್‌ಈಸ್ಟ್ ಏಷ್ಯಾದಾದ್ಯಂತ ಚಿತ್ರವನ್ನು ವಿತರಿಸುತ್ತಿದೆ. ಸಿಂಗಾಪುರದಲ್ಲಿ, ಚಿತ್ರದ ಬಿಡುಗಡೆಯು ಐಮ್ಯಾಕ್ಸ್ ಪ್ರದರ್ಶನಗಳನ್ನು ಹೊಂದಿರುವ 27 ಸಿನಿಮಾ ಸ್ಥಳಗಳನ್ನು ವ್ಯಾಪಿಸಿದೆ. ಹೆಚ್ಚುವರಿಯಾಗಿ, ಯುನೈಟೆಡ್ ಸ್ಟೇಟ್ಸ್, ಯುನೈಟೆಡ್ ಅರಬ್ ಎಮಿರೇಟ್ಸ್ (ಮಿಡಲ್ ಈಸ್ಟ್), ಯುನೈಟೆಡ್ ಕಿಂಗ್‌ಡಮ್ ಮತ್ತು ಆಸ್ಟ್ರೇಲಿಯಾ ಸೇರಿದಂತೆ ಪ್ರಮುಖ ವಿದೇಶಿ ಕೇಂದ್ರಗಳಲ್ಲಿ ಈಗಾಗಲೇ ಭಾರಿ ಅಡ್ವಾನ್ಸ್ ಬುಕಿಂಗ್ಸ್ ದಾಖಲಾಗಿದೆ.

2023ರ ಆಗಸ್ಟ್‌ನಲ್ಲಿ ಬಿಡುಗಡೆಯಾದ ಜೈಲರ್‌ನ ಭರ್ಜರಿ ಯಶಸ್ಸಿನ ಹಿನ್ನೆಲೆಯಲ್ಲಿ, ಮತ್ತೊಂದು ಭಾಗದ ಮೇಲೂ ಸಾಕಷ್ಟು ನಿರೀಕ್ಷೆಗಳಿವೆ. ಈ ಆಕ್ಷನ್-ಥ್ರಿಲ್ಲರ್‌ನ ವಿದೇಶಿ ಮಾರುಕಟ್ಟೆಯಲ್ಲಿನ ಪ್ರಮುಖ ಮಾನದಂಡವನ್ನು ರಜನಿಕಾಂತ್ ಅವರ ಹಿಂದಿನ ಚಿತ್ರ ಕೂಲಿ ನಿಗದಿಪಡಿಸಿದೆ. ಹೌದು, ಈ ಚಿತ್ರವು ವಿದೇಶದಲ್ಲಿ ಸುಮಾರು 8.75 ಮಿಲಿಯನ್ ಡಾಲರ್‌ಗಳ ಆರಂಭಿಕ ಗಳಿಕೆಯನ್ನು ದಾಖಲಿಸಿತ್ತು. ಜೈಲರ್ 2 ಚಿತ್ರದ ಭವ್ಯ ಆಗಮನಕ್ಕೆ ಇನ್ನು 6 ದಿನಗಳು ಬಾಕಿ ಇರುವಾಗ, ಈ ಚಿತ್ರವು ಕೂಲಿ ನಿರ್ಮಿಸಿದ ಬಾಕ್ಸ್ ಆಫೀಸ್ ದಾಖಲೆಯನ್ನು ಮೀರಿಸಲಿದೆಯೇ ಎಂಬ ಬಗ್ಗೆ ತೀವ್ರ ಕುತೂಹಲ ಮೂಡಿಸಿದೆ.

ಸನ್ ಪಿಕ್ಚರ್ಸ್ ಬ್ಯಾನರ್ ಅಡಿಯಲ್ಲಿ ಕಲಾನಿಧಿ ಮಾರನ್ ನಿರ್ಮಿಸಿರುವ ಸಿನಿಮಾವನ್ನು, ನೆಲ್ಸನ್ ದಿಲೀಪ್‌ಕುಮಾರ್ ನಿರ್ದೇಶಿಸಿದ್ದಾರೆ. ಜೈಲರ್ 2' ಅಕ್ಟೋಬರ್ 15ರಂದು ವಿಶ್ವದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ. ಈ ಚಿತ್ರವು ಯುಎ 16+' ಪ್ರಮಾಣಪತ್ರವನ್ನು ಪಡೆದಿದ್ದು, 165 ನಿಮಿಷಗಳ ರನ್ ಟೈಮ್ ಹೊಂದಿವೆ.

2023ರ ಬ್ಲಾಕ್‌ಬಸ್ಟರ್ ಚಿತ್ರ ಜೈಲರ್'ನ ಕೇಂದ್ರ ಪಾತ್ರವಾದ ನಿವೃತ್ತ ಜೈಲರ್ ಟೈಗರ್ ಮುತ್ತುವೇಲ್ ಪಾಂಡಿಯನ್' ಆಗಿ ರಜನಿಕಾಂತ್ ಮತ್ತೆ ಬಿಗ್ ಸ್ಕ್ರೀನ್‌ನಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಕರುನಾಡ ಚಕ್ರವರ್ತಿ ಶಿವರಾಜ್‌ಕುಮಾರ್ ಕೂಡಾ ಪ್ರಮುಖ ಪಾತ್ರದಲ್ಲಿದ್ದಾರೆ. ಉಳಿದಂತೆ ಮೋಹನ್‌ಲಾಲ್, ವಿದ್ಯಾ ಬಾಲನ್, ಮಿಥುನ್ ಚಕ್ರವರ್ತಿ, ಜಾಕಿ ಶ್ರಾಫ್, ಎಸ್.ಜೆ.ಸೂರ್ಯ, ಸೂರಜ್ ವೆಂಜರಮೂಡು, ವಿಜಯ್ ಸೇತುಪತಿ ಮತ್ತು ರಮ್ಯಾ ಕೃಷ್ಣನ್ ಅವರನ್ನೊಳಗೊಂಡ ದೊಡ್ಡ ತಾರಾಗಣವಿದ್ದು, ಹೃತಿಕ್ ರೋಷನ್ ಅತಿಥಿ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ.

ತಾಂತ್ರಿಕ ವಿಭಾಗ ಗಮನಿಸೋದಾದ್ರೆ, ಅನಿರುದ್ಧ್ ರವಿಚಂದರ್ ಸಂಗೀತ ಸಂಯೋಜಿಸಿದ್ದು, ಆರ್.ನಿರ್ಮಲ್ ಸಂಕಲನ ಮತ್ತು ವಿಜಯ್ ಕಾರ್ತಿಕ್ ಕಣ್ಣನ್ ಛಾಯಾಗ್ರಹಣದ ಜವಾಬ್ದಾರಿಯನ್ನು ನಿರ್ವಹಿಸಿದ್ದಾರೆ. ಮೂಲ ತಮಿಳು ಆವೃತ್ತಿಯಲ್ಲದೇ, ಈ ಚಿತ್ರವು ಉತ್ತರ ಭಾರತದಾದ್ಯಂತ ಹಿಂದಿ ಹಾಗೂ ಆಂಧ್ರಪ್ರದೇಶ ಮತ್ತು ತೆಲಂಗಾಣದಲ್ಲಿ ತೆಲುಗು ಭಾಷೆಗಳಲ್ಲೂ ಬಿಡುಗಡೆಯಾಗಲಿದೆ.

# ನಟ ವಿಜಯ್ ದೇವರಕೊಂಡ ಹೆಸರು, ಫೋಟೋ ಅನಧಿಕೃತ ಬಳಕೆಗೆ ದೆಹಲಿ ಹೈಕೋರ್ಟ್ ತಡೆ

ದಕ್ಷಿಣ ಚಿತ್ರರಂಗದ ಖ್ಯಾತ ನಟ ವಿಜಯ್ ದೇವರಕೊಂಡ ಅವರ ಅನುಮತಿಯಿಲ್ಲದೇ ಅವರ ಹೆಸರು, ಫೋಟೋ, ಧ್ವನಿ ಮತ್ತು ವ್ಯಕ್ತಿತ್ವದ ಇತರೆ ಲಕ್ಷಣಗಳನ್ನು ಕೃತಕ ಬುದ್ಧಿಮತ್ತೆ, ಡೀಪ್‌ಫೇಕ್ ಮತ್ತು ಫೇಸ್-ಮಾರ್ಫಿಂಗ್ ತಂತ್ರಜ್ಞಾನದ ಮೂಲಕ ಅನಧಿಕೃತವಾಗಿ ಬಳಸುವುದನ್ನು ದೆಹಲಿ ಹೈಕೋರ್ಟ್ ತಡೆ ನೀಡಿದೆ.



ನ್ಯಾಯಮೂರ್ತಿ ವಿಕಾಸ್ ಮಹಾಜನ್ ಅವರು ಮೆಟಾ, ಗೂಗಲ್ ಮತ್ತು ಎಕ್ಸ್‌ನಂತಹ ಸಾಮಾಜಿಕ ಜಾಲತಾಣ ವೇದಿಕೆಗಳಿಗೆ, ನಟನ ವ್ಯಕ್ತಿತ್ವವನ್ನು ದುರುಪಯೋಗಪಡಿಸಿಕೊಳ್ಳುವ ಅಥವಾ ಅನುಕರಿ ಸುವಂತಿರುವ ವಿಡಿಯೋಗಳು, ರೀಲ್ಸ್, ಪೋಸ್ಟ್, ಖಾತೆಗಳನ್ನು ಒಳಗೊಂಡಂತೆ ಅವರು ಗುರುತಿಸಿದ ಕಂಟೆಂಟ್‌ಗಳನ್ನು ತೆಗೆದುಹಾಕಲು ಮತ್ತು ಶಾಶ್ವತವಾಗಿ ಡಿಲಿಟ್ ಮಾಡಲು ನಿರ್ದೇಶನ ನೀಡಿದರು. ಆದೇಶದ ಪ್ರತಿಯನ್ನು ಸ್ವೀಕರಿಸಿದ 72 ಗಂಟೆಗಳ ಒಳಗೆ, ಹಕ್ಕುಸ್ವಾಮ್ಯ ಉಲ್ಲಂಘನೆಗೆ ಕಾರಣವಾಗಿದೆ ಎಂದು ಗುರುತಿಸಲಾದ ಲಿಂಕ್‌ಗಳನ್ನು ತೆಗೆದುಹಾಕುವಂತೆ ನ್ಯಾಯಾಲಯವು ಆನ್‌ಲೈನ್ ವೇದಿಕೆಗಳಿಗೆ ನಿರ್ದೇಶನ ನೀಡಿತು. ಅದೇ ಅವಧಿಯಲ್ಲಿ ನಿರ್ದಿಷ್ಟ ಡೊಮೇನ್‌ಗಳನ್ನು ಲಾಕ್ ಮಾಡಲು ಮತ್ತು ಅಮಾನತುಗೊಳಿಸಲು ಡೊಮೇನ್ ನೇಮ್ ರಿಜಿಸ್ಟ್ರಾರ್‌ಗಳಿಗೂ ಸೂಚನೆ ನೀಡಲಾಯಿತು. ಆದೇಶದ ಪ್ರತಿಯನ್ನು ಸ್ವೀಕರಿಸಿದ 72 ಗಂಟೆಯೊಳಗೆ, ಪಟ್ಟಿ ಮಾಡಲಾದ ವೆಬ್‌ಸೈಟ್‌ಗಳಿಗೆ ಪ್ರವೇಶವನ್ನು ತಡೆಯಲು ಇಂಟರ್ನೆಟ್ ಮತ್ತು ಟೆಲಿಕಾಂ ಸೇವಾ ಪೂರೈಕೆದಾರರಿಗೆ ನೋಟಿಫಿ ಕೇಶನ್‌ಗಳನ್ನು ಹೊರಡಿಸುವಂತೆ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಹಾಗೂ ದೂರಸಂಪರ್ಕ ಇಲಾಖೆಗೆ ಸೂಚಿ ಸಲಾಯಿತು. ಆದೇಶದಲ್ಲಿ ನಿರ್ದಿಷ್ಟಪ ಡಿಸಿದಂ ತೆ, ಸಂಬಂಧಪಟ್ಟ ಸಂಸ್ಥೆಗಳು ಎರಡು ವಾರಗಳೊಳಗೆ ಅನುಸರಣಾ ಪ್ರಮಾಣಪತ್ರಗಳನ್ನು ಸಲ್ಲಿಸು ವಂತೆ ನ್ಯಾಯಾಲಯವು ನಿರ್ದೇಶಿಸಿತು. ನಟನ ವರ್ಚಸ್ಸು ಮತ್ತು ವ್ಯಕ್ತಿತ್ವಕ್ಕೆ ಹಾನಿಯಾಗುವ ಆತಂಕವು ವಾಸ್ತವಿಕವೆಂದು ತೋರುತ್ತಿದೆ ಹಾಗೂ ಆ ಹಾನಿಯನ್ನು ಕೇವಲ ಹಣಕಾಸಿನ ಪರಿಹಾರದ ಮೂಲಕ ಸಮರ್ಪಕವಾಗಿ ಸರಿದೂಗಿಸಲು ಸಾಧ್ಯವಾಗದಿರಬಹುದು ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿತು.

# "ಅಪಾಯದಲ್ಲಿ ಬೌಲರ್‌ಗಳ ವೃತ್ತಿಜೀವನ"; ಪಿಚ್ ಬಗ್ಗೆ ಕೋಚ್ ಗಂಭೀರ್ ಅಸಮಾಧಾನ

ಶುಕ್ರವಾರ ನಡೆದಿದ್ದ ಭಾರತ ಮತ್ತು ವೆಸ್ಟ್ ಇಂಡೀಸ್ ನಡುವಿನ ಎರಡನೇ ಟಿ20 ಪಂದ್ಯದಲ್ಲಿ 501 ರನ್‌ಗಳು ದಾಖಲಾದವು. ಇದು ಟಿ20 ಅಂತರಾಷ್ಟ್ರೀಯ ಕ್ರಿಕೆಟ್ ಪಂದ್ಯವೊಂದರಲ್ಲಿ ದಾಖಲಾದ ಎರಡನೇ ಅತಿ ಹೆಚ್ಚು ರನ್ ಆಗಿದೆ. ಆದಾಗ್ಯೂ, ಇಂತಹ ಹೈಸ್ಕೋರ್ ಪಂದ್ಯಗಳಿಗಾಗಿ ನಿರ್ಮಿಸಲಾಗುತ್ತಿರುವ ಪಿಚ್‌ಗಳ ಬಗ್ಗೆ ಸಾಕಷ್ಟು ಟೀಕೆಗಳು ವ್ಯಕ್ತವಾಗುತ್ತಿವೆ. ಬ್ಯಾಟಿಂಗ್‌ಗೆ ಹೆಚ್ಚು ಅನುಕೂಲಕರವಾದ ಪಿಚ್‌ಗಳು ಕ್ರಿಕೆಟ್ ಆಟದ ನೈಜ ಸ್ವರೂಪವನ್ನೇ ಕಸಿದುಕೊಳ್ಳುತ್ತಿವೆ ಎಂಬುದು ಕ್ರಿಕೆಟ್ ಪ್ರಿಯರ ಅಭಿಪ್ರಾಯವಾಗಿದೆ.



ಇದರ ನಡುವೆಯೆ ಇದೇ ವಿಷಯಕ್ಕೆ ಸಂಬಂಧಿಸಿದಂತೆ ಟೀಮ್ ಇಂಡಿಯಾ ಮುಖ್ಯ ಕೋಚ್ ಗೌತಮ್ ಗಂಭೀರ್ ಸಹ ಪ್ರಮುಖ ಹೇಳಿಕೆ ನೀಡಿದ್ದಾರೆ. ಈ ರೀತಿಯ ಪಿಚ್‌ಗಳು ಬೌಲರ್‌ಗಳ ವೃತ್ತಿಜೀವನಕ್ಕೆ ಅಪಾಯ ಎಂದು ಹೇಳುವ ಮೂಲಕ ಅಸಮಾಧಾನ ಹೊರಹಾಕಿದ್ದಾರೆ.

ಪಂದ್ಯದ ನಂತರ ಮಾತನಾಡಿದ ಗಂಭೀರ್, "ಬ್ಯಾಟ್ ಮತ್ತು ಚೆಂಡಿನ ನಡುವೆ ಸಮಾನವಾದ ಪೈಪೋಟಿ ಇರಬೇಕೆಂದು ನಾವೆಲ್ಲರೂ ಬಯಸುತ್ತೇವೆ. ಆದರೆ, ಪ್ರಸ್ತುತ ಪರಿಸ್ಥಿತಿಗಳು ಬೌಲರ್‌ಗಳ ವೃತ್ತಿಜೀವನವನ್ನು ಅಪಾಯಕ್ಕೆ ಸಿಲುಕಿಸುತ್ತಿವೆ. ಈ ಮಟ್ಟಕ್ಕೆ ತಲುಪಲು ಬೌಲರ್‌ಗಳು ಅಪಾರ ಶ್ರಮವಹಿಸಿರುತ್ತಾರೆ, ಆದರೆ ಬ್ಯಾಟಿಂಗ್ ಸ್ನೇಹಿ ಪಿಚ್‌ಗಳಿಂದಾಗಿ ಆ ಎಲ್ಲಾ ಶ್ರಮ ವ್ಯರ್ಥವಾಗುತ್ತವೆ. ಬ್ಯಾಟ್ ಮತ್ತು ಚೆಂಡಿನ ನಡುವೆ ಸಮತೋಲಿತ ಪೈಪೋಟಿ ಇದ್ದಾಗ ಮಾತ್ರ ನಾವು ಕ್ರಿಕೆಟ್‌ನ ಅತ್ಯುತ್ತಮ ಆಟವನ್ನು ಕಾಣಲು ಸಾಧ್ಯ," ಎಂದು ಹೇಳಿದ್ದಾರೆ.

ಇದಕ್ಕೂ ಮುನ್ನ ಭಾರತ ಮತ್ತು ವೆಸ್ಟ್ ಇಂಡೀಸ್ ನಡುವಿನ ಏಕದಿನ ಪಂದ್ಯವೊಂದರಲ್ಲಿ 800ಕ್ಕೂ ಹೆಚ್ಚು ರನ್‌ಗಳು ರನ್‌ಗಳು ದಾಖಲಾದಾಗಲೂ ಗಂಭೀರ್ ಇದೇ ರೀತಿಯ ಅಭಿಪ್ರಾಯ ವ್ಯಕ್ತಪಡಿಸಿದ್ದರು. ದಾಖಲೆಗಳ ದೃಷ್ಟಿಯಿಂದ ಈ ಪಂದ್ಯ ಅದ್ಭುತವಾಗಿ ಕಂಡಿರಬಹುದು ಹಾಗೂ ವೀಕ್ಷಕರು ಮತ್ತು ಪ್ರಸಾರಕರಿಗೆ ಆಕರ್ಷಕವಾಗಿರಬಹುದು, ಆದರೆ ಒಬ್ಬ ಕ್ರಿಕೆಟ್ ಅಭಿಮಾನಿ ಮತ್ತು ಕೋಚ್ ಆಗಿ ತಮಗೆ ಆ ಪಂದ್ಯ ಖುಷಿಯನ್ನು ನೀಡಲಿಲ್ಲ. ಅದು ಕೇವಲ ಬ್ಯಾಟಿಂಗ್ ಪ್ರದರ್ಶನವಾಗಿತ್ತೇ ಹೊರತು, ನಿಜವಾದ ಕ್ರಿಕೆಟ್ ಆಟವಾಗಿರಲಿಲ್ಲ ಎಂದು ಅವರು ಅಭಿಪ್ರಾಯಪಟ್ಟಿದ್ದರು.

ಇದೇ ಸಂದರ್ಭದಲ್ಲಿ, ಗಂಭೀರ್ ವೆಸ್ಟ್ ಇಂಡೀಸ್ ಬೌಲರ್ ರೋಸ್ಟನ್ ಚೇಸ್ ಅವರನ್ನು ಶ್ಲಾಘಿಸಿದರು. "ಒಂದೇ ಲೈನ್ ಮತ್ತು ಲೆಂತ್‌ನಲ್ಲಿ ನಿರಂತರವಾಗಿ ಬೌಲಿಂಗ್ ಮಾಡಿದರೆ, ಬ್ಯಾಟರ್‌ಗಳು ಕ್ರೀಸ್‌ನಲ್ಲಿ ನೆಲೆಗೊಳ್ಳಲು ಅನುಕೂಲವಾಗುತ್ತದೆ. ಪರಿಸ್ಥಿತಿಗೆ ಅನುಗುಣವಾಗಿ ಬೌಲಿಂಗ್ ಶೈಲಿಯಲ್ಲಿ ಬದಲಾವಣೆ ಮಾಡಿಕೊಳ್ಳುವುದು ಅಗತ್ಯ. ಈ ಪಂದ್ಯದಲ್ಲಿ ರೋಸ್ಟನ್ ಅದನ್ನೇ ಮಾಡಿದರು. ಮಧ್ಯಮ ಓವರ್‌ಗಳಲ್ಲಿ ಅಭಿಷೇಕ್ ಶರ್ಮಾ, ಇಶಾನ್ ಕಿಶನ್ ಮತ್ತು ಶಿವಂ ದುಬೆ ಅವರನ್ನು ಔಟ್ ಮಾಡುವ ಮೂಲಕ ಅವರು ಭಾರತದ ರನ್ ಗಳಿಕೆಯ ವೇಗವನ್ನು ತಗ್ಗಿಸಿದರು," ಎಂದು ಹೇಳಿದರು. ರೋಸ್ಟನ್ 24 ರನ್‌ಗಳಿಗೆ 3 ವಿಕೆಟ್ ಪಡೆದು ಮಿಂಚಿದರು.

**ಯಾರನ್ನೂ ದೂಷಿಸುವಂತಿಲ್ಲ!**

ಟೀಮ್ ಇಂಡಿಯಾದ ಸೋಲಿಗೆ ಪ್ರತಿಕ್ರಿಯಿಸಿದ ಗಂಭೀರ್, "ಇಲ್ಲಿ ನಾನು ಯಾರನ್ನೂ ದೂಷಿಸಲು ಸಾಧ್ಯವಿಲ್ಲ. 250 ರನ್‌ಗಳ ಗುರಿಯನ್ನು ರಕ್ಷಿಸಿಕೊಳ್ಳುವಾಗ ಸಹಜವಾಗಿಯೇ ಗೆಲುವಿನ ನಿರೀಕ್ಷೆ ಇರುತ್ತದೆ. ಆದಾಗ್ಯೂ, ವೆಸ್ಟ್ ಇಂಡೀಸ್‌ನಂತಹ ಅಪಾಯಕಾರಿ ತಂಡದ ವಿರುದ್ಧ ಆಡುವಾಗ, ಗಳಿಸಿದ ಮೊತ್ತವನ್ನು ರಕ್ಷಿಸಿಕೊಳ್ಳಲು ನಾವು ಹೊಸ ತಂತ್ರಗಳನ್ನು ಕಂಡುಕೊಳ್ಳಬೇಕಾದ ಅಗತ್ಯವಿದೆ ಎಂಬುದನ್ನು ಈ ಪಂದ್ಯ ನಮಗೆ ಕಲಿಸಿಕೊಟ್ಟಿದೆ," ಎಂದು ಹೇಳಿದರು.

ಏತನ್ಮಧ್ಯೆ, ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಟೀಮ್ ಇಂಡಿಯಾ 20 ಓವರ್‌ಗಳಲ್ಲಿ 249 ರನ್ ಗಳಿಸಿತು. ಈ ಗುರಿಯನ್ನು ಬೆನ್ನಟ್ಟಿದ ವೆಸ್ಟ್ ಇಂಡೀಸ್ 252 ರನ್ ಗಳಿಸಿ, ಒಂಬತ್ತು ಎಸೆತಗಳು ಬಾಕಿ ಇರುವಂತೆಯೇ ಗೆಲುವು ಸಾಧಿಸಿತು. ಉಭಯ ತಂಡಗಳು ನಡುವಿನ ಮೂರನೇ ಪಂದ್ಯ ಭಾನುವಾರ (ಅ.11) ಇಂದೋರ್‌ನ ಹೋಳ್ಕರ್ ಕ್ರೀಡಾಂಗಣದಲ್ಲಿ ನಡೆಯಲಿದೆ.

# 9 ವರ್ಷಗಳ ಬಳಿಕ ಶತಕ ಸಿಡಿಸಿದ ಆಸ್ಟ್ರೇಲಿಯಾ ಬ್ಯಾಟರ್!

ದಕ್ಷಿಣ ಆಫ್ರಿಕಾ ವಿರುದ್ಧ ಡರ್ಬನ್‌ನಲ್ಲಿ ನಡೆಯುತ್ತಿರುವ ಟೆಸ್ಟ್ ಪಂದ್ಯದಲ್ಲಿ ಆಸ್ಟ್ರೇಲಿಯಾದ ಬ್ಯಾಟರ್ ಮ್ಯಾಟ್ ರೆನ್‌ಶಾ ಭರ್ಜರಿ ಪ್ರದರ್ಶನ ನೀಡಿದ್ದಾರೆ. ಅದ್ಭುತ ಬ್ಯಾಟಿಂಗ್ ಮೂಲಕ ಅವರು ತಮ್ಮ ಟೆಸ್ಟ್ ವೃತ್ತಿಜೀವನದ ಎರಡನೇ ಶತಕ ಗಳಿಸಿದ್ದಾರೆ. ಅಚ್ಚರಿ ಎಂದರೆ ಅವರು ಜನವರಿ 2017ರಲ್ಲಿ ತಮ್ಮ ಮೊದಲ ಟೆಸ್ಟ್ ಶತಕ ಗಳಿಸಿದ್ದರು, ನಂತರ ಅವರಿಗೆ ಶತಕ ಸಿಡಿಸಲು ಸಾಧ್ಯವಾಗಿರಲಿಲ್ಲ. ಇದೀಗ ತಮ್ಮ ಶತಕದ ಬರವನ್ನು ಕೊನೆಗೊಳಿಸಿದ್ದಾರೆ.




**ಪಾಕಿಸ್ತಾನ ವಿರುದ್ಧ ಮೊದಲ ಶತಕ ಗಳಿಸಿದ್ದ ರೆನ್‌ಶಾ**

ಈ ಶತಕವು ಮ್ಯಾಟ್ ರೆನ್‌ಶಾ ಅವರಿಗೆ ಬಹಳ ವಿಶೇಷವಾಗಿದೆ, ಏಕೆಂದರೆ ಇದು ಸುಮಾರು ಒಂಬತ್ತು ವರ್ಷಗಳ ಕಾಯುವಿಕೆಯ ನಂತರ ಅವರ ಮೊದಲ ಟೆಸ್ಟ್ ಶತಕವಾಗಿದೆ. ಅವರು ಈ ಹಿಂದೆ ಜನವರಿ 2017ರಲ್ಲಿ ಸಿಡ್ನಿಯಲ್ಲಿ ಪಾಕಿಸ್ತಾನ ವಿರುದ್ಧ 184 ರನ್ ಗಳಿಸಿದ್ದರು. ಅಲ್ಲದೆ, ಈ ಶತಕವು ಹಲವಾರು ವಿಧಗಳಲ್ಲಿ ಐತಿಹಾಸಿಕವಾಗಿದೆ. 2014ರ ನಂತರ ದಕ್ಷಿಣ ಆಫ್ರಿಕಾದಲ್ಲಿ ಆಸ್ಟ್ರೇಲಿಯಾದ ಬ್ಯಾಟ್ಸ್‌ಮನ್ ಗಳಿಸಿದ ಮೊದಲ ಶತಕವೂ ಇದಾಗಿದೆ ಮತ್ತು 2009ರ ನಂತರ ಡರ್ಬನ್‌ನ ಕಿಂಗ್ಸ್‌ಮೀಡ್‌ನಲ್ಲಿ ಆಸ್ಟ್ರೇಲಿಯಾದ ಬ್ಯಾಟ್ಸ್‌ಮನ್ ಗಳಿಸಿದ ಮೊದಲ ಶತಕವೂ ಇದು.

**ರೆನ್‌ಶಾ 2016 ರಲ್ಲಿ ಟೆಸ್ಟ್ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿದರು**

ಮ್ಯಾಟ್ ರೆನ್‌ಶಾ ಅವರ ಕ್ರಿಕೆಟ್ ವೃತ್ತಿಜೀವನದ ಬಗ್ಗೆ ಹೇಳುವುದಾದರೆ, ಅವರು 2016 ರಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಟೆಸ್ಟ್ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿದರು. ಇಲ್ಲಿಯವರೆಗೆ ಒಟ್ಟು 16 ಟೆಸ್ಟ್ ಪಂದ್ಯಗಳನ್ನು ಆಡಿದ್ದಾರೆ, 26 ಇನ್ನಿಂಗ್ಸ್‌ಗಳಲ್ಲಿ ಎರಡು ಶತಕಗಳು ಮತ್ತು ಮೂರು ಅರ್ಧಶತಕಗಳು ಸೇರಿದಂತೆ 750 ರನ್ ಗಳಿಸಿದ್ದಾರೆ. ಅವರು ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿಯೂ ಅಸಾಧಾರಣ ಪ್ರದರ್ಶನ ನೀಡಿದ್ದಾರೆ, 8,200 ಕ್ಕೂ ಹೆಚ್ಚು ರನ್‌ಗಳನ್ನು ಗಳಿಸಿದ್ದಾರೆ. ಈ ಅವಧಿಯಲ್ಲಿ, ಅವರು 27 ಶತಕಗಳು ಮತ್ತು 24 ಅರ್ಧಶತಕಗಳನ್ನು ಗಳಿಸಿದ್ದಾರೆ, ಅವರ ಅತ್ಯಧಿಕ ಸ್ಕೋರ್ 200 ರನ್ ಆಗಿದೆ.

**ಆಸ್ಟ್ರೇಲಿಯಾಗೆ ಆಸರೆಯಾದ ರೆನ್‌ಶಾ**

ಈ ಟೆಸ್ಟ್ ಪಂದ್ಯದ ಬಗ್ಗೆ ಹೇಳುವುದಾದರೆ, ಆಸ್ಟ್ರೇಲಿಯಾ ಕೇವಲ 84 ರನ್‌ಗಳಿಗೆ ಮೂರು ವಿಕೆಟ್‌ಗಳನ್ನು ಕಳೆದುಕೊಂಡು ಭಾರಿ ಸಂಕಷ್ಟಕ್ಕೆ ಸಿಲುಕಿತ್ತು. ಈ ವೇಳೆ ಬ್ಯಾಟಿಂಗ್‌ಗೆ ಆಗಮಿಸಿದ ಮ್ಯಾಟ್ ರೆನ್‌ಶಾ ದಕ್ಷಿಣ ಆಫ್ರಿಕಾದ ಬೌಲರ್‌ಗಳನ್ನು ಎದುರಿಸಿ 117 ಎಸೆತಗಳಲ್ಲಿ ಅರ್ಧಶತಕವನ್ನು ತಲುಪಿದರು. ಎರಡನೇ ದಿನದವಾದ ಶನಿವಾರ ಮೊದಲ ಅವಧಿಯಲ್ಲಿ ಶತಕವನ್ನು ಪೂರ್ಣಗೊಳಿಸಿದರು. ಅವರ ತಾಳ್ಮೆಯ ಆಟ ಮತ್ತು ಬಲಿಷ್ಠ ಇನ್ನಿಂಗ್ಸ್ ಆಸ್ಟ್ರೇಲಿಯಾ 300 ರನ್‌ಗಳ ಗಡಿ ತಲುಪಲು ಸಹಾಯ ಮಾಡಿತು.

# ಟಿ20 ಕ್ರಿಕೆಟ್‌ನಲ್ಲಿ ವಿರಾಟ್ ಕೊಹ್ಲಿಯನ್ನು ಹಿಂದಿಕ್ಕಿದ ತಿಲಕ್ ವರ್ಮಾ!

ಭಾರತ ಮತ್ತು ವೆಸ್ಟ್ ಇಂಡೀಸ್ ತಂಡಗಳು ಪ್ರಸ್ತುತ 5 ಪಂದ್ಯಗಳ ಟಿ20 ಸರಣಿಯನ್ನು ಆಡುತ್ತಿವೆ. ಈಗಾಗಲೇ ಎರಡು ಪಂದ್ಯಗಳು ಮುಕ್ತಾಯಗೊಂಡಿವೆ. ಮೊದಲ ಪಂದ್ಯವನ್ನು ಭಾರತ ಗೆದ್ದುಕೊಂಡಿದ್ದರೆ, ನಿನ್ನೆ ನಡೆದಿದ್ದ ಎರಡನೇ ಪಂದ್ಯವನ್ನು ವೆಸ್ಟ್ ಇಂಡೀಸ್ ಗೆದ್ದುಕೊಂಡಿತು. ಭಾರತ ನೀಡಿದ್ದ 250 ರನ್‌ಗಳ ಬೃಹತ್ ಗುರಿಯನ್ನು ಬೆನ್ನತ್ತಿದ ಕೆರೆಬಿಯನ್ ಪಡೆ 9 ಎಸೆತಗಳು ಬಾಕಿ ಇರುವಾಗಲೆ ಜಯಭೇರಿ ಬಾರಿಸಿತು.

ಟೀಮ್ ಇಂಡಿಯಾ ಈ ಪಂದ್ಯ ಸೋಲಿನ ಹೊರತಾಗಿಯೂ ತಿಲಕ್ ವರ್ಮಾ ಪ್ರಮುಖ ಮೈಲಿಗಲ್ಲು ತಲುಪಿದ್ದಾರೆ. ಉಪನಾಯಕ ತಿಲಕ್ ಇತ್ತೀಚೆಗೆ ಟಿ20 ಸ್ವರೂಪದಲ್ಲಿ ಭರ್ಜರಿ ಬ್ಯಾಟಿಂಗ್ ಪ್ರದರ್ಶನ ನೀಡುತ್ತಿದ್ದಾರೆ. ನಿನ್ನೆಯ ಪಂದ್ಯದಲ್ಲೂ ಶರವೇಗದಲ್ಲಿ ಬ್ಯಾಟಿಂಗ್ ಮಾಡಿ ಅಜೇಯವಾಗಿ 44 ರನ್‌ಗಳಿಸಿದರು ಇದರೊಂದಿಗೆ ಅವರು ಟಿ20 ಕ್ರಿಕೆಟ್‌ನಲ್ಲಿ ಬೇರೆ ಯಾವುದೇ ಆಟಗಾರ ಸಾಧಿಸಲಾಗದ ಸಾಧನೆ ಮಾಡಿದ್ದಾರೆ. ಈ ತ್ವರಿತ ಇನ್ನಿಂಗ್ಸ್‌ನೊಂದಿಗೆ, ತಿಲಕ್ ವರ್ಮಾ ಟಿ20 ಕ್ರಿಕೆಟ್‌ನಲ್ಲಿ ತಮ್ಮ 5000 ರನ್‌ಗಳನ್ನು ಪೂರ್ಣಗೊಳಿಸಿದರು. 40 ಕ್ಕಿಂತ ಹೆಚ್ಚಿನ ಸರಾಸರಿ ಮತ್ತು 140 ಪ್ಲಸ್ ಸ್ಟ್ರೈಕ್ ರೇಟ್‌ನೊಂದಿಗೆ ಈ ಮೈಲಿಗಲ್ಲನ್ನು ತಲುಪಿದ ಮೊದಲ ಆಟಗಾರ ಎಂಬ ದಾಖಲೆಯನ್ನು ಬರೆದರು.

ಇದಲ್ಲದೆ ತಿಲಕ್ ವರ್ಮಾ ತಮ್ಮ 175ನೇ ಪಂದ್ಯದಲ್ಲಿ ಟಿ20 ಕ್ರಿಕೆಟ್‌ನಲ್ಲಿ 5000 ರನ್‌ಗಳನ್ನು ಪೂರ್ಣಗೊಳಿಸಿದರು, ಇನ್ನಿಂಗ್ಸ್ ವಿಷಯದಲ್ಲಿ ಅವರು 166 ಇನ್ನಿಂಗ್ಸ್‌ಗಳಲ್ಲಿ 41.57ರ ಸರಾಸರಿಯಲ್ಲಿ 5031 ರನ್‌ಗಳನ್ನು ಗಳಿಸಿದ್ದಾರೆ. ಇದರಲ್ಲಿ ಅವರು 5 ಶತಕಗಳು ಮತ್ತು 30 ಅರ್ಧಶತಕಗಳು ಸೇರಿವೆ. ಈ ಅವಧಿಯಲ್ಲಿ ತಿಲಕ್ ವರ್ಮಾ ಅವರ ಸ್ಟ್ರೈಕ್ ರೇಟ್ ಬಗ್ಗೆ 145.36 ಆಗಿದೆ.

**ಕೊಹ್ಲಿಯನ್ನು ಹಿಂದಿಕ್ಕಿದ ತಿಲಕ್**

ಟಿ20 ಕ್ರಿಕೆಟ್‌ನಲ್ಲಿ ಅತಿ ಕಡಿಮೆ ಇನ್ನಿಂಗ್ಸ್‌ಗಳಲ್ಲಿ 5000 ರನ್‌ಗಳನ್ನು ಪೂರೈಸಿದ ವಿಷಯದಲ್ಲಿ ತಿಲಕ್ ವರ್ಮಾ ವಿರಾಟ್ ಕೊಹ್ಲಿಯನ್ನು ಹಿಂದಿಕ್ಕಿದ್ದಾರೆ. ಈ ವಿಷಯದಲ್ಲಿ ಅವರು 5ನೇ ಆಟಗಾರ ಎಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದಾರೆ. ತಿಲಕ್ ವರ್ಮಾ 166ನೇ ಇನ್ನಿಂಗ್ಸ್‌ಗಳಲ್ಲಿ 5000 ರನ್‌ಗಳನ್ನು ಪೂರೈಸಿದರೆ, ವಿರಾಟ್ ಕೊಹ್ಲಿ ಅವರಿಗಿಂತ ಒಂದು ಇನ್ನಿಂಗ್ಸ್ ಹೆಚ್ಚು ಅಂದರೆ 167 ಇನ್ನಿಂಗ್ಸ್‌ಗಳಲ್ಲಿ ಟಿ20 ಕ್ರಿಕೆಟ್‌ನಲ್ಲಿ ಈ ಸಾಧನೆ ಮಾಡಿದ್ದಾರೆ. 143 ಇನ್ನಿಂಗ್ಸ್‌ಗಳಲ್ಲಿ 5000 ರನ್‌ಗಳನ್ನು ಪೂರೈಸಿದ ಕನ್ನಡಿಗ ಕೆಎಲ್ ರಾಹುಲ್ ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದ್ದಾರೆ.

## ಟಿ20 ಕ್ರಿಕೆಟ್‌ನಲ್ಲಿ ಕಡಿಮೆ ಇನ್ನಿಂಗ್ಸ್‌ನಲ್ಲಿ 5000 ರನ್ ಪೂರ್ಣಗೊಳಿಸಿದ ಭಾರತೀಯ ಆಟಗಾರರು

**ಕೆಎಲ್ ರಾಹುಲ್ – 143 ಇನ್ನಿಂಗ್ಸ್**
**ರುತುರಾಜ್ ಗಾಯಕ್ವಾಡ್ – 145 ಇನ್ನಿಂಗ್ಸ್**
**ಶುಭಮನ್ ಗಿಲ್ – 154 ಇನ್ನಿಂಗ್ಸ್**
**ಅಭಿಷೇಕ್ ಶರ್ಮಾ – 165 ಇನ್ನಿಂಗ್ಸ್**
**ತಿಲಕ್ ವರ್ಮಾ – 166 ಇನ್ನಿಂಗ್ಸ್**
**ವಿರಾಟ್ ಕೊಹ್ಲಿ – 167 ಇನ್ನಿಂಗ್ಸ್**




Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper. udayavahini.in www.udayavahini.in Udaya vahini news Udaya vahini news